05 June 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ವಾದದಲ್ಲಿ ಗೆದ್ದವನು ಜೀವನದ ಪಯಣದಲಿ ಸೋಲುತ್ತಾನೆ, ವಾದದಲ್ಲಿ ಸೋತವನು ಬದುಕಿನ ಪಥದಲ್ಲಿ ಗೆದೆಯುತ್ತಾನೆ!

ಸ್ನೇಹಾ ಆನಂದ್!

info.varthaman@gmail.com



ರಾಮನಗರ: 20ರಿಂದ ವಿಶೇಷ ಸಮಗ್ರ ಪರಿಷ್ಕರಣೆ ಪುಟ ಸಂ. 2



ಎಸ್.ಪಿ.ಬಾಲಸುಬ್ರಮಣ್ಯಂ ಹುಟ್ಟುಹಬ್ಬ ಆಚರಣೆ ಅರ್ಥಪೂರ್ಣ ಪುಟ ಸಂ. 3



ಜು.11ರಂದು ರಾಷ್ಟ್ರೀಯ ಲೋಕ್ ಅದಾಲತ್ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 189 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ರಾಜಕೀಯ ಒತ್ತಡಕ್ಕೆ ಮಣಿಯಬೇಡಿ

## ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಿದ ಮುಖ್ಯಮಂತ್ರಿ ಡಿಕೆಶಿ

**ಬೆಂಗಳೂರು:** ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ವಹಿಸಿ ಕೊಂಡ ಮರುದಿನವೇ ಹಿರಿಯ ಅಧಿಕಾರಿ ಗಳ ಸಭೆ ನಡೆಸುವ ಮೂಲಕ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಿದ್ದಾರೆ.

ವಿಧಾನಸೌಧದಲ್ಲಿ ಗುರುವಾರ ರಾಜ್ಯದ ಹಿರಿಯ ಐಎಎಸ್ ಮತ್ತು ಐಪಿಎಸ್ ಅಧಿ ಕಾರಿಗಳ ಮಹತ್ವದ ಜಂಟಿ ಸಭೆ ನಡೆಸಿ ದರು. ಸುಗಮ ಆಡಳಿತಕ್ಕೆ ಸರ್ಕಾರಿ ಅಧಿ ಕಾರಿಗಳೇ ಬೆನ್ನೆಲುಬು. ಯಾವುದೇ ಕಾರ ಣಕ್ಕೂ ಯಾರ ಒತ್ತಡಕ್ಕೂ ಮಣಿಯದೇ ಕೆಲಸ ಮಾಡಬೇಕೆಂದು ಸೂಚಿಸಿದರು. ಯಾವುದೇ ರಾಜಕೀಯ ಅಥವಾ ಬಾಹ್ಯ ಒತ್ತಡಗಳಿಗೆ ಮಣಿಯದೆ ಮುಕ್ತವಾಗಿ ಕೆಲಸ ಮಾಡಿ ಎಂದು ಅಧಿಕಾರಿಗಳಿಗೆ ಮುಕ್ತ ಸ್ವಾತಂತ್ರ್ಯ ನೀಡಿದರು. ರಾಜ್ಯದಲ್ಲಿ ಯಾವುದೇ ರೀತಿಯ ಕಾನೂನುಬಾಹಿರ ಚಟುವಟಿ ಕೆಗಳಿಗೆ ಆಸ್ಪದ ಕೊಡಬಾರದು. ಕಾನೂನು ಸುವ್ಯವಸ್ಥೆ ಕಾಪಾಡುವಂತೆ ಪೊಲೀಸ್ ಅಧಿ ಕಾರಿಗಳಿಗೆ ಸಿಎಂ ಕಠಿಣ ಸೂಚನೆ ನೀಡಿದರು.

ಜೂಜು ಮತ್ತು ಡ್ರಗ್ಸ್ ದಂಧೆಯನ್ನು ಬೇರು ಸಹಿತ ಕಿತ್ತೊಗೆಯಬೇಕು. ರೌಡಿಗಳ ಹೆಡೆಮುರಿ ಕಟ್ಟಿ ಸಾರ್ವಜನಿಕರ ಶಾಂತಿ ಮತ್ತು ನೆಮ್ಮದಿಗೆ ಭಂಗ ತರುವವರ ವಿರುದ್ಧ ಕಠಿಣ ಕ್ರಮಕೈಗೊಳ್ಳಿ. ಇದೇ ವೇಳೆ, ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಡಿಕೆ ಶಿವಕು ಮಾರ್, ಯಾವುದೇ ರಾಜಕೀಯ ಪ್ರಭಾವ ಅಥವಾ ಒತ್ತಡಕ್ಕೆ ಮಣಿಯದೆ ತಮ್ಮ ಕರ್ತ ವ್ಯವನ್ನು ನಿಷ್ಠೆಯಿಂದ ನಿರ್ವಹಿಸುವಂತೆ ಡಿಕೆಶಿ ಸೂಚನೆ ನೀಡಿದರು. ಎಲ್ಲಾ ಇಲಾಖೆಯ ಲ್ಲಿನ ಬಾಕಿ ಕೆಲಸಗಳನ್ನು ಆದಷ್ಟು ಬೇಗ ಮುಗಿಸಿ ನನಗೆ 25 ದಿನದಲ್ಲಿ ವರದಿ ಕೊಡ ಬೇಕು ಎಂದರು. ರಾಜ್ಯದಲ್ಲಿ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ



## ಸಚಿವರನ್ನೂ ಸುಮ್ಮನೆ ಕೂರಲು ಬಿಡಲ್ಲ: ಡಿಕೆಶಿ

**ಬೆಂಗಳೂರು:** ಮುಖ್ಯಮಂತ್ರಿಯಾಗಿ ಅಧಿ ಕಾರ ವಹಿಸಿಕೊಂಡ ದಿನವೇ ಡಿ.ಕೆ. ಶಿವಕು ಮಾರ್ ಅವರು ತಮ್ಮ ಸಂಪುಟದ ಸಹೋ ದ್ಯೋಗಿಗಳಿಗೆ ಕಠಿಣ ಸಂದೇಶ ರವಾನಿಸಿ ದ್ದಾರೆ. ಆಡಳಿತದಲ್ಲಿ ಯಾವುದೇ ಮೈಗಳ್ಳತನ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ಮುಖ್ಯಮಂತ್ರಿಯಾದ ಬೆನ್ನಲ್ಲೇ ಸಚಿವರ ಸಭೆ ನಡೆಸಿದ ಡಿ.ಕೆ.ಶಿವಕುಮಾರ್, ನಾನು ಯಾವ ಮಂತ್ರಿಗಳನ್ನೂ ಸುಮ್ಮನೆ ಕೂರಲು ಬಿಡುವುದಿಲ್ಲ. ಎಲ್ಲರೂ 24/7 ರೀತಿ ಸಕ್ರಿಯವಾಗಿ ಕೆಲಸ ಮಾಡಬೇಕು ಎಂದು ಖಡಕ್ ಆಗಿ ತಿಳಿಸಿರುವುದಾಗಿ ಗುರುವಾರ ಮಾಧ್ಯಮಗಳಿಗೆ ಮಾಹಿತಿ ನೀಡಿದರು.

ಎಲ್ಲಾ ಸಚಿವರು ಮತ್ತು ಶಾಸಕರು ಬೆಂಗಳೂರಿಗೆ ಸೀಮಿತವಾಗದೆ ತಮ್ಮ ವ್ಯಾಪ್ತಿಯ ಪ್ರತಿ ಜಿಲ್ಲೆಯಲ್ಲೂ ಕಡ್ಡಾಯವಾಗಿ ಪ್ರವಾಸ ಮಾಡಿ, ಸಭೆಗಳನ್ನು ನಡೆಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಆದೇಶಿಸಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಕಾಂಗ್ರೆಸ್ ಹೈಕ ಮಾಂಡ್ ಅತ್ಯಂತ ಗಂಭೀರವಾಗಿ ಪರಿಗಣಿ ಸಿದೆ. ಎಸ್ಐಆರ್ ವಿಚಾರದಲ್ಲಿ ದೊಡ್ಡ ಸಮ ಸ್ಯೆಯಿದೆ. ಇದನ್ನು ಯಾರೂ ಹಗುರವಾಗಿ ಪರಿ ಗಣಿಸುವಂತಿಲ್ಲ ಎಂದು ಎಚ್ಚರಿಸಿರುವ ಸಿಎಂ, ಚುನಾವಣಾ ವ್ಯವಸ್ಥೆಯ ಈ ಪ್ರಮುಖ ಪ್ರಕ್ರಿ ಯೆಯ ಕಡೆಗೆ ನಾಯಕರು ಹೆಚ್ಚಿನ ಗಮನ ಹರಿಸಬೇಕು ಎಂದು ಸೂಚಿಸಿದರು.



| ಸಚಿವರಿಗೆ ಖಾತೆ ಹಂಚಿಕೆ | |
|---|---|
| ಡಾ.ಜಿ.ಪರಮೇಶ್ವರ್ | ಕಂದಾಯ, ಕ್ರೀಡಾ ಇಲಾಖೆ |
| ಕೆ.ಎಚ್. ಮುನಿಯಪ್ಪ | ಆಹಾರ ಇಲಾಖೆ |
| ಯು.ಟಿ. ಖಾದರ್ | ಆರೋಗ್ಯ ಇಲಾಖೆ |
| ರಾಮಲಿಂಗಾರೆಡ್ಡಿ | ಜಲಸಂಪನ್ಮೂಲ |
| ಕೆ.ಜೆ.ಜಾರ್ಜ್ | ಇಂಧನ, ಪ್ರವಾಸೋದ್ಯಮ |
| ಪ್ರಿಯಾಂಕ್ ಖರ್ಗೆ | ಗೃಹ ಇಲಾಖೆ, ಐಟಿಬಿಟಿ |
| ಸತೀಶ್ ಜಾರಕಿಹೊಳಿ | ಲೋಕೋಪಯೋಗಿ |
| ಎಂ.ಬಿ.ಪಾಟೀಲ್ | ಬೃಹತ್ ಮತ್ತು ಮಧ್ಯಮ ಕೈಗಾರಿಕೆ |
| ಕೃಷ್ಣಬೈರೇಗೌಡ | ಬೆಂಗಳೂರು ನಗರಾಭಿವೃದ್ಧಿ |
| ಯತೀಂದ್ರ ಸಿದ್ದರಾಮಯ್ಯ | ನಗರಾಭಿವೃದ್ಧಿ ಇಲಾಖೆ |
| ಬೈರತಿ ಸುರೇಶ್ | ಸಾರಿಗೆ ಇಲಾಖೆ |
| ಈಶ್ವರ್ ಖಂಡ್ರೆ | ಗ್ರಾಮೀಣಾಭಿವೃದ್ಧಿ ಇಲಾಖೆ |
| ಶರಣಪ್ರಕಾಶ್ ಪಾಟೀಲ್ | ವೈದ್ಯಕೀಯ ಶಿಕ್ಷಣ |

## ಐವರಿಗೆ ಸಚಿವ ಸ್ಥಾನ ನೀಡಿ

### ಇಲ್ಲವೇ ಗಂಭೀರ ಪರಿಣಾಮ: ಮುಸ್ಲಿಂ ಧರ್ಮ ಗುರುಗಳ ಎಚ್ಚರಿಕೆ

**ಹುಬ್ಬಳ್ಳಿ:** ರಾಜ್ಯದಲ್ಲಿ ಐವರು ಮುಸ್ಲಿಂ ಸದಸ್ಯರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕೆಂದು ಮುಸ್ಲಿಂ ಧರ್ಮ ಗುರುಗಳು ಮತ್ತು ಮೌಲ್ವಿಗಳು ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ಮುಸ್ಲಿಂ ಮತದಾರರ ಬೆಂಬಲದೊಂದಿಗೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದೆ. ತಮ್ಮ ಬೇಡಿಕೆಯನ್ನು ಈಡೇರಿಸದಿದ್ದರೆ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಕಾಂಗ್ರೆಸ್ ನಾಯಕತ್ವಕ್ಕೆ ಎಚ್ಚರಿಕೆ ನೀಡಿದ್ದಾರೆ.

ಹುಬ್ಬಳ್ಳಿಯ ಹಜರತ್ ಸೈಯದ್ ಫತೇಹ್ ಶಾ ವಾಲಿ ದರ್ಗಾದಲ್ಲಿ ನಡೆದ ಮುಸ್ಲಿಂ ನಾಯಕರು ಮತ್ತು ಧರ್ಮಗುರುಗಳ ಸಭೆಯಲ್ಲಿ ಈ ಬೇಡಿಕೆ ಇಟ್ಟಿದ್ದಾರೆ. ಜಮೀರ್ ಅಹ್ಮದ್, ಹ್ಯಾರಿಸ್, ತನ್ವೀರ್ ಸೇಠ್ ಮತ್ತು ಸಲೀಮ್ ಅಹ್ಮದ್ ಸೇರಿದಂತೆ ಹಿರಿಯ ಕಾಂಗ್ರೆಸ್ ನಾಯಕರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವಂತೆ ಒತ್ತಾಯಿಸಿದರು.

ಐದು ಮುಸ್ಲಿಮರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡದಿದ್ದರೆ ಮುಂದಿನ ಪರಿಣಾಮಕ್ಕೆ ನೀವೇ ಜವಾಬ್ದಾರರು. ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರುವಲ್ಲಿ ಮುಸ್ಲಿಂ ಸಮುದಾಯವು ಪ್ರಮುಖ ಪಾತ್ರವಹಿಸಿದೆ. ಸರ್ಕಾರದಲ್ಲಿ ಹೆಚ್ಚಿನ ಪ್ರಾತಿನಿಧ್ಯಕ್ಕೆ ಅರ್ಹವಾಗಿದೆ ಎಂದು ನಾಯಕರು ಸಮರ್ಥಿಸಿಕೊಂಡರು.

## ಕೇರಳಕ್ಕೆ ಮುಂಗಾರು ಪ್ರವೇಶ



**ಬೆಂಗಳೂರು:** ಕೇರಳಕ್ಕೆ ಗುರುವಾರ ಮುಂಗಾರು ಪ್ರವೇಶಿಸಿದೆ. ವಾಡಿಕೆಗಿಂತ ಮೂರು ದಿನ ತಡವಾಗಿ ಮುಂಗಾರು ಶುರುವಾಗಿದೆ. ಇದರ ಬೆನ್ನಲ್ಲೇ ಕರ್ನಾಟಕದಲ್ಲೂ ಇನ್ನೆರೆಡು ದಿನದಲ್ಲಿ ಮುಂಗಾರು ಪ್ರವೇಶ ಆಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ರಾಜ್ಯದ ಬಹುತೇಕ ಜಿಲ್ಲೆಗಳಿಗೆ ಮುಂದಿನ ಐದು ದಿನಗಳ ಕಾಲ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ವಿಜಯಪುರ, ಬಾಗಲಕೋಟೆ, ಕೊಪ್ಪಳ, ಗದಗ, ಹಾವೇರಿ, ಧಾರವಾಡ, ಬೆಳಗಾವಿ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಗುಡುಗು, ಮಿಂಚು, ಬಿರುಗಾಳಿ ಹಾಗೂ ಭಾರೀ ಮಳೆಯ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಇಲಾಖೆ ಎಚ್ಚರಿಕೆ ನೀಡಿದೆ.

ನೈಋತ್ಯ ಮುಂಗಾರು ಅರಬ್ಬಿ ಸಮುದ್ರದ ನೈಋತ್ಯ ಮತ್ತು ಆಗ್ನೇಯ ಭಾಗಗಳು, ಲಕ್ಷದ್ವೀಪ, ಕೇರಳ ಮತ್ತು ತಮಿಳುನಾಡಿನ ಕೆಲವು ಪ್ರದೇಶಗಳು ಹಾಗೂ ಬಂಗಾಳ ಕೊಲ್ಲಿಯ ಹಲವು ಭಾಗಗಳತ್ತ ಮುಂದುವರಿಯಲು ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ ಹವಾಮಾನ ತಜ್ಞರು ಮಾಹಿತಿ ನೀಡಿದ್ದಾರೆ.

## ಸಂಪುಟದಲ್ಲಿ ಅವಕಾಶ ಸಿಗಲಿದೆ: ಸಂತೋಷ್ ಲಾಡ್


**ಬೆಂಗಳೂರು:** ಸಚಿವ ಸಂಪುಟ ವಿಸ್ತರಣೆಯಲ್ಲಿ ತಮ್ಮ ಸೇರ್ಪಡೆಯ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದ ಮಾಜಿ ಸಚಿವ ಸಂತೋಷ್ ಲಾಡ್, ಕಾಂಗ್ರೆಸ್ ಪಕ್ಷವು 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರುವ ಗುರಿ ಹೊಂದಿದೆ ಎಂದು ಹೇಳಿದರು.

ರಾಜಕೀಯ ಬೆಳವಣಿಗೆಗಳ ಕುರಿತು ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಲಾಡ್, ನಾಯಕತ್ವ ಬದಲಾವಣೆ ಸಂಘಟನೆಯನ್ನು ಬಲಪಡಿಸುತ್ತದೆ ಎಂದು ಹೇಳಿದರು.

ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷರಾಗಿರುವುದು ನಮಗೆ ತುಂಬಾ ಒಳ್ಳೆಯದು. ಎಲ್ಲರ ಸಂಯೋಜನೆಯೊಂದಿಗೆ, 2028ರಲ್ಲಿ ಉತ್ತಮ ಸರ್ಕಾರವನ್ನು ರಚಿಸಲು ಮತ್ತು ಮತ್ತೆ ಅಧಿಕಾರಕ್ಕೆ ಬರಲು ನಾವು ಎದುರು ನೋಡುತ್ತಿದ್ದೇವೆ ಎಂದು ಹೇಳಿದರು.

# ಮೈಸೂರು ಅಳಿಯನಿಂದ ರಾಜ್ಯದ ಅಭಿವೃದ್ಧಿ ಆಗಲಿ: ಎಚ್.ವಿಶ್ವನಾಥ್

**ಮೈಸೂರು:** ಇಲ್ಲಿಯವರೆಗೆ ಮೈಸೂರು ಮಗನ ಆಡಳಿತ ಇತ್ತು. ಈಗ ಮೈಸೂರು ಅಳಿಯನ ಆಡಳಿತ ಶುರುವಾಗಿದೆ. ನಮ್ಮ ಜಿಲ್ಲೆಯ ಅಳಿಯನಿಂದ ರಾಜ್ಯದ ಸಮಗ್ರ ಅಭಿವೃದ್ಧಿಯಾಗಲಿ ಎಂದು ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಹೇಳಿದರು.



ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನೂತನ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಾಮಾನ್ಯ ಕಾರ್ಯಕರ್ತನಾಗಿ ಮುಖ್ಯಮಂತ್ರಿಯಾಗುವವರೆಗೆ ಬೆಳೆದದ್ದು ದೊಡ್ಡ ಸಾಧನೆ. ಶಿವಕುಮಾರ್ ದೊಡ್ಡ ಸಂಘಟನಾಕಾರ. ಎರಡು ವರ್ಷ ರಾಜ್ಯ ಸರ್ಕಾರವನ್ನ ಉತ್ತಮ ವಾಗಿ ನಡೆಸಲಿ ಎಂದು ಹೇಳಿದರು.

ಬಿ.ಕೆ.ಹರಿಪ್ರಸಾದ್‌ಗೆ ರಾಜ್ಯಾಧ್ಯಕ್ಷ ಸ್ಥಾನ ಸಿಕ್ಕಿದೆ. ಸರ್ಕಾರ ಬರುವುದಕ್ಕೆ ಕಾರಣರಾದ ಇಬ್ಬರಿಗೆ ಒಳ್ಳೆ ಹುದ್ದೆ ಸಿಕ್ಕಿದೆ. ಡಿ.ಕೆ.ಶಿವಕುಮಾರ್ ಅವರಿಂದ ಮೈಸೂರು ಜನ ಸಾಕಷ್ಟು ನಿರೀಕ್ಷೆ ಇಟ್ಟಿದ್ದಾರೆ. ಮೈಸೂರಿನಿಂದ ಒಂದು ಒಳ್ಳೆ ಅನುಭವಿಗಳ ತಂಡ ರಚಿಸಿ, ಅವರಿಂದ ಸಲಹೆ ತೆಗೆದುಕೊಂಡು ಮೈಸೂರು ಅಭಿವೃದ್ಧಿ ಮಾಡಿ ಎಂದು ಹೇಳಿದರು.

ಮೈಸೂರಿನಲ್ಲಿ ಭೂ ಮಾಫಿಯಾ ನಡೆಯುತ್ತಿದೆ. ಸರ್ಕಾರಿ ಅಧಿಕಾರಿಗಳು ಲ್ಯಾಂಡ್ ಮಾಫಿಯಾ ಮಾಡುತ್ತಿದ್ದಾರೆ. ಮೈಸೂರು ನಿವೃತ್ತರ ಸ್ವರ್ಗ ಎಂದು ಹೇಳುತ್ತಾರೆ. ಅದನ್ನು ಹೋಗಲಾಡಿಸಿ ಯುವಕರ ಸ್ವರ್ಗ ಎಂದು ತೋರಿ ಸಬೇಕು ಎಂದರು. ಸಿದ್ದರಾಮಯ್ಯ ಮೈಸೂರು ಮಗ ಆಗಿದ್ದರೂ, ಜಿಲ್ಲೆಯಲ್ಲಿ ದಾರಿ ತಪ್ಪಿದ ಮಗನ ರೀತಿ ಆಡಳಿತ ನಡೆಸಿದರು ಎಂದು ಟೀಕಿಸಿದರು. ನನ್ನ ವಿಧಾನ ಪರಿಷತ್ ಸದಸ್ಯತ್ವದ ಅವಧಿ ಮುಂದಿನ ತಿಂಗಳು ಮುಗಿಯಲಿದೆ. ಮುಂದೆ ಚುನಾವಣಾ ರಾಜಕೀಯದಿಂದ ನಿವೃತ್ತಿ ಪಡೆಯಬೇಕೆಂದು ಮಾಡಿರುವೆ. ಮರು ಆಯ್ಕೆಗಾಗಿ ನಾನು ಯಾರ ಮನೆ ಬಾಗಿಲಿಗೂ ಹೋಗುವುದಿಲ್ಲ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿರುವ ಕಾರಣ ಮರಳಿ ಕಾಂಗ್ರೆಸ್ ಪಕ್ಷಕ್ಕೆ ಸೇರುವ ಬಗ್ಗೆ ಹೇಳಿದ್ದೇನೆ. ಈ ಬಗ್ಗೆ ನೋಡೋಣ ಎಂದರು.


# ದೀರ್ಘಕಾಲದ ಪ್ರಧಾನಿ ಮೋದಿ

## ಜೂ.10ರಂದು ನೆಹರು ದಾಖಲೆ ಮುರಿದು ಹೊಸ ದಾಖಲೆ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ದೀರ್ಘಕಾಲ ನಿರಂತರ ಅಧಿಕಾರ ನಡೆಸಿದ ಭಾರತದ ಪ್ರಧಾನಿ ಎಂಬ ಹೊಸ ದಾಖಲೆಯನ್ನು ಜೂನ್ 10 ರಂದು ಬರೆಯಲಿದ್ದಾರೆ. ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರ 4,398 ದಿನಗಳ ದಾಖಲೆಯನ್ನ ಮುರಿದು 4,399 ದಿನಗಳ ನಿರಂತರ ಸೇವೆಯ ಮೈಲುಗಲ್ಲು ತಲುಪಲಿದ್ದಾರೆ.

ಮೇ 26, 2014ರಂದು ಮೊದಲ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮೋದಿ ಅವರು, ಜೂನ್ 10, 2026ರಂದು 4,399 ದಿನಗಳ ನಿರಂತರ ಅಧಿಕಾರಾವಧಿಯನ್ನ ಪೂರ್ಯೈಸಲಿದ್ದಾರೆ. ಇದರೊಂದಿಗೆ ಅವರು ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಅತ್ಯಂತ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಲಿದ್ದಾರೆ.

ನೆಹರು ಅವರು 1952ರ ಮೇ 13ರಂದು ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿ, ಮೇ 27, 1964ರ ವರೆಗೆ ಒಟ್ಟು 4,398 ದಿನಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ್ದರು. ಈ ದಾಖಲೆಯು



ಕಳೆದ 64 ವರ್ಷಗಳಿಂದಲೂ ಅಚ್ಚಳಿಯದೆ ಉಳಿದಿತ್ತು.

ಇದಕ್ಕೂ ಮುನ್ನ ಮೋದಿ ಅವರು ಜುಲೈ 25, 2025ರಂದು ಮತ್ತೊಂದು ಮೈಲುಗಲ್ಲು ದಾಟಿದ್ದರು. ಆ ದಿನ ಅವರು 4,077 ದಿನಗಳೊಂದಿಗೆ ಮೂರನೇ ಅತ್ಯಂತ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಿ ಇಂದಿರಾ ಗಾಂಧಿ ಅವರ ದಾಖಲೆ ಹಿಂದಿಕ್ಕಿದ್ದರು. ಇಂದಿರಾ ಗಾಂಧಿ ಅವರು ಜನವರಿ 24, 1966ರಿಂದ ಮಾರ್ಚ್ 24, 1977ರವರೆಗೆ ಸುಮಾರು 11 ವರ್ಷ 2 ತಿಂಗಳ ಕಾಲ (4,077 ದಿನ) ನಿರಂತರ ಅಧಿಕಾರ ನಡೆಸಿದ್ದರು.

## ಕಾರಿನಲ್ಲಿ ಉಸಿರುಗಟ್ಟಿ 3 ವರ್ಷದ ಮಗು ಸಾವು

**ಕಲಬುರಗಿ:** ಕಾರಿನಲ್ಲಿ ಉಸಿರುಗಟ್ಟಿ ಮೂರು ವರ್ಷದ ಮಗು ಸಾವನಪ್ಪಿರುವ ಘಟನೆ ಶಹಾಬಾದ್ ತಾಲೂಕಿನ ತೊನಸನಹಳ್ಳಿ (ಎಸ್) ಗ್ರಾಮದಲ್ಲಿ ನಡೆದಿದೆ.



ಕೊಟ್ಟುರೇಶ್ವರ ಅವರ ಮೂರು ವರ್ಷದ ಬಸವಪ್ರಭು ಮೃತ ಮಗು. ಮಗುವನ್ನ ಕರೆದುಕೊಂಡು ಶಾಲೆಗೆ ಕಾರಿನಲ್ಲಿ ಹೋಗಿದ್ದ ಪೋಷಕರು ಶಾಲೆ ಬಳಿ ಕಾರು ಪಾರ್ಕ್ ಮಾಡಿ ಲಾಕ್ ಮಾಡದೇ ಹೊಗಿದ್ದರು. ಈ ವೇಳೆ ಮಗು ಆಟವಾಡುತ್ತಾ ಕಾರಿನೊಳಗೆ ಹೋಗಿದೆ. ಈ ವೇಳೆ ಕಾರಿನ ಎಲ್ಲಾ ಡೋರ್‌ಗಳು ಲಾಕ್ ಆಗಿ ಮಗು ಮೃತಪಟ್ಟಿದೆ. ಮಧ್ಯಾಹ್ನದವರೆಗೆ ಮಗು ಎಲ್ಲಿ ಹೋಯಿತೆಂದು ಹುಡುಕಾಡಿದ್ದ ಪೋಷಕರು ಬಳಿಕ ಕಾರು ಓಪನ್ ಮಾಡಿದಾಗ ದುರಂತ ಬೆಳಕಿಗೆ ಬಂದಿದೆ. ಶಹಾಬಾದ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಸೌರಶಕ್ತಿ ಉತ್ಪಾದನೆಯಲ್ಲಿ ಜಾಗತಿಕವಾಗಿ 2ನೇ ಸ್ಥಾನ

### ಅಮೆರಿಕಾ ಹಿಂದಿಕ್ಕಿದ ಭಾರತ: ಸಚಿವ ಪ್ರಹ್ಲಾದ್ ಜೋಶಿ

**ನವದೆಹಲಿ:** ಭಾರತ ಸೌರಶಕ್ತಿ ಉತ್ಪಾದನೆಯಲ್ಲಿ ಅಮೆರಿಕಾವನ್ನು 2025ರಲ್ಲಿಯೇ ಹಿಂದಿಕ್ಕಿ ವಿಶ್ವದಲ್ಲೇ ಎರಡನೇ ಸ್ಥಾನಕ್ಕೇರಿದೆ ಎಂದು ಕೇಂದ್ರ ಇಂಧನ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.



ಮನೆ ಮೇಲ್ಛಾವಣಿ ಘಟಕ, ಕೃಷಿ ಪಂಪ್ ಸೌರೀಕರಣದಿಂದ ಹಿಡಿದು ಬೃಹತ್ ಸೌರ ಪಾರ್ಕ್ ಸ್ಥಾಪನೆವರೆಗೂ ಭಾರತ ಮುಂಚೂಣಿಯಲ್ಲಿದೆ. ವಿಶ್ವದ 2ನೇ ಅತಿ ದೊಡ್ಡ ರಾಷ್ಟ್ರವಾಗಿ ಹೊರ ಹೊಮ್ಮಿದೆ. ಎರಡನೇ ಸ್ಥಾನದಲ್ಲಿದ್ದ ಅಮೆರಿಕಾವನ್ನು ಮೀರಿಸಿದೆ ಎಂದು ತಿಳಿಸಿದ್ದಾರೆ.

ಗುಜರಾತ್‌ನ ಪಠಾಣ್ ಜಿಲ್ಲೆಯಲ್ಲಿರುವ ಚರಂಕ ಸೌರ ಉದ್ಯಾನ ದೇಶದ ಸೌರಶಕ್ತಿ ಮಾರುಕಟ್ಟೆಗೆ ಪ್ರಮುಖ ಕೊಡುಗೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಭಾರತ ಶುದ್ಧ ಇಂಧನ ಪರಿವರ್ತನೆಯಲ್ಲಿ ಹೊಸ ಹೆಜ್ಜೆಯಿರಿಸಿದೆ. ಸೌರ ಶಕ್ತಿ, ಪವನ ವಿದ್ಯುತ್, ಜೈವಿಕ ಇಂಧನ ಒಟ್ಟಾರೆ ನವೀಕರಿಸಬಹುದಾದ ಇಂಧನ ಸಾಮರ್ಥ್ಯದ ಮೂಲಕ ದೇಶದ ಇಂಧನ ಭದ್ರತೆಯನ್ನು ಬಲಪಡಿಸುತ್ತಿದೆ ಎಂದರು.

2025ರ ಜುಲೈನಲ್ಲಿ ಭಾರತ ವಿದ್ಯುತ್ ಉತ್ಪಾದನೆಯಲ್ಲಿ ಇದುವರೆಗಿನ ಅತ್ಯಧಿಕ ನವೀಕರಿಸಬಹುದಾದ ಪಾಲನ್ನು ತಲುಪಿದೆ. ಪುಟ 2ಕ್ಕೆ

## ಭೀಕರ ಅಪಘಾತ: ಮೂವರು ಸಾವು

**ಚಿಕ್ಕನಾಯಕನಹಳ್ಳಿ:** ತಾಲ್ಲೂಕಿನ ಕೆಂಕೆರೆ ಸಮೀಪದ ಗೊಲ್ಲರಹಟ್ಟಿ ಗೇಟ್ ಬಳಿ ಗುರುವಾರ ಮಾರುತಿ ಓಮ್ನಿ ಕಾರಿಗೆ ಇನ್ನೋವಾ ಕಾರು ಡಿಕ್ಕಿಯಾಗಿ ಒಂದೇ ಕುಟುಂಬದ ಮೂವರು ಮೃತಪಟ್ಟಿದ್ದಾರೆ.

ಆಂಧ್ರಪ್ರದೇಶದ ಅದೋನಿಯ ಗಂಗೇಶ್ವರ ರೆಡ್ಡಿ (68), ಪತ್ನಿ ಇಂದಿರಮ್ಮ(63) ಮಗಳು ಸೌಮ್ಯ (39) ಮೃತಪಟ್ಟವರು. ಅದೋನಿಯ ರವಿಕುಮಾರ್ (42) ಸಾಫ್ಟ್‌ವೇರ್ ಎಂಜಿನಿಯರ್. ಪತ್ನಿ, ಅತ್ತೆ, ಮಾವ, ಇಬ್ಬರು ಮಕ್ಕಳ ಜತೆಗೆ ಮೈಸೂರಿಗೆ ಹೋಗಿದ್ದರು.

ಮೈಸೂರಿನಿಂದ ಆದೋನಿ ಕಡೆಗೆ ತೆರಳುತ್ತಿದ್ದರು. ಈ ವೇಳೆ ರಾಷ್ಟ್ರೀಯ ಹೆದ್ದಾರಿ ಬದಿ ನಿಂತಿದ್ದ ಓಮ್ನಿ ಕಾರಿಗೆ ಇನ್ನೋವಾ ಕಾರು ಡಿಕ್ಕಿ ಹೊಡೆದಿದೆ. ಓಮ್ನಿ ಕಾರಿನ ಮುಂಭಾಗ ನಜ್ಜುಗುಜ್ಜಾಗಿದೆ. ಡಿಕ್ಕಿ ಹೊಡೆದ ರಂಭಸಕ್ಕೆ ಕಾರು ಗುಂಡಿಗೆ ಉರುಳಿ ಬಿದ್ದಿದೆ. ಮೂವರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ.

ರವಿಕುಮಾರ್ ಮಕ್ಕಳಾದ ಚಾರ್ವಿ ರೆಡ್ಡಿ (10), ಚರಿತ್ (ರೆಡ್ಡಿ) ಗಾಯಗೊಂಡಿದ್ದಾರೆ. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಓಮ್ನಿ ಚಾಲಕನಿಗೆ ಕಾಲು ಮುರಿದಿದೆ. ಹುಳಿಯಾರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಇಂದು ವಿಶ್ವ ಪರಿಸರ ದಿನ

# ಪ್ರಕೃತಿ ನಾಶ.... ಮಾನವನ ವಿನಾಶ

ಹರ್ಷಿತಾ ಕುಲಾಲ್

ಸೃಷ್ಟಿಯ ಮಡಿಲಲ್ಲಿ ಜೀವಿಸುತ್ತಿರುವ ಪ್ರತಿಯೊಬ್ಬ ಮನುಷ್ಯ ಈ ಸೃಷ್ಟಿಯ ಬಗ್ಗೆ ಕಾಳಜಿ ವಹಿಸಬೇಕು. ಅದು ಅವನ ಜೀವನದ ಬಹು ಮುಖ್ಯ ಕರ್ತವ್ಯ ಕೂಡ. ಒಂದು ದಿನದ ಮಟ್ಟಿಗೆ ಪರಿಸರ ದಿನವನ್ನು ಗಿಡ ನೆಟ್ಟು ಆಚರಣೆ ಮಾಡುವುದಲ್ಲ.

ವರ್ಷ ಪೂರ್ತಿ ಗಿಡ ಮರಗಳ ಬೆಳೆಸಿ ಅದು ನಮಗೂ ಆಸರೆ ನೀಡುತ್ತದೆ. ಬಿಸಿಲನ್ನು ತಡೆಯಲು ನೆರಳನ್ನು ನೀಡುತ್ತದೆ. ನಮಗೆ ಪರಿಸರದಲ್ಲಿ ಜೀವಿಸಲು ಅಗತ್ಯವಾದ ಶುದ್ಧ ಗಾಳಿ ಮರಗಳಿಂದ ದೊರೆಯುತ್ತದೆ ಎಂಬುದು ನಮಗೆ ತಿಳಿದ ವಿಷಯ. ಹಾಗೆ ಪರಿಸರ ಸಂರಕ್ಷಣೆ ಅತ್ಯವಶ್ಯಕ. ಮಾನವನ ದುರಾಸೆಯಿಂದ ಕಾಡು ನಾಶ ಮಾಡಿ ಮನೆ ಇನ್ನಿತರ ಪೀಠೋಪಕರಣ ತಯಾರಿಸಿ ಮರ ಗಿಡಗಳ ಸಂತತಿ ನಾಶವಾಗುತ್ತಿದೆ.



ಮರ ಗಿಡಗಳ ನಾಶದಿಂದ ಅನೇಕ ವನ್ಯ ಜೀವಿಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಮಳೆಯು ಸರಿಯಾಗಿ ಬರುವುದಿಲ್ಲ. ಆದರೆ ಈ ಒಂದು ಕಾಳಜಿ ಅದೆಷ್ಟು ಜನರಲ್ಲಿ ಇದೆ. ಬರೀ ಪರಿಸರದಲ್ಲಿ ಸಿಗುವ ಸೌಲಭ್ಯಗಳನ್ನು ಬಾಚಿ ಕೊಳ್ಳಲು ಕಾತುರದಿಂದ ಕಾಯುತ್ತಿರುತ್ತಾನೆ. ಹೊರತು ಅದನ್ನು ಉಳಿಸಿ ಬೆಳೆಸುವ ಮನಸ್ಸು ಕೇವಲ ಕೆಲವೇ ಜನರಲ್ಲಿ ಇದೆ. ಈ ದಿನದ ನೆನಪಿ ನಲ್ಲಿ ಅನೇಕ ಸಂಘಸಂಸ್ಥೆಗಳು ಪರಿಸರವನ್ನು ಸ್ವಚ್ಛಗೊಳಿಸುವ ಇಲ್ಲ ಗಿಡ ನೆಡುವ ಕಾರ್ಯ ಕ್ರಮಗಳನ್ನು ಹಮ್ಮಿಕೊಂಡಿರುತ್ತಾರೆ. ಈ ದೃಷ್ಟಿಯಿಂದ ಒಳ್ಳೆಯ ಹಬ್ಬದ ದಿನದಂದು ಪ್ರತಿಯೊಂದು ಮನೆಯಲ್ಲಿ ಒಂದೊಂದು ಗಿಡ ನೆಡುವುದರ ಮೂಲಕ ಪರಿಸರದ ರಕ್ಷಣೆ ಮಾಡುವುದು ಉತ್ತಮ. ಹಾಗೆ ಯಾವುದೇ ಸಭೆ ಸಮಾರಂಭಗಳಲ್ಲಿ ಇನಾಮು ರೂಪದಲ್ಲಿ ಗಿಡಗಳನ್ನು ಕೊಡುವುದರ ಮೂಲಕ ಮರ ಗಿಡಗಳ ಬೆಳವಣಿಗೆಗೆ ಸಹಕಾರಿಯಾಗುವುದು. ಪುಟ 2ಕ್ಕೆ

# ಸಚಿವ ಸ್ಥಾನ ಬೇಕಿದ್ದರೆ ಡಿಕೆಶಿ ಜೊತೆ ಹೋಗಿ!

## ಹೋರಾಟ, ಪಕ್ಷ ಸಂಘಟನೆ ಆಸಕ್ತರು ನನ್ನ ಜೊತೆ ಬನ್ನಿ | ಬಿ.ಕೆ.ಹರಿಪ್ರಸಾದ್ ಕರೆ

**ಬೆಂಗಳೂರು:** ರಾಜ್ಯದಲ್ಲಿ ಅಧಿಕಾರ ಹಾಗೂ ಸಚಿವ ಸ್ಥಾನ ಬೇಕು ಎನ್ನುವವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜೊತೆ ಹೋಗಿ. ಪಕ್ಷ, ಹೋರಾಟ, ವರಿಷ್ಠರಾದ ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆಯವರ ಕೈಬಲಪಡಿಸಬೇಕು ಎನ್ನುವವರು ನನ್ನ ಜೊತೆ ಬನ್ನಿ. ಇದರಲ್ಲಿ ಯಾವುದೇ ಬಣವಿಲ್ಲ ಎಂದು ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸಲಹೆ ಮಾಡಿದರು.

ಕೆಪಿಸಿಸಿ ನೂತನ ಅಧ್ಯಕ್ಷರಾಗಿ ನೇಮಕವಾದ ಬಳಿಕ ಮಾಧ್ಯಮಗಳ ಜೊತೆ ಗುರುವಾರ ಮಾತನಾಡಿದ ಅವರು, ನಾನು ಹಿಂದುಳಿದ ಅಥವಾ ಮುಂದುವರಿದ ವರ್ಗಕ್ಕೆ ಸೇರಿದವನು ಎನ್ನುವುದು ಮುಖ್ಯವಲ್ಲ. ನಾನು ಮುಂದುವರೆದವರಿಗಿಂತ ಮುಂದುವರೆದವನು.

ನಾನು 2028ಕ್ಕೆ ಮುಖ್ಯಮಂತ್ರಿ ಅಭ್ಯರ್ಥಿ ಅನ್ನೋದು ವಾಟ್ಸಪ್ ಯುನಿವರ್ಸಿಟಿ ಅಪಪ್ರ



ಚಾರ. ನನಗೆ ಪಕ್ಷ ಕಟ್ಟುವ ಜವಾಬ್ದಾರಿ ಇದೆ. ಎಸ್ಐಆರ್, ಸಿಎಎ ವಿರುದ್ಧ ಹೋರಾ ಡುವ ಜವಾಬ್ದಾರಿ ಇದೆ. ಅಧಿಕಾರ ನನಗೆ ಮುಖ್ಯವಲ್ಲ, ನಾವು ಬೀದಿಗಿಳಿದು ಹೋರಾಟ ಮಾಡಬೇಕು ಎಂದು ಹೇಳಿದರು.

ಸಂವಿಧಾನವೇ ನಮ್ಮ ದಾರಿ, ಸಾಮಾಜಿಕ ನ್ಯಾಯವೇ ನಮ್ಮ ಗುರಿ, ಜಾತ್ಯತೀತತೆಯೇ ನಮ್ಮ ಶಕ್ತಿ ಎಂಬ ಕಾಂಗ್ರೆ ಸ್‌ನ ಮೂಲ ಸಂದೇಶವನ್ನು ಬಲಪಡಿಸುವ ಈ ನಿರ್ಧಾ ರದ ಜೊತೆ ಕಾಂಗ್ರೆಸ್ ಕಾರ್ಯಕರ್ತರು, ಪುಟ 2ಕ್ಕೆ

### ದೇಶದಲ್ಲಿ ದ್ವೇಷ ರಾಜಕಾರಣ, ಸಂವಿಧಾನ ವಿರೋಧಿ ಪ್ರವೃತ್ತಿ ಹೆಚ್ಚಳ

**ಬೆಂಗಳೂರು:** ದೇಶದಲ್ಲಿ ದ್ವೇಷದ ರಾಜಕಾರಣ, ಧರ್ಮದ ಹೆಸರಿನ ಧ್ರುವೀಕರಣ ಮತ್ತು ಸಂವಿಧಾನ ವಿರೋಧಿ ಪ್ರವೃತ್ತಿಗಳು ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಕ್ಕಿರುವುದು ಹೊಸ ಜವಾಬ್ದಾರಿ, ಸವಾಲು ನೀಡಿದಂತಾಗಿದೆ ಎಂದು ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ.

ಸಾಮಾಜಿಕ ಸಾಮರಸ್ಯ ಮತ್ತು ಜಾತ್ಯತೀತ ಮೌಲ್ಯ ಗಳನ್ನು ನಿರಂತರವಾಗಿ ಪ್ರತಿಪಾದಿಸುತ್ತಾ ಬಂದಿರುವ ನನಗೆ, ದೇಶದ ದುರಿತ ಕಾಲದಲ್ಲಿ ಕಾಂಗ್ರೆಸ್ ರಾಜ್ಯ ಘಟಕದ ನೇತೃತ್ವ ಸಿಕ್ಕಿದೆ. ಈ ಸವಾಲು ಮತ್ತು ಜವಾಬ್ದಾರಿಯನ್ನು ಪಕ್ಷದ ಪುಟ 2ಕ್ಕೆ

## ದೇಶದಲ್ಲಿ ದ್ವೇಷ ರಾಜಕಾರಣ, ಸಂವಿಧಾನ ವಿರೋಧಿ ಪ್ರವೃತ್ತಿ ಹೆಚ್ಚಳ

ಸೈದ್ಧಾಂತಿಕ ಕಾರ್ಯಕರ್ತರ ಬಲದಿಂದ ಯಶಸ್ವಿಯಾಗಿ ಪೂರೈಸುತ್ತೇನೆ ಎಂಬ ಅಚಲ ನಂಬಿಕೆ ನನಗಿದೆ ಎಂದು ಬಿ.ಕೆ.ಹರಿಪ್ರಸಾದ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕಾಂಗ್ರೆಸ್ ನ ಕೇಂದ್ರ ನಾಯಕತ್ವದ ಈ ನಿರ್ಧಾರವು ಕೇವಲ ಒಬ್ಬ ವ್ಯಕ್ತಿಗೆ ನೀಡಿರುವ ಹುದ್ದೆಯಲ್ಲ. ಇದು ಕಾಂಗ್ರೆಸ್ ಪಕ್ಷದ ಮೂಲ ಸಿದ್ಧಾಂತಗಳಾದ ಸಾಮಾಜಿಕ ನ್ಯಾಯ, ಜಾತ್ಯತೀತತೆ, ಪ್ರಜಾಪ್ರಭುತ್ವ, ಸಂವಿಧಾನವಾದ ಮತ್ತು ದುರ್ಬಲ ವರ್ಗಗಳ ಸಬಲೀಕರಣದ ಪರವಾಗಿ ನೀಡಿರುವ ಸ್ಪಷ್ಟ ಸಂದೇಶವಾಗಿದೆ' ಎಂದು ಹೇಳಿದ್ದಾರೆ.

ಹಿಂದುಳಿದ ವರ್ಗಗಳು, ದಲಿತರು, ಅಲ್ಪಸಂಖ್ಯಾತರು, ರೈತರು, ಕಾರ್ಮಿಕರು, ಮಹಿಳೆಯರು ಮತ್ತು ಯುವಜನರ ಆಶೋತ್ತರಗಳನ್ನು ನಾನು ಅರ್ಥಮಾಡಿಕೊಂಡಿದ್ದೇನೆ. ಹಾಗಾಗಿ ಈ ನಿಟ್ಟಿನಲ್ಲೇ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತೆ ಬೂತ್ ಮಟ್ಟದಿಂದ ಸಂಘಟಿಸಿ, ಸೈದ್ಧಾಂತಿಕವಾಗಿ ಬಲಪಡಿಸೋಣ ಎಂದಿದ್ದಾರೆ. ಸಾಮಾಜಿಕ ನ್ಯಾಯದ ಪರವಾಗಿ ಧ್ವನಿ ಎತ್ತುವವರು, ಕೋಮುವಾದದ ವಿರುದ್ಧ ಹೋರಾಡುವವರು, ಸಂವಿಧಾನವನ್ನು ರಕ್ಷಿಸುವ ಹೋರಾಟಗಾರರು ಮತ್ತು ಪ್ರಗತಿಪರ ಚಿಂತನೆ ಹೊಂದಿರುವ ಕೋಟ್ಯಾಂತರ ಕಾಂಗ್ರೆಸ್ಸೇತರ ಕಾರ್ಯಕರ್ತರೂ ನಮ್ಮ ದೇಶದ ಈ ದುರಿತ ಕಾಲದಲ್ಲಿ ನಮ್ಮೊಂದಿಗೆ ಕೈ ಜೋಡಿಸಬೇಕಿದೆ. ಕಾಂಗ್ರೆಸ್ಸಿಗರಾದ ನಾವೂ ಕೂಡಾ ಕಾಂಗ್ರೆಸ್ ಮತ್ತು ಕಾಂಗ್ರೆಸ್ಸೇತರ ಜಾತ್ಯಾತೀತ ಯುವ ಸಮುದಾಯವನ್ನು ಒಟ್ಟುಗೂಡಿಸಿಕೊಂಡು ಹೋಗಬೇಕಿದೆ ಎಂಬ ಅರಿವು ನನಗಿದೆ ಎಂದು ಹೇಳಿದ್ದಾರೆ.

## ಸಚಿವರನ್ನೂ ಸುಮ್ಮನೆ ಕೂರಲು ಬಿಡಲ್ಲ: ಡಿಕೆಶಿ

ನಿಧಿ ದುರ್ಬಳಕೆಯಾಗುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಇದಕ್ಕೆ ತಕ್ಷಣವೇ ಬ್ರೇಕ್ ಹಾಕಿ ಆಡಳಿತದಲ್ಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕ ಬೇಕು ಎಂದು ಗುಡುಗಿದರು. ಪ್ರತಿಯೊಬ್ಬ ಅಧಿಕಾರಿಯೂ ನಿಮ್ಮ ಆತ್ಮಸಾಕ್ಷಿ ಒಪ್ಪುವ ಹಾಗೆ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದರು.

ಸರ್ಕಾರದ ಸುಗಮ ಆಡಳಿತಕ್ಕೆ ಅಧಿಕಾ ರಿಗಳೇ ಬೆನ್ನೆಲುಬು. ಸಾರ್ವಜನಿಕರ ಕಷ್ಟಗ ಳಿಗೆ ತಕ್ಷಣ ಸ್ಪಂದಿಸಿ, ಸರ್ಕಾರದ ಜನಕಲ್ಯಾಣ ಯೋಜನೆಗಳನ್ನು ಸಮರ್ಥವಾಗಿ ಜನರಿಗೆ ತಲುಪಿಸಿ. ಅಭಿವೃದ್ಧಿಯ ಹಾದಿಗೆ ಮೆಟ್ಟಿಲಾಗಿ. ಜನ ಮೆಚ್ಚುವ ಹಾಗೇ ಕೆಲಸ ಮಾಡಿ. ಸರ್ಕಾರಕ್ಕೂ ಒಳ್ಳೆಯ ಹೆಸರು ತನ್ನಿ ಎಂದು ಅಧಿಕಾರಿಗಳಿಗೆ ಡಿಕೆಶಿ ಸೂಚಿಸಿದರು

## ಸೌರಶಕ್ತಿ ಉತ್ಪಾದನೆಯಲ್ಲಿ ಜಾಗತಿಕವಾಗಿ 2ನೇ ಸ್ಥಾನ

ನವೀಕರಿಸಬಹುದಾದ ಇಂಧನ ಮೂಲಗಳು ದೇಶದ ಒಟ್ಟು ವಿದ್ಯುತ್ ಬೇಡಿಕೆಯ ಶೇ.51.5ರಷ್ಟು ಪೂರೈಸುತ್ತಿದೆ ಎಂದು ತಿಳಿಸಿದ್ದಾರೆ.

## ಬೇಕಿದ್ದರೆ ಡಿಕೆಶಿ ಜೊತೆ ಹೋಗಿ!

ನಾಯಕರು, ಜಾತ್ಯಾತೀತ ಯುವ ಸಮುದಾಯ, ಕಾಂಗ್ರೆಸ್ಸೇತರ ಜಾತ್ಯಾತೀತ ಪಕ್ಷ, ಸಂಘಟನೆಗಳು ನನ್ನ ಜೊತೆ ಕೈ ಜೋಡಿಸುತ್ತದೆ ಎಂಬ ಭರವಸೆಯಲ್ಲಿ ಎಐಸಿಸಿ ನೀಡಿದ ಜವಾಬ್ದಾರಿಯನ್ನು ಒಪ್ಪಿ ನಿರ್ವಹಿಸುತ್ತೇನೆ ಎಂದು ಅವರು ತಿಳಿಸಿದರು. ಕಾಂಗ್ರೆಸ್ ಪಕ್ಷದ ವರಿಷ್ಠರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆಯವರು ನನ್ನನ್ನು ಕೆಪಿಸಿಸಿ ಅಧ್ಯಕ್ಷನನ್ನಾಗಿ ಆಯ್ಕೆ ಮಾಡಿದ್ದಾರೆ. ವಿದ್ಯಾರ್ಥಿ ದೆಸೆಯಿಂದ ನಾನು ಪಕ್ಷದಲ್ಲಿ ತೊಡಗಿಸಿಕೊಂಡಿದ್ದೇನೆ. ನಾನು ವರಿಷ್ಠರ ಬಳಿ ಹೋಗಿ ಯಾವತ್ತೂ ಸಚಿವ ಸ್ಥಾನ ಬೇಕು ಅಂತ ಕೇಳಿಲ್ಲ. ನಾನು ಅಧಿಕಾರಕ್ಕಾಗಿ ಪಕ್ಷದಲ್ಲಿ ಇಲ್ಲ. ನಾನು ಕಾಂಗ್ರೆಸ್ ಪಕ್ಷದ ಸಿಪಾಯಿ. ನಮ್ಮ ಹಿರಿಯರ ಆದರ್ಶ ಪಾಲಿಸಿಕೊಂಡು ಜವಾಬ್ದಾರಿ ನಿರ್ವಹಿಸುತ್ತೇನೆ ಎಂದು ಹೇಳಿದರು.

# 20ರಿಂದ ವಿಶೇಷ ಸಮಗ್ರ ಪರಿಷ್ಕರಣೆ

### ನಾಗರೀಕರು ಸಹಕರಿಸಲು ಜಿಲ್ಲಾಧಿಕಾರಿಗಳ ಕರೆ | ಮನೆ, ಮನೆಗೆ ಬಿ.ಎಲ್.ಒಗಳ ಭೇಟಿ, ಅಗತ್ಯ ದಾಖಲೆಗಳನ್ನು ನೀಡಲು ಮನವಿ | ಆ.5ರಂದು ಕರಡು ಪಟ್ಟಿ ಪ್ರಕಟ, ಆಕ್ಷೇಪಣೆಗಳಿಗೆ ಅವಕಾಶ | ಅ.5ರಂದು ಅಂತಿಮ ಪಟ್ಟಿ ಪ್ರಕಟ

ರಾಮನಗರ: ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ, ಮೂರನೇ ಹಂತದಲ್ಲಿ ಆರಂಭ ಗೊಂಡಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ (ಸ್ಪೆಷಲ್ ಸಮ್ಮರಿ ರಿವಿಷನ್–ಎಸ್‌ಐಆರ್) ಪ್ರಕ್ರಿಯೆ ಜಿಲ್ಲೆಯಲ್ಲಿ ಆರಂಭಗೊಂಡಿದೆ. ಜೂನ್ 20ರಿಂದ ಬಿಎಲ್‌ಒಗಳು ಮನೆ, ಮನೆಗೆ ಭೇಟಿ ಕೊಟ್ಟು ಮ್ಯಾಪಿಂಗ್ ಆಗಿರುವ ಮತದಾರರ ಮಾಹಿತಿಯನ್ನು ಆಯಾ ಮತದಾರರ ಗಮನಕ್ಕೆ ತರಲಿದ್ದಾರೆ. ಮತದಾರರು ಅಗತ್ಯ ದಾಖಲೆಗಳನ್ನು ಕೊಟ್ಟು ಮತಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ದೃಢೀಕರಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ಮನವಿ ಮಾಡಿದ್ದಾರೆ.

ಜಿಲ್ಲಾ ಸರ್ಕಾರಿ ಕಚೇರಿಗಳ ಸಂಕೀರ್ಣದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

**ಎಸ್.ಐ.ಆರ್ ಏಕೆ?**

ವಿಶೇಷ ಸಮಗ್ರ ಪರಿಷ್ಕರಣೆ–2026ರ (ಎಸ್‌ಐಆರ್) ಎಂಬುದು ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಪರಿಶೀಲಿಸಿ ನವೀಕರಿಸುವ ವಿಶೇಷ ಪ್ರಕ್ರಿಯೆಯಾಗಿದೆ. ಈಗಾಗಲೆ ಮೃತಪಟ್ಟವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆಯುವುದು, ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸ್ಥಳಾಂತರಗೊಂಡ ಮತದಾರರು, ವಲಸಿಗ ಮತದಾರರು ಹಾಗೂ ಎರಡೂ ಕಡೆ ಮತದಾರರ ಪಟ್ಟಿಯಲ್ಲಿ ಹೆಸರಿರುವಂತಹ ಮತದಾರರು ಹಾಗೂ ಭಾರತೀಯ ನಾಗರೀಕರಲ್ಲದವರಿಗೆ ಮತದಾನದ ಹಕ್ಕು ಇಲ್ಲದ ಕಾರಣ ಅವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆಯುವ ಪರಿಷ್ಕರಣಾ ಕಾರ್ಯವನ್ನು ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.



**ಬಿಎಲ್‌ಒಗಳು ಮನೆಗೆ ಭೇಟಿ ಕೊಟ್ಟಾಗ...........**

ಮತದಾರರ ಪಟ್ಟಿ ಮ್ಯಾಪಿಂಗ್ ಆದವರ ಮನೆ ಮನೆಗಳಿಗೆ ಬಿಎಲ್‌ಒಗಳು ತೆರಳಿ ಎಣಿಕೆಯ (ಎನ್ಯುಮರೇಷನ್) ಅರ್ಜಿಯನ್ನು ನೀಡುವರು. ಈಗಾಗಲೇ ಮತದಾರರ ಪಟ್ಟಿಯಲ್ಲಿರುವವರ ಮಾಹಿತಿ ಈ ಅರ್ಜಿಯಲ್ಲಿ ಇರುತ್ತದೆ. ಹಾಗೊಮ್ಮೆ ಛಾಯಾಚಿತ್ರ ಅಥವಾ ಹೆಸರು ತಪ್ಪಿದ್ದಲ್ಲಿ ಈ ಅರ್ಜಿಯಲ್ಲಿ ಅದನ್ನು ಬದಲಾಯಿಸಿಕೊಳ್ಳುವ ಅವಕಾಶ ಕಲ್ಪಿಸಲಾಗಿದೆ. ಈ ಕಾರ್ಯಕ್ಕೆ ಬಿಎಲ್‌ಒಗಳು ಪ್ರತೀ ಮನೆಗೆ ಮೂರು ಬಾರಿ ಭೇಟಿ ನೀಡುತ್ತಾರೆ ಎಂದರು.

**ಯಾವ್ಯಾವ ದಾಖಲೆಗಳನ್ನು ಕೊಡಬಹುದು?**

ಗುರುತಿನ ಚೀಟಿಗಳು ಅಂದರೆ ಕೇಂದ್ರ ಸರ್ಕಾರ ಅಥವಾ ಸ್ಥಳೀಯ ಸಂಸ್ಥೆಗಳು ನೀಡುವ ಗುರುತಿನ ಚೀಟಿಗಳು, ಬ್ಯಾಂಕ್‌ಗಳು, ಅಂಚೆ ಕಚೇರಿ, ಎಲ್‌ಐಸಿಯಿಂದ ನೀಡಿರುವ ಗುರುತಿನ ಚೀಟಿಗಳು, ಜನನ ಪ್ರಮಾಣ ಪತ್ರ, ಪಾಸ್‌ಪೋರ್ಟ್, ಎಸ್‌ಎಸ್‌ಎಲ್‌ಸಿ ಪ್ರಮಾಣ ಪತ್ರ, ವಾಸದ ದೃಢೀಕರಣ ಪ್ರಮಾಣ ಪತ್ರ, ಒಬಿಸಿ, ಎಸ್‌ಸಿ ಅಥವಾ ಎಸ್‌ಟಿ ಜಾತಿ ಪ್ರಮಾಣ ಪತ್ರ, ಸರ್ಕಾರ ನೀಡಿರುವ ಭೂಮಿ ಅಥವಾ ನಿವೇಶನದ ಪ್ರಮಾಣ ಪತ್ರ ಇತ್ಯಾದಿ ದಾಖಲಾತಿಗಳನ್ನು ಸಂಬಂಧಿಸಿದವರು ಸಲ್ಲಿಸಬಹುದಾಗಿದೆ.

**ಬಿ.ಎಲ್.ಒಗಳು ಮನೆಗೆ ಬಂದಾಗ ನೀವು ಇರದಿದ್ದರೆ?**

ಬಿ.ಎಲ್.ಒಗಳು ಪ್ರತಿ ಮನೆಗೆ ಮೂರು ಭಾರಿ ಭೇಟಿ ಕೊಡುತ್ತಾರೆ. ಹಾಗೊಮ್ಮೆ ನೀವು ಮನೆಯಲ್ಲಿ ಇಲ್ಲದಿದ್ದರೆ ಮನೆಯಲ್ಲಿರುವ ಹಿರಿಯರು ಅಗತ್ಯ ದಾಖಲೆಗಳನ್ನು ಕೊಟ್ಟು ಸಹಿ ಮಾಡಬಹುದು. ಅಥವಾ ನಗರ ಪಟ್ಟಣ ವ್ಯಾಪ್ತಿಯಲ್ಲಿ ಪ್ರತಿ ವಾರ್ಡು, ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿ ಪಂಚಾಯ್ತಿ ವ್ಯಾಪ್ತಿಯಲ್ಲಿ ಬಿಎಲ್‌ಒಗಳ ಕಚೇರಿಯನ್ನು ಸ್ಥಾಪಿಸಲಾಗಿರುತ್ತದೆ. ನಾಗರೀಕರು ಅಲ್ಲಿಗೂ ತೆರಳಿ ಅಗತ್ಯ ದಾಖಲೆಗಳನ್ನು ಸಲ್ಲಿಸಬಹುದು. ಯಾವುದೇ ಅರ್ಹ ನಾಗರೀಕನ ಮತ ಹಕ್ಕು ಕೈಬಿಡಬಾರದು ಎಂಬುದು ಚುನಾವಣಾ ಆಯೋಗದ ಉದ್ದೇಶ ಎಂದರು.

**ಶೇ 90.47 ಮ್ಯಾಪಿಂಗ್ ಆಗಿದೆ**

ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ಮ್ಯಾಪಿಂಗ್ ಶುರುವಾಗಿದ್ದು, ಅದು ಶೇ. 90.47ರಷ್ಟು ಕಾರ್ಯ ಪೂರ್ಣಗೊಂಡಿದೆ. ಅಂದರೆ ಜಿಲ್ಲೆಯ 9,39,081 ಮತದಾರರ ಪೈಕಿ 8,49,572 ಮತದಾರರ ಮ್ಯಾಪಿಂಗ್ ಕಾರ್ಯ ಮಾಡಲಾಗಿದೆ. 2002ರ ಮತದಾರರ ಪಟ್ಟಿಯಲ್ಲಿ ಅವರ ಹೆಸರಿದ್ದು, ಅಥವಾ ಅವರ ತಂದೆ ಅಥವಾ ಅಜ್ಜ ಅಥವಾ ಸಂಬಂಧಿಕರ ಹೆಸರಿದ್ದರೆ ಮಾತ್ರ ಮ್ಯಾಪಿಂಗ್ ಕಾರ್ಯ ಸಾಧ್ಯ, ಈ ರೀತಿಯ 100 ರಲ್ಲಿ 90 ಜನರ ಮ್ಯಾಪಿಂಗ್ ಪೂರ್ಣಗೊಂಡಿದೆ ಎಂದರು.

### ಆಕ್ಷೇಪಗಳಿಗೆ ಅವಕಾಶ

**ಆಗಸ್ಟ್ 5 ರಂದು ಕರಡು ಪಟ್ಟಿಯನ್ನು ಪ್ರಕಟಿಸಲಾಗುವುದು. ನಂತರ ಆಕ್ಷೇಪಣೆಗೆ ಒಂದು ತಿಂಗಳ ಕಾಲಾವಧಿ ನೀಡಲಾಗುವುದು. ಇದಾದ ನಂತರ ಆಕ್ಷೇಪಣೆಗಳನ್ನು ವಿಲೇವಾರಿ ಮಾಡಲು ಎರಡು ತಿಂಗಳು ಕಾಲಾವಕಾಶವಿರುತ್ತದೆ. ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು.**

### ರಾಜಕೀಯ ಪಕ್ಷಗಳ ಸಹಕಾರ

**ವಿಶೇಷ ಸಮಗ್ರ ಪರಿಷ್ಕರಣಾ ಕಾರ್ಯಕ್ಕೆ ರಾಜಕೀಯ ಪಕ್ಷಗಳು ಸಹ ನೆರವು ನೀಡಲು ಅವಕಾಶ ಕಲ್ಪಿಸಲಾಗಿದೆ, ಈ ಪ್ರಕ್ರಿಯೆಯಲ್ಲಿ ರಾಜಕೀಯ ಪಕ್ಷಗಳು ಬೂತ್ ಲೆವೆಲ್ ಏಜೆಂಟರುಗಳನ್ನು ನೇಮಕ ಮಾಡಿಕೊಳ್ಳಬಹುದಾಗಿದೆ, ಬೂತ್ ಮಟ್ಟದ ಎಜೆಂಟರು ಬಿಎಲ್‌ಓ ಅವರೊಂದಿಗೆ ತೆರಳಿ ನೆರವು ನೀಡಬಹುದು. ಅದಕ್ಕಾಗಿ ರಾಜಕೀಯ ಪಕ್ಷಗಳು ಏಜೆಂಟರಿಗೆ ಗುರುತಿನ ಚೀಟಿ ನೀಡುತ್ತಾರೆ ಎಂದು ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದರು.**

## ಅರ್ಜಿ ಆಹ್ವಾನ

ರಾಮನಗರ: 2026–27ನೇ ಸಾಲಿಗೆ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯಲ್ಲಿ (ರಾಮನಗರ, ಚನ್ನಪಟ್ಟಣ, ಕನಕಪುರ ಮತ್ತು ಮಾಗಡಿ ತಾಲ್ಲೂಕು) ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ (ಪಿ.ಯು.ಸಿ ಹಾಗೂ ಡಿ.ಪ್ಲೋಮಾ ಹಾಗೂ ಐ.ಟಿ.ಐ ಸಮಾನಾಂತರ ಕೋರ್ಸು ಮತ್ತು ಪದವಿ ಮಟ್ಟದ ಕೋರ್ಸುಗಳ ವಿದ್ಯಾರ್ಥಿಗಳಿಗೆ ಮಾತ್ರ) ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿಗಾಗಿ ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್‌ಸೈಟ್ ವಿಳಾಸ https://shp.karnataka.gov.in ಮೂಲಕ ಜೂ. 30ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ 27271104 ಅಥವಾ ಮಾಹಿತಿ ಕೇಂದ್ರದ ಸಿಬ್ಬಂದಿಗಳ ದೂ.ಸಂಖ್ಯೆ 9880297132, 7795757850, 9740334348 ಅಥವಾ 8197514161 ಅನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತ.ನಾಡು ಸಿಎಂ ವಿರುದ್ಧ ಆಕ್ರೋಶ

ಚಾಮರಾಜನಗರ, ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಆಕ್ಷೇಪ ವ್ಯಕ್ತಪಡಿಸುತ್ತಿರುವುದು ಸರಿಯಲ್ಲ ಎಂದು ಜಿಲ್ಲಾ ಹೋರಾಟ ಅಭಿವೃದ್ಧಿ ಸಮಿತಿ ಅಧ್ಯಕ್ಷ ಕೆ.ವೀರಭದ್ರಸ್ವಾಮಿ ಆರೋಪಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಮೇಕೆ ದಾಟು ಯೋಜನೆ ಆರಂಭಿಸಲು ಸುಪ್ರೀಂ ಕೋರ್ಟ್ ನಿಂದ ಗ್ರೀನ್ ಸಿಗ್ನಲ್ ಸಿಕ್ಕಿದ ಬಳಿಕ ಕೇಂದ್ರದ ಜಲ ಆಯೋಗ ಸಹ ಅನುಮತಿ ನೀಡಿದೆ ಆದರೂ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ವಿನಾ ಕಾರಣ ಮೂಗು ತೂರಿಸುತ್ತಿದ್ದಾರೆ ಎಂದು ದೂರಿದರು. ಮೇಕೆದಾಟು ಯೋಜನೆ ಜಾರಿಯಾದರೆ ಬೆಂಗಳೂರು ಸೇರಿದಂತೆ ರಾಜ್ಯದ ಬಹುತೇಕ ಕಡೆ ಕುಡಿಯುವ ನೀರಿಗೆ ಶಾಸ್ವತ ಪರಿಹಾರ ಸಿಗಲಿದೆ. ಆದ್ದರಿಂದ ಕರ್ನಾಟಕ ಸರಕಾರ ಕ್ಷಿಪ್ರ ರೀತಿಯಲ್ಲಿ ಮೇಕೆದಾಟು ಯೋಜನೆ ಕಾರ್ಯಗತಗೊಳಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಮೇಕೆದಾಟು ಯೋಜನೆಗಾಗಿ ಈ ಹಿಂದೆ ಪಾದ



ಯಾತ್ರೆ ನಡೆಸಿದ್ದ ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿ ಗಳಾಗಿ ಅಧಿಕಾರ ವಹಿಸಿಕೊಂಡಿರುವುದರಿಂದ ಕೇಂದ್ರ ಸರಕಾರ ಮತ್ತು ಕೇಂದ್ರ ಜಲಾ ಆಯೋಗದೊಂದಿಗೆ ಸಮನ್ವಯ ಸಾಧಿಸಿ ಆದಷ್ಟು ಬೇಗ ಯೋಜನೆಯನ್ನು ಕೈಗೆತ್ತಿಕೊಳ್ಳಬೇಕು ಎಂದು ಆಗ್ರಹಿಸಿದರು. ತಮಿಳುನಾಡು ಸರಕಾರದ ಮುಖ್ಯಮಂತ್ರಿ ಮತ್ತು ಮಂತ್ರಿಗಳು ಮೇಕೆದಾಟು ಯೋಜನೆ ಅನುಷ್ಠಾನಗೊಳ್ಳುವುದನ್ನು ತಡೆಯುವ ಪ್ರಯತ್ನ ಮಾಡಿದರೆ ತೀವ್ರ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂದರು. ಗೋಷ್ಠಿಯಲ್ಲಿ ಜಿಲ್ಲಾ ಹೋರಾಟ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಸಿದ್ದರಾಜು, ಪುಟ್ಟಸ್ವಾಮಿ, ಪ್ರಧಾನ ಕಾರ್ಯದರ್ಶಿ ನಿಂಗಸ್ವಾಮಿ, ಸಂಚಾಲಕ ಭವಾನಿ ಶಂಕರರಾವ್, ಕಾರ್ಯದರ್ಶಿ ನಂಜುಂಡಸ್ವಾಮಿ ಉಪಸ್ಥಿತರಿದ್ದರು

# ಆದಿವಾಸಿ ಮಹಿಳೆ ಅಳಲು: ಪ.ಕಲ್ಯಾಣಾಧಿಕಾರಿ ಅಭಯ

**ಶಿವಕುಮಾರ ತುಂಬಸೋಗೆ**

ಎಚ್.ಡಿ.ಕೋಟೆ: ಸೈಟುಗಳ ಹದ್ದುಬಸ್ತು ಸಂಬಂಧ ಮೂರು ವರ್ಷಗಳಿಂದ ಪುರಸಭೆಗೆ ಅಲೆದರೂ ಕೆಲಸವಾಗದ ಹಿನ್ನೆಲೆ, ವರ್ತಮಾನ ದಿನಪತ್ರಿಕೆ ವರದಿ ಪರಿಣಾಮ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮಧ್ಯಪ್ರವೇಶಿಸಿ ಮಹಿಳೆಗೆ ಅಭಯ ನೀಡಿದೆ.

ಪುರಸಭೆಯ ವ್ಯಾಪ್ತಿಯ ಹನುಮಂತನಗರದಲ್ಲಿ ಸೈಟುಗಳನ್ನು ಹೊಂದಿದ್ದ ಆದಿವಾಸಿ ಸೋಲಿಗ ಜನಾಂಗದ ಮಹಿಳೆ, ಇ–ಸ್ವತ್ತು ಸೇರಿದಂತೆ ಎಲ್ಲ ದಾಖಲೆಗಳನ್ನು ಹೊಂದಿದ್ದರು. ಹದ್ದುಬಸ್ತು ಗುರುತಿಸುವಂತೆ ಪುರಸಭೆ ಮುಖ್ಯಾಧಿಕಾರಿಗೆ ಮೂರು ವರ್ಷಗಳ ಹಿಂದೆ ಲಿಖಿತ ಮನವಿ ಮಾಡಿದ್ದರು. ಅರ್ಜಿ ಸಂಬಂಧ ಕ್ರಮವಹಿಸಬೇಕಿದ್ದ ಅಧಿಕಾರಿ ಇಲ್ಲ, ಸಲ್ಲದ ಸಬೂಬು ಹೇಳಿ ಕಾಲಹರಣ ಮಾಡಿದ್ದರು.

ನೊಂದ ಮಹಿಳೆ ಪುರಸಭೆ ಮುಖ್ಯಾಧಿಕಾರಿ ಸುರೇಶ್ ವಿರುದ್ಧ ಕ್ರಮ ಕೈಗೊಳ್ಳುವಂತೆ, ಅಹಿಂದ ಒಕ್ಕೂಟದೊಡನೆ ಇದೇ ಮಾ.3ರಂದು ಜಿಲ್ಲಾ ನಗರಾಭಿವೃದ್ಧಿ ಕೋಶಾಧಿಕಾರಿ(ಕಆ)ಗೆ ಲಿಖಿತ ದೂರು ನೀಡಿದ್ದರೂ ಯಾವುದೇ ಪ್ರಯೋಜನವಾಗಿರಲಿಲ್ಲ. ಇದೀಗ, ನೊಂದ ಮಹಿಳೆಯ ಕಥೆ ಕುರಿತು ವರ್ತಮಾನ ದಿನಪತ್ರಿಕೆ ಜೂ.2 ರಂದು ಆದಿವಾಸಿ ಮಹಿಳೆಯನ್ನು ಅಲೆಸುತ್ತಿರುವ ಮುಖ್ಯಾಧಿಕಾರಿ ಎಂಬ ತಲೆಬರಹದಡಿ ಸುದ್ದಿ ಪ್ರಕಟಿಸಿತ್ತು. ಪರಿಣಾಮ ಮಧ್ಯಪ್ರವೇಶಿಸಿರುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಹದ್ದುಬಸ್ತು ಸಂಬಂಧ ತುರ್ತು ಕ್ರಮವಹಿಸಿ ಮಾಹಿತಿ ನೀಡುವಂತೆ ಪುರಸಭೆ ಮುಖ್ಯಾಧಿಕಾರಿಗೆ ಪತ್ರ ಬರೆದಿದೆ. ಶನಿವಾರ ಸ್ಥಳಪರಿಶೀಲನೆ ಮಾಡಲಿರುವ ಅಧಿಕಾರಿ ಅಂದೇ ಹದ್ದುಬಸ್ತು ಗುರುತಿಸುವ ಸಾಧ್ಯತೆಯಿದೆ ಎಂದು ಇಲಾಖೆಗಳ ಮೂಲ ಮಾಹಿತಿ ವರ್ತಮಾನ ದಿನಪತ್ರಿಕೆಗೆ ಲಭ್ಯವಾಗಿದೆ.

ವರ್ತಮಾನ

ಆದಿವಾಸಿ ಮಹಿಳೆಯನ್ನು ಅಲೆಸುತ್ತಿರುವ ಪುರಸಭೆ ಮುಖ್ಯಾಧಿಕಾರಿ



### ಮುಖ್ಯಾಧಿಕಾರಿಗೆ ಪತ್ರ ಬರೆದ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ

**ಆದಿವಾಸಿ ಮಹಿಳೆಯಾದ ಮಧುಮಾಲತಿ ಪುರಸಭೆ ವ್ಯಾಪ್ತಿ ಸೈಟುಗಳನ್ನು ಹೊಂದಿದ್ದು, ಅಗತ್ಯ ದಾಖಲೆ ಗಳನ್ನು ಹೊಂದಿದ್ದಾರೆ. ಅಳತೆ ಮಾಡಿ ಹದ್ದುಬಸ್ತು ಗುರುತಿಸಿಕೊಡುವಂತೆ 2023ರಿಂದ ನಿಮ್ಮ ಕಚೇರಿಗೆ ಮನವಿ ಸಲ್ಲಿಸಿದ್ದಾರೆ. ಆದರೆ, ನೀವು ಈವರೆಗೂ ನಿವೇ ಶನಗಳನ್ನು ಗುರುತಿಸಿಕೊಟ್ಟಿಲ್ಲ ಎಂದು ವರ್ತಮಾನ ದಿನಪತ್ರಿಕೆಯಲ್ಲಿ ಸುದ್ದಿ ಪ್ರಕಟವಾಗಿದೆ. ಪತ್ರಿಕೆ ಮುಖೇನ**



**ಆದಿವಾಸಿ ಸೋಲಿಗ ಜನಾಂಗದ ಮಹಿಳೆಯ ಅಳನ್ನು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಗಮನಿಸಿದೆ. ಈ ಸಂಬಂಧ ತುರ್ತಾಗಿ ಹದ್ದುಬಸ್ತು ಗುರುತಿಸಿಕೊಡುವಂತೆ ಪ.ಕಲ್ಯಾಣಾಧಿಕಾರಿ ಜಿ.ಆರ್. ಮಹೇಶ್, ಪುರಸಭೆ ಮುಖ್ಯಾಧಿಕಾರಿಗೆ ಪತ್ರ ಬರೆದಿದ್ದು, ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ ಸಮನ್ವ ಯಾಧಿಕಾರಿ ಮೈಸೂರು ಅವರಿಗೆ ಮಾಹಿತಿ ರವಾನಿಸಿದ್ದಾರೆ.**

**ವರ್ತಮಾನ ವರದಿ ಪರಿಣಾಮ**

## ಪ್ರಕೃತಿ ನಾಶ.... ಮಾನವನ ವಿನಾಶ

ಮಕ್ಕಳ ಮೂಲಕ ಆ ಸಸಿಗಳ ಪಾಲನೆ ಪೋಷಣೆ ಮಾಡಿದಾಗ ಸಂತೋಷ ಆದರೆ ಇದೊಂದು ದಿನ ಆಚರಿಸಿ ಮರೆತು ಬಿಡುವ ಚಾಳಿ ಮುಂದುವರಿಯಬಾರದು. ಕಾರಣ ಈ ಸೃಷ್ಟಿ ನಮ್ಮನ್ನು ಮರೆಯುವುದೇ ಖಂಡಿತಾ ಇಲ್ಲ. ಕಾಲ ಕಾಲಕ್ಕೆ ಮಳೆ ಬೆಳೆ ಕೊಟ್ಟು ನಮ್ಮನ್ನು ಕಾಪಾಡುವ ತಣ್ಣನೆಯ ಗಾಳಿ ಬೆಳಕು ನಮ್ಮ ಆರೋಗ್ಯ ಸರಿಯಾದ ರೀತಿಯಲ್ಲಿ

ಇರಲು ಕಾರಣವಾದ ಈ ಪರಿಸರವನ್ನು ಮರೆಯುವುದು ಎಷ್ಟು ಸರಿ. ಜನಸಂಖ್ಯೆ ಜಾಸ್ತಿಯಾದಂತೆ ವಾಹನಗಳ ಭರಾಟೆ ರಸ್ತೆಯ ಅಗಲೀಕರಣ ಮನೆ ಕಟ್ಟುವ ಅವಸರದಲ್ಲಿ ಭೂಮಿಯಲ್ಲಿ ಮರಗಿಡಗಳು ಬರಿದಾಗಿ ವಾತಾವರಣ ಕಲುಷಿತವಾಗುತ್ತಿದೆ. ಆಧುನಿಕತೆಗೆ ಮಾರು ಹೋದ ಮನುಷ್ಯ ಉತ್ಪಾದನೆಯ ಹೆಸರಿನಲ್ಲಿ ಪರಿಸರಕ್ಕೆ ಆಗುವ ತೊಂದರೆಯ ಬಗ್ಗೆ ತಿಳಿವಳಿಕೆ ಇಲ್ಲದೆ ಮುಂದುವರೆಯುತ್ತಿದ್ದಾರೆ. ಭೂಮಿಯ ತಾಪಮಾನ ಜಾಸ್ತಿ ಆಗುತ್ತಿದೆ. ಪರಿಸರ ನಮ್ಮ ಮನೆ. ಮನೆಯನ್ನು ಹೇಗೆ ಸ್ವಚ್ಛ ಪರಿಶುದ್ಧವಾಗಿ ಇಟ್ಟುಕೊಳ್ಳುತ್ತೇವೊ ಅದೇ ಕಾಳಜಿ ಪರಿಸರದ ಬಗ್ಗೆ ಇರಬೇಕು. ಆದಷ್ಟು ಮನೆಯ ಸುತ್ತ ಮುತ್ತ ಗಿಡಮರ ಬೆಳೆಸಿ ಪ್ಲಾಸ್ಟಿಕ್ ಬಳಕೆ ಬಿಟ್ಟು ತಾನು ತನ್ನ ಮನೆ ತನ್ನ ಬೀದಿ ತನ್ನ ಊರು ಹೀಗೆ ಎಲ್ಲದರ ಕುರಿತು ಮನುಷ್ಯನಲ್ಲಿ ಪರಿಸರದ ಬಗ್ಗೆ ಕಾಳಜಿ ಸ್ವ ಇಚ್ಛೆಯಿಂದ ಹೊರಹೊಮ್ಮಿದಲ್ಲಿ ಮಾತ್ರ ಪರಿಸರವನ್ನು ಕಾಪಾಡಲು ಸಾಧ್ಯ ..ಬನ್ನಿ ಎಲ್ಲರೂ ಒಂದಾಗಿ ಪರಿಸರವನ್ನು ಸ್ವಚ್ಛವಾಗಿ ಇಡೋಣ ಮರ ಗಿಡ ಬೆಳೆಸೋಣ .

### ಎಚ್.ವಿ.ರಾಜೀವ್ ಸ್ನೇಹ ಬಳಗದಿಂದ ಲಕ್ಷವೃಕ್ಷ ಅಭಿಯಾನಕ್ಕೆ ಚಾಲನೆ

# ನಮಗೆ ಅಭಿವೃದ್ಧಿಯಲ್ಲ, ಸಮೃದ್ಧಿ ಬೇಕು: ಪ್ರೊ.ಕೃಷ್ಣೇಗೌಡ

ಮೈಸೂರು: ನಮ್ಮ ಸರ್ಕಾರಗಳು ಅಥವಾ ವ್ಯವಸ್ಥೆ ಅಭಿವೃದ್ಧಿ ಹೆಸರಲ್ಲಿ ಸೃಷ್ಟಿಸುತ್ತಿರುವ ಅದ್ವಾನಗಳನ್ನು ನೋಡಿದರೆ ಅಸಹ್ಯ ಆಗುತ್ತಿದೆ. ನಮಗೆ ಬೇಕಿರುವುದು ಅಭಿವೃದ್ಧಿಯಲ್ಲ, ಸಮೃದ್ಧಿ ಎಂದು ನಿವೃತ್ತ ಪ್ರಾಧ್ಯಾಪಕ ಪ್ರೊ. ಕೃಷ್ಣೇಗೌಡ ಹೇಳಿದರು.

ಎಚ್.ವಿ.ರಾಜೀವ್ ಸ್ನೇಹ ಬಳಗದ ವತಿಯಿಂದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಯೋಗದಲ್ಲಿ ಮೈಸೂರು– ಊಟಿ ರಸ್ತೆಯ ಬಂಡೀಪಾಳ್ಯ ಸಮೀಪದ ಹಸಿರು ಮೈಸೂರು ನರ್ಸರಿಯಲ್ಲಿ ಗುರುವಾರ ಆಯೋಜಿಸಿದ್ದ ?ಹಸಿರು ಮೈಸೂರು–ಲಕ್ಷವೃಕ್ಷ ಅಭಿಯಾನ? ಕಾರ್ಯಕ್ರಮದಲ್ಲಿ ಮಾತನಾಡಿದರು.



ನಮ್ಮ ಸರ್ಕಾರಗಳು ಅಥವಾ ವ್ಯವಸ್ಥೆ ಅಭಿವೃದ್ಧಿ ಹೆಸರಲ್ಲಿ ಸೃಷ್ಟಿಸುತ್ತಿರುವ ಅದ್ವಾನಗಳನ್ನು ನೋಡಿದರೆ ಅಸಹ್ಯ ಆಗುತ್ತಿದೆ. ಲಂಡನ್ ನಗರದಲ್ಲಿ ಒಂದೇ ಒಂದು ಮೇಲ್ಸೇತುವೆ ಇಲ್ಲ. ಆದರೆ ನಮ್ಮಲ್ಲಿ ವಾಹನ ದಟ್ಟಣೆ ಆಗುವ ಜಾಗದಲ್ಲೆಲ್ಲ ಮೇಲ್ಸೇತುವೆ ಕಟ್ಟುತ್ತಿದ್ದೇವೆ. ಇದರಿಂದ ಇನ್ನಷ್ಟು ಕಾರುಗಳು ರಸ್ತೆಗೆ ಬರುತ್ತಿವೆ. ಸಮೃದ್ಧವಾದ ಪರಿಸರವನ್ನು ಅಭಿವೃದ್ಧಿ ಹೆಸರಲ್ಲಿ ಹಾಳು ಮಾಡುತ್ತಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.

ಪರಿಸರಕ್ಕೆ ನಮ್ಮ ಅಗತ್ಯಗಳನ್ನು ಪೂರೈಸುವ ಶಕ್ತಿ ಇದೆ. ದುರಾಸೆಗಳನ್ನು ಅಲ್ಲ ಎಂದು ಮಹಾತ್ಮ ಗಾಂಧಿ ಹೇಳಿದ್ದಾರೆ. ಮನುಷ್ಯನ ಅತಿಯಾಸೆ, ಕೊಳ್ಳುಬಾಕುತನಗಳಿಗೆ ಮಿತಿಯೇ ಇಲ್ಲ. ಇದರಿಂದಾಗಿ ಪರಿಸರದ ಮೇಲೆ ಉಂಟಾಗಿರುವ ದುಷ್ಪರಿಣಾಮಗಳನ್ನು ಅಂದಾಜು ಮಾಡುವುದಕ್ಕೂ ಸಾಧ್ಯವಿಲ್ಲ. ಪರಿಸರದ ಬಗ್ಗೆ ಮನುಷ್ಯ ಇನ್ನಷ್ಟು ಸೂಕ್ಷ್ಮ ಆಗಬೇಕಿದೆ ಎಂದು ಸೂಚ್ಯವಾಗಿ ಹೇಳಿದರು.

ವಿದೇಶಗಳಲ್ಲಿ ಸಾಹೇಬ– ಜವಾನ ಒಂದೇ ಬಸ್‌ನಲ್ಲಿ ಓಡಾಡುತ್ತಾರೆ. ನಮ್ಮಲ್ಲಿ ಕಾರು ಘನತೆಯ ಸಂಕೇತವಾಗಿದೆ. ಯುವಕ–ಯುವತಿಯರಂತೂ ಒಂದು ಕಾಫಿ ಕುಡಿಯಲು ಮೈಸೂರಿನಿಂದ ಬೆಂಗಳೂರಿಗೆ ಹೋಗಿ ಬರುವ ಅಭ್ಯಾಸ ಮಾಡಿಕೊಂಡಿದ್ದಾರೆ. ಅದಕ್ಕೆ ಬೇಕಾಗುವ ಇಂಧನ, ಉಂಟಾಗುವ ಪರಿಸರ ಮಾಲಿನ್ಯ ಯಾವುದರ ಬಗ್ಗೆಯೂ ಅವರಿಗೆ ಅಂದಾಜೂ ಇಲ್ಲ. ಪೋಷಕರು ಅವರಿಗೆ ಸೈಕಲ್ ಹೊಡಿ ಮೈನ ಖಂಡ ಗಟ್ಟಿಯಾಗುತ್ತದೆ ಎಂದು ಹೇಳಿಕೊಡಬೇಕು. ಅವರಿಂದಲೇ ಗಿಡ ನೆಡಿಸಿ ಪರಿಸರ ಉಳಿಸಿದ್ದೇವೆ ಎಂದುಕೊಳ್ಳಬಾರದು ಎಂದು ಸಲಹೆ ನೀಡಿದರು.

**ವೇಗ, ಬೆಳಕು, ಶಬ್ಧದ ಹುಚ್ಚು**

ಮನುಷ್ಯನಿಗೆ ಇತ್ತೀಚೆಗೆ ವೇಗ, ಬೆಳಕು ಹಾಗೂ ಶಬ್ಧದ ಹುಚ್ಚು ಹೆಚ್ಚಾಗಿದೆ. ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಹಸಿರು ದೀಪ ಹೊತ್ತುವುದಕ್ಕೂ ಕಾಯುವುದಿಲ್ಲ, ಹಳದಿ ಸಿಗ್ನಲ್‌ನಲ್ಲೇ ವಾಹನ ಚಲಾಯಿಸಿ 2 ಸೆಕೆಂಡ್ ಉಳಿಸಿ ಸಾಧಿಸಿದ್ದು ಏನು ? ಹುಟ್ಟು, ಸಾವು, ಹಬ್ಬ, ಸಂಭ್ರಮ ಎಲ್ಲದ್ದಕ್ಕೂ ಗದ್ದಲ ಮಾಡುವ ಅಗತ್ಯವಿದೆಯೇ ಬೆಳಕಿಗಿಂತಲೂ ಕತ್ತಲೆಯಲ್ಲಿ ಆಗುವ ಸೃಷ್ಟಿಕ್ರಿಯೆ ದೊಡ್ಡದು. ಇದೆಲ್ಲವನ್ನೂ ನಾವು ಅರ್ಥ ಮಾಡಿಕೊಳ್ಳುತ್ತಿಲ್ಲ. ಬಲ್ಬ್‌ವೊಂದು ಹೊರಸೂಸುವ ಬೆಳಕನ್ನು ಅಳೆಯುತ್ತೇವೆ, ಅದೇ ಬಲ್ಬ್ ಉಂಟುಮಾಡುವ ಶಾಖವನ್ನು ನಾವು ಅಳೆಯುತ್ತಿಲ್ಲ ಎಂದು ಸೂಚ್ಯವಾಗಿ ಹೇಳಿದರು.

ಏಷ್ಯಾನೆಟ್ ಸುವರ್ಣ ನ್ಯೂಸ್ ಸಂಪಾದಕ ಅಜಿತ್ ಹನುಮಕ್ಕನವರ್ ಮಾತನಾಡಿ, ಪರಿಸರವನ್ನು ಪರಿಸರದ ಪಾಡಿಗೆ ಬಿಡುವುದೇ ನಿಜವಾದ ಸಂರಕ್ಷಣೆ. ಮನುಷ್ಯ ಎಲ್ಲಿಗೆ ಕಾಲಿಟ್ಟಿಲ್ಲವೋ ಅಲ್ಲಿಯೇ ನಿಜವಾದ ಪರಿಸರ ಉಳಿದಿದೆ. ಹಾಲು ಮತ್ತು ಡೈಪರ್ ಬಳಕೆ ಆಧಾರದ ಮೇಲೆ ಪ್ರತಿ ಎರಡೂವರೆ ವರ್ಷದ ಮಗು 9 ಮರ ಕಡಿ ದಂತೆ ಆಗಿದೆ ಎಂದು ಅಧ್ಯಯನವೊಂದು ಹೇಳಿದೆ ಎಂದರು.

ಎಲ್ಲವನ್ನೂ ಅಳವಡಿಸಿಕೊಳ್ಳುವ ಮತ್ತು ಪರಸ್ಪರ ಸಹಕಾರ ನೀಡುವ ಗುಣದಿಂದ ಮನುಷ್ಯ ಬೇರೆಲ್ಲ ಜೀವರಾಶಿಗಳಿಗೂ ಭಿನ್ನವಾಗಿದ್ದಾನೆ. ಇಷ್ಟೆಲ್ಲ ಅಂತರಿಕ್ಷ ಅಧ್ಯಯನದ ನಂತರವೂ ಮನುಷ್ಯ ಬದುಕಬಲ್ಲ ಮತ್ತೊಂದು ಗ್ರಹ ಕಂಡುಹಿಡಿಯಲು ಸಾಧ್ಯವಾಗಿಲ್ಲ. ಇರುವ ಒಂದೇ ಭೂಮಿಯನ್ನು ಜೋಪಾನವಾಗಿ ಉಳಿಸಿಕೊಳ್ಳದೇ ಇದ್ದರೆ ಮನುಷ್ಯನಿಗೆ ಉಳಿವಾಗವಿಲ್ಲ. ಮರ ನೆಡುವ ಅಭಿಯಾನದಂತಹ ಕಾರ್ಯಕ್ರಮಗಳು ಬರಲಿರುವ ಪ್ರಳಯವನ್ನು ಮತ್ತಷ್ಟು ದಿನ ಮುಂದೂಡಬಹುದಷ್ಟೆ ಎಂದರು. ಇದೇ ವೇಳೆ ಮೈಸೂರು ಮಹಾನಗರ ಪಾಲಿಕೆ ಐದು ಸಾವಿರ ಗಿಡಗಳನ್ನು ವಿತರಿಸಲಾಯಿತು. ಸಂಘ–ಸಂಸ್ಥೆಗಳ ಪ್ರತಿನಿಧಿಗಳಿಗೂ ಸಾಂಕೇತಿಕವಾಗಿ ಗಿಡಗಳನ್ನು ವಿತರಣೆ ಮಾಡಲಾಯಿತು. ಚಾಮರಾಜನಗರ ಮರಿಯಾಲದ ಶ್ರೀ ಮುರುಘರಾಜೇಂದ್ರ ಮಹಾ ಸಂಸ್ಥಾನ ಮಠದ ಶ್ರೀ ಇಮ್ಮಡಿ ಮುರುಘರಾಜೇಂದ್ರ ಸ್ವಾಮೀಜಿ, ಸಾಹಿತಿ ಶಿವಪ್ಪ, ನಿವೃತ್ತ ಐಎಫ್ ಎಸ್ ಅಧಿಕಾರಿ ಟಿ.ಬಾಲಚಂದ್ರ, ಹಸಿರು ಮೈಸೂರು ಮತ್ತು ಲಕ್ಷ ವೃಕ್ಷ ರೂವಾರಿ ಎಚ್.ವಿ.ರಾಜೀವ್, ಮಾಜಿ ಮೇಯರ್ ಬಿ.ಎಲ್.ಭೈರಪ್ಪ, ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಮತ್ತಿತರರಿದ್ದರು.

> **ಮೈಸೂರು ನಗರವನ್ನು ಸ್ವಚ್ಛ, ಸುಂದರ ಹಾಗೂ ಸುರಕ್ಷಿತ ನಗರವಾಗಿ ರೂಪಿಸುವ ಉದ್ದೇಶದಿಂದ 2018ರಲ್ಲಿ ಪ್ರಾರಂಭವಾದ ಲಕ್ಷವೃಕ್ಷ ಆಂದೋಲನ ಅತ್ಯಂತ ಯಶಸ್ವಿಯಾಗಿ ನಡೆಯುತ್ತಿದೆ. ನಗರದ ನಿವಾಸಿಗಳ ಉಸಿರಾಟಕ್ಕೆ ಯೋಗ್ಯ ಗಾಳಿ ದೊರಕಿಸುವುದು ಅಭಿಯಾನದ ಉದ್ದೇಶವಾಗಿದ್ದು, ಇದರಲ್ಲಿ ಯಾವುದೇ ಪ್ರತಿಫಲದ ಅಪೇಕ್ಷೆ ಇಲ್ಲ.**
> **ಎಚ್.ವಿ.ರಾಜೀವ್**
> ಅಧ್ಯಕ್ಷ ಸ್ನೇಹ ಬಳಗ

## ಎಸ್.ಪಿ.ಬಾಲಸುಬ್ರಮಣ್ಯಂ ಹುಟ್ಟುಹಬ್ಬ ಆಚರಣೆ ಅರ್ಥಪೂರ್ಣ

ಚಾಮರಾಜನಗರ, ಖ್ಯಾತ ಗಾಯಕರಾದ ಡಾ. ಎಸ್.ಪಿ. ಬಾಲಸುಬ್ರಹ್ಮಣ್ಯಂ ಅವರ 80ನೇ ಹುಟ್ಟುಹಬ್ಬವನ್ನು ಗಾನಗಂಧರ್ವ ಸಾಂಸ್ಕೃತಿಕ ಕಲಾವೇದಿಕೆ ವತಿಯಿಂದ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ ಎಂದು ಯಳಂದೂರಿನ ಅಶ್ವಿನಿ ಆಸ್ಪತ್ರೆಯ ವೈದ್ಯರಾದ ಡಾಕ್ಟರ್ ರಮೇಶ್ ಉಡುಪ, ಮೆಚ್ಚುಗೆ ವ್ಯಕ್ತಪಡಿಸಿದರು

ನಗರದ ಜಿಲ್ಲಾಡಳಿತ ಭವನದ ಬಳಿ ಇರುವ ಡಾ. ರಾಜಕುಮಾರ್ ಜಿಲ್ಲಾ ರಂಗಮಂದಿರದ ಆವರಣದಲ್ಲಿ ಗಿಡವನ್ನು ನೆಟ್ಟು ನೀರು ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಎಸ್ ಪಿ ಬಾಲಸುಬ್ರಹ್ಮಣ್ಯಂ ಅವರು ದಕ್ಷಿಣ ಭಾರತದಲ್ಲಿ ಅತ್ಯಂತ ಜನಪ್ರಿಯ ಗಾಯಕರಾಗಿದ್ದು, ಸಾವಿರಾರು ಹಾಡುಗಳನ್ನು ಹಾಡುವ ಮೂಲಕ ಲಕ್ಷಾಂತರ ಜನರ ಮನಸ್ಸನ್ನು ಗೆದ್ದಿದ್ದಾರೆ, ಅಂತಹವರ ಹೆಸರಿನಲ್ಲಿ ಹುಟ್ಟು ಹಬ್ಬವನ್ನು ಆಚರಿಸಿ ಹಾಗೂ ವಿವಿಧ ಕ್ಷೇತ್ರಗಳ



ಸಾಧಕರಿಗೆ ಸನ್ಮಾನ ಮತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುತ್ತಿರುವುದು ಶ್ಲಾಘನೀಯ ಕೆಲಸ ಎಂದು ತಿಳಿಸಿದರು

ಉದ್ಯಮಿ ಶ್ರೀನಿಧಿ ಕುದರ್ ಕೇಕ್ ಕತ್ತರಿಸಿ ಮಾತನಾಡಿ ಪರಿಸರ ಕಾಪಾಡುವುದು ಎಲ್ಲರ ಜವಾಬ್ದಾರಿ ಏಕೆಂದರೆ ಈ ಭೂಮಿ ಮೇಲೆ ವಾಸಿಸುವ ಪ್ರತಿಯೊಂದು ಜೀವಿಗಳಿಗೂ ಮುಖ್ಯವಾಗಿ ಆಮ್ಲಜನಕ ಅವಶ್ಯವಾಗಿದೆ ಆದರೆ ಇತ್ತೀಚಿಗೆ ನಗರೀಕರಣ ಹೆಚ್ಚುತ್ತಿದ್ದು ಗಿಡ ಮರಗಳು ನಾಶವಾಗುತ್ತಿದೆ ತಾಪಮಾನ ಕೂಡ ಹೆಚ್ಚಾಗುತ್ತಿದ್ದು ವಾತಾವರಣದಲ್ಲಿ ಉಷ್ಣಾಂಶ ಅಧಿಕವಾಗಿದೆ ಹೀಗಾಗಿ ಅದರಿಂದಾಗುವ ದುಷ್ಪರಿ ಣಾಮಗಳನ್ನು ಅನುಭವಿಸಬೇಕಾಗಿದೆ, ಹೀಗಾಗಿ ಪ್ರತಿಯೊಬ್ಬರು ಗಿಡಗಳನ್ನು ನೆಟ್ಟು ಪರಿಸರವನ್ನು ಕಾಪಾಡುವಬೇಕೆಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ವೇದಿಕೆಯಿಂದ ಡಾ. ರಮೇಶ್ ಉಡುಪ ಹಾಗೂ ಡಾ.ಶಶಿಕಲಾ ರಮೇಶ್ ಅವರಿಗೆ ಶಾಲು ಹೊದಿಸಿ ಗೌರವಿಸಲಾಯಿತು. ಲೆಕ್ಕ ಪರಿಶೋಧಕ ಅಧಿಕಾರಿ ಎನ್. ಮಹೇಶ್, ಎಸ್ ಪಿಬಿ ಸಂಘದ ಅಧ್ಯಕ್ಷ ಹೆಚ್.ಎಂ. ಶಿವಣ್ಣ ಮಂಗಲ ಹೊಸೂರು, ಪ್ರಧಾನ ಕಾರ್ಯದರ್ಶಿ ಎನ್. ಜೋಸೆಫ್ ಉಪಾಧ್ಯಕ್ಷರಾದ ವಸಂತ ಬಂಗಾರು ಹಾಗೂ ಸಿ.ಡಿ. ಪ್ರಕಾಶ್, ಬಂಗಾರು, ಅಂತರಾಷ್ಟ್ರೀಯ ಜಾನಪದ ಕಲಾವಿದ ಸಿಎಂ ನರಸಿಂಹಮೂರ್ತಿ, ಗುರುರಾಜ್, ಸಂಪತ್ ಕುಮಾರ್, ನಾಗಮಲ್ಲು, ಕುಮಾರ್, ಸುಂದರ್, ಗಾಯಕ ಶಂಕರ್, ಶಿಕ್ಷಕ ರಂಗನಾಥ್ ಸೇರಿದಂತೆ ಮೊದಲಾದವರು ಇದ್ದರು.

## ಅರಸು ಮಂಡಳಿಯಿಂದ ಸಂಭ್ರಮದ ನಾಲ್ವಡಿ ಜಯಂತಿ



ಮೈಸೂರು: ಮೈಸೂರಿನ ಅರಸು ಮಂಡಳಿ ವತಿಯಿಂದ ಕೃಷ್ಣ ಬುಲೇವಾರ್ಡ್ ರಸ್ತೆಯಲ್ಲಿರುವ ಶ್ರೀ ಚಾಮರಾಜೇಂದ್ರ ಸ್ಕೂಲ್ ಫಾರ್ ಎಕ್ಸಲೆನ್ಸ್ ಸಂಸ್ಥೆ ಆವರಣದಿಂದ ನಾಲ್ವಡಿ ಜಯಂತಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ರಾಜವಂಶಸ್ಥೆ ಪ್ರಮೋದಾ ದೇವಿ ಒಡೆಯರ್, ಕಪಡಿ ಕ್ಷೇತ್ರದ ಮಠಾಧಿಪತಿ ಎಂ.ಎಲ್. ಶ್ರೀ ವರ್ಚಸ್ವಿ ಶ್ರೀಕಂಠ ಸಿದ್ದಲಿಂಗ ರಾಜೇಅರಸ್, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ ಅವರುಗಳು ನಾಲ್ವಡಿ ಕಾರ್ಯಗಳನ್ನು ಸ್ಮರಿಸಿದರು.

> ನೂತನ ಸಿಎಂ ಕುರಿತು ಈ ದಿನ ನಾನು ಯಾರ ವಿರುದ್ಧವು ಮಾತನಾಡುವುದಿಲ್ಲ. ಆದರೆ ರಾಜ್ಯವು ಈಗಾಗಲೇ ಸಾಲದ ಸುಳಿಯಲ್ಲಿದ್ದು ಅದನ್ನು ಮುಖ್ಯಮಂತ್ರಿಗಳು ಹೇಗೆ ನಿರ್ವಹಣೆ ಮಾಡುತ್ತಾರೆ ಕಾದು ನೋಡಬೇಕಾಗಿದೆ. ಪ್ರಮುಖವಾಗಿ ಎಲ್ಲಾ ರಸ್ತೆಗಳು ಗುಂಡಿ ಬಿದ್ದಿದ್ದು ಅವುಗಳ ಅಭಿವೃದ್ಧಿಗೆ ಗಮನಹರಿಸಬೇಕಾಗಿದೆ.
>
> ▸▸ **ಯದುವೀರ್** ಸಂಸದ

### ವಿಶೇಷ ಮೆರವಣಿಗೆ

ಕಂಸಾಳೆ, ವೀರಗಾಸೆ, ಹರಿನಾಮ ಸ್ಮರಣೆ ಮಾಡುವವರು ಮೆರವಣಿಗೆಯ ಮೆರುಗು ಹೆಚ್ಚಿಸಿದರು. ಸಾರೋಟುಗಳಲ್ಲಿ ನಾಲ್ವಡಿ ಅವರ ಸಾಧನೆಯ ಬರಹವುಳ್ಳ ಬ್ಯಾನರ್‌ಗಳು ರಾರಾಜಿಸಿದವು. ಜಯ ಚಾಮರಾಜೇಂದ್ರ ಸ್ಕೂಲ್ ಫಾರ್ ಎಕ್ಸಲೆನ್ಸ್‌ನಿಂದ ಆರಂಭವಾದ ಮೆರವಣಿಗೆಯು ಕೃಷ್ಣರಾಜ ಬುಲೇವಾಡ್ ರಸ್ತೆಯ ಮೂಲಕ, ವಾಣಿ ವಿಲಾಸ ರಸ್ತೆ, ಮಾಧವರಾವ್ ವೃತ್ತ, ಸಯ್ಯಾಜಿರಾವ್ ರಸ್ತೆ ಮೂಲಕ ಸಾಗಿ ಕೃಷ್ಣರಾಜ ವೃತ್ತದಲ್ಲಿ ಸಮಾಪನಗೊಂಡಿತು. ರಥದಲ್ಲಿ ನಾಲ್ವಡಿ ಭಾವಚಿತ್ರ ಕಂಡ ಜನ ದೂರದಿಂದಲೇ ರಾಜನಿಗೆ ಕೈಮುಗಿಯುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

ಈ ವೇಳೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಕೃಷ್ಣರಾಜ ಒಡೆಯರ್ ಮಾಡಿರುವ ಕೆಲಸ ಅವರನ್ನು ಇಂದಿಗೂ ನೆನಪಿಸುವಂತೆ ಮಾಡಿದೆ. ಪ್ರತಿ ತಿಂಗಳು ಅವರ ಕುರಿತು ಕಾರ್ಯಕ್ರಮ ರೂಪಿಸಬೇಕು. ನಾಲ್ವಡಿ ಕೃಷ್ಣರಾಜ ಒಡೆಯರ್ ಹೆಸರಿನಲ್ಲಿ ಅರಸು ಬೋರ್ಡಿಂಗ್ ಸ್ಕೂಲ್ ಮಕ್ಕಳಿಗೆ 1ಲಕ್ಷ ವಿದ್ಯಾರ್ಥಿ ವೇತನ ನೀಡುತ್ತೇವೆ ಎಂದು ಘೋಷಿಸಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ನಾಲ್ವಡಿ ಅವರು ಜಗತ್ತಿಗೆ ಆಡಳಿತ ವ್ಯವಸ್ಥೆ ತೋರಿಸಿಕೊಟ್ಟಿದ್ದಾರೆ. ಅಸ್ಪೃಶ್ಯತೆ ನಿವಾರಣೆ, ಮೀಸಲಾತಿ ಕುರಿತು ಇಂದಿಗೂ ಚರ್ಚೆ ನಡೆಯುತ್ತಿದೆ. ಆದರೆ ಆ ಕಾಲದಲ್ಲೇ ಅವರು ಈ ವ್ಯವಸ್ಥೆಗಳನ್ನು ಜಾರಿಗೆ ತಂದಿದ್ದರು. ಜಗತ್ತೇ ನಿಬ್ಬೆರಗಾಗುವಂತೆ ದೇಶದ ಹಲವು ಪ್ರಥಮಗಳಿಗೆ ಕಾರಣರಾದರು. ಈ ಕಾರಣದಿಂದಲೇ ಮೈಸೂರು ಮಹಾರಾಜರು ಎಂದಾಗ ಉತ್ತಮ ಆಡಳಿತವಷ್ಟೇ ನೆನಪಾಗುತ್ತದೆ? ಎಂದರು. ಕಾರ್ಯಕ್ರಮದಲ್ಲಿ ಮಳವಳ್ಳಿ ಮಂಟೇಸ್ವಾಮಿ ಮಠದ ಪೀಠಾಧಿಪತಿ ಎಂ.ಎಲ್ ವರ್ಚಸ್ವಿ ಶ್ರೀಕಂಠ ಸಿದ್ದಲಿಂಗ ರಾಜೇ ಅರಸ್, ಪೀಠಾಧಿಪತಿ ಜ್ಞಾನಾನಂದ ಚನ್ನರಾಜೇ ಅರಸ್, ಕೊಳ್ಳೇಗಾಲ ತಾಲ್ಲೂಕಿನ ಕುರುಬನ ಕಟ್ಟೆ ಕ್ಷೇತ್ರದ ಧರ್ಮಾಧಿಕಾರಿ ವರುಣ್ ಲಿಂಗರಾಜೇ ಅರಸ್, ಮಳವಳ್ಳಿ ರಾಜ ಬೊಪ್ಪೇಗೌಡನಪುರ ಕ್ಷೇತ್ರದ ಬಿ.ಪಿ.ಭರತ್ ಅರಸ್, ಅರಸು ಮಂಡಳಿ ಅಧ್ಯಕ್ಷ ಶ್ರೀಕಂಠೆರಾಜೇ ಅರಸ್, ರಾಮ ಸೇವಾ ಸಂಘದ ಸುಂದರ್ ರಾಜೇ ಅರಸ್, ಶ್ರೀಕಾಂತ್ ಭಾಗವಹಿಸಿದರು.

## ನಾಳೆ ಸಂತಫಿಲೋಮಿನಾ ಪದವಿ ಪ್ರದಾನ



ಮೈಸೂರು: ಸಂತ ಫಿಲೋಮಿನಾ ಕಾಲೇಜಿನ ಸ್ನಾತಕೋತ್ತರ ಪದವಿ ಪ್ರದಾನ ಸಮಾರಂಭ ಜೂ. 6 ರ ಬೆಳಗ್ಗೆ 10ಕ್ಕೆ ಕಾಲೇಜು ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರಾಚಾರ್ಯ ಡಾ.ರವಿ ಜೆ.ಡಿ.ಸಲ್ಡಾನಾ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಮೈಸೂರು ಡಯೋಸಿಸ್ ವಿಕಾರ್ ಜನರಲ್ ರೆ. ಎಂ. ಆಂತಪ್ಪ, ಡಾ. ಮನಮೋಹನ್‌ಸಿಂಗ್ ವಿವಿಯ ಉಪ ಕುಲಪತಿ ಪ್ರೊ.ಬಿ. ರಮೇಶ್ ಅತಿಥಿಗಳಾಗಿರುವರೆಂದರು. ಆಡಳಿತ ವಿಭಾಗದ ಮುಖ್ಯಸ್ಥ ವಿಕ್ಟೋರ್ ರೆ.ಡಾ. ಲೂರ್ದು ಪ್ರಸಾದ್ ಜೋಸೆಫ್ ಮಾತನಾಡಿ, ಸಮಾರಂಭದಲ್ಲಿ ವಿವಿಧ ವಿಭಾಗಗಳ 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪದವಿ ಸ್ವೀಕರಿಸಲಿದ್ದು, ಅತ್ಯುತ್ತಮ ಸಾಧನೆ ಮಾಡಿದವರಿಗೆ 1 ಚಿನ್ನದ ಪದಕ ಬಹುಮಾನವಾಗಿ ನೀಡಲಾಗುವುದು. ಇದಲ್ಲದೆ, ಪ್ರತಿಷ್ಠಿತ ಸರ್.ಟಿ. ತಂಬುಚೆಟ್ಟಿ ವಿದ್ಯಾರ್ಥಿ ವೇತನ ಸಹಾ ನೀಡಲಾಗುತ್ತದೆಂದು ವಿವರಿಸಿದರು. ಫಾ.ಎಸ್.ರೋಷನ್, ಡಾ.ಯಮುನಾ, ಡಾ.ನೂರ್ ಮುಬಾಷಿರ್ ಇದ್ದರು.

## ಕುಸಿದು ಬಿದ್ದು ಮಹಿಳೆ ಸಾವು

ಚಾಮರಾಜನಗರ, ಕಾಲಿಗೆ ಹಗ್ಗ ಸುತ್ತಿಕೊಂಡು ಒದ್ದಾಡುತ್ತಿದ್ದ ಹಸುವನ್ನು ರಕ್ಷಿಸಲು ಹೋಗುತ್ತಿದ್ದ ಮಹಿಳೆ ಕುಸಿದು ಬಿದ್ದು ಕೊನೆಯುಸಿರೆಳೆದ ಘಟನೆ ಕೊಳ್ಳೇಗಾಲ ತಾಲೂಕಿನ ಜಾಗೇರಿಯ ಪಾಸ್ಕಲ್ ನಗರದಲ್ಲಿ ನಡೆದಿದೆ.

ಪಾಸ್ಕಲ್ ನಗರದ ಕಮಲಾ (42) ಮೃತ ಮಹಿಳೆ. ಮೇಯಲು ಬಿಟ್ಟಿದ್ದ ಹಸುವನ್ನು ಕರೆತರಲು ಹೋದಾಗ ಕಾಲಿಗೆ ಹಗ್ಗ ಸುತ್ತಿಕೊಂಡು ಹಸು ಒದ್ದಾಡುತ್ತಿದ್ದುದನ್ನು ಕಂಡಿದ್ದಾರೆ. ಇದನ್ನು ಕಂಡು ಗಾಬರಿಯಿಂದ ಓಡಿದಾಗ ಕುಸಿದು ಬಿದ್ದು ಅಸ್ವಸ್ಥಗೊಂಡಿದ್ದಾರೆ. ತಕ್ಷಣವೇ ಸಂಬಂಧಿಕರು ಇವರನ್ನು ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಗೆ ಕರೆದೊಯ್ದರಾದರೂ ಅಷ್ಟರಲ್ಲೇ ಕಮಲಾ ಮೃತಪಟ್ಟಿದ್ದರು. ಕೂಲಿಗೆ ತೆರಳಿದ್ದ ಪತಿ ಆಂತೋನಿಸ್ವಾಮಿ ಆಸ್ಪತ್ರೆಗೆ ಬಂದು ಗೋಳಾಡುತ್ತಿದ್ದರು. ಕೊಳ್ಳೇಗಾಲ ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# 28ರಂದು ಪ್ರತಿಭಾ ಪುರಸ್ಕಾರ

### ಎಸ್‌ಎಸ್‌ಎಲ್‌ಸಿ ದ್ವಿತೀಯ ಪಿಯೂ ತೇರ್ಗಡೆಯಾದ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ



ರಾಮನಗರ: ಇದೇ ಜೂನ್ 28ರಂದು ಎಸ್.ಎಸ್.ಎಲ್.ಸಿ ಮತ್ತು ಪಿಯೂಸಿ ತೇರ್ಗಡೆಯಾದ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಗೆ ಇದೇ ಜೂನ್ 28ರಂದು ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಮುಖಂಡ ಹಾಗು ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷ ಜನಾರ್ಧನ್ ಆಚಾರ್ ತಿಳಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಅಧ್ಯಕ್ಷ ಕೆ.ಪಿ. ನಂಜುಂಡಿ ಅವರ ಅಧ್ಯಕ್ಷತೆಯಲ್ಲಿ ಈ ಕಾರ್ಯಕ್ರಮ ಆಯೋಜನೆಯಾಗಿದೆ.

ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಐದು ಸಾವಿರಕ್ಕೂ ಹೆಚ್ಚು ವಿದ್ಯಾರ್ತಿಗಲಿಗೆ ಪ್ರಶಸ್ತಿ ಪ್ರತ್ರ, ಪ್ರೋತ್ಸಾಹಧನ ನೀಡಿ ಅಭಿನಂದಿಸಲಾಗಿತ್ತು. ಈ ಕಾರ್ಯಕ್ರಮವೇ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರಕ್ಕೆ ಪ್ರೇರಣೆ ಎಂದರು.

### ಜೂನ್ 20ರೊಳಗೆ ಅರ್ಜಿ ಸಲ್ಲಿಸಬೇಕು

**ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ದಿವ್ಯ ಸಾನಿಧ್ಯವಹಿಸಲಿದ್ದಾರೆ. ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯೂಸಿ ತೇರ್ಗಡೆಯಾದ ಎಲ್ಲ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಬಹುದು. ಹೀಗೆ ಅರ್ಜಿ ಸಲ್ಲಿಸಲು ಜೂನ್ 20 ಕೊನೆ ದಿನ ಎಂದು ಅವರು ವಿವರಿಸಿದರು.**

2026ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯಸಿ ತೇರ್ಗಡೆಯದ ವಿದ್ಯಾರ್ಥಿಗಳು ಜಾತಿ ಪ್ರಮಾಣ ಪತ್ರ ಹಾಗೂ ಅಂಕಪಟ್ಟಿ ನಕಲು ಪ್ರತಿಯೊಂದಿಗೆ ಸುಂದರ್ –9886423935 ಹಾಗೂ ಸಂತೋಷ್– 9945008888 ಮೊಬೈಲ್ ಸಂಖ್ಯೆಗಳಿಗೆ ತಮ್ಮ ಅರ್ಜಿಗಳನ್ನು ಜೂ.20ರೊಳಗೆ ತಲುಪಿಸಬೇಕು ಎಂದರು. ಕನಕಪುರ ನಗರಸಭೆ ಸದಸ್ಯ ಕೆ.ವಿ.ರಾಘವೇಂದ್ರಚಾರ್, ಆರ್‌ಬಿಎಲ್ ಫಿಟ್ನೆಸ್ ಮಾಲೀಕ ಲೋಕೇಶ್, ಸಮುದಾ0ಯದ ಮುಖಂಡರಾದ 0ಯೋಗೇಶ್, ಕುಮಾರ್, ಜನಾರ್ಧನ್, ಸಿದ್ದರಾಜು, ಲೋಕೇಶ್, ಸಂತೋಷ್, ಕೆಂಪಾಚಾರ್, ಪ್ರಸನ್ನ, ಕುಮಾರ್, ಬಿಡದಿ ಸಂತೋಷ್ ಮುಂತಾದವರಿದ್ದರು.

### ಅರ್ಜಿ ಸಲ್ಲಿಸಲು ಇವರನ್ನು ಸಂಪರ್ಕಿಸಿ

**ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿನಯ್ ಮಾತನಾಡಿ ಸಮುದಾಯದ ಜನರಲ್ಲಿ ಶಿಕ್ಷಣದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯಾಧ್ಯಕ್ಷರಾದ ಕೆ.ಪಿ. ನಂಜುಂಡಿ ಅವರು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಹೆಚ್ಚೆಚ್ಚು ಜನರು ಭಾಗವಹಿಸುವ ಮೂಲಕ ಕಾ0ರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಪ್ರಮಾಣ ಪತ್ರ, ಸ್ಮರಣಿಕೆ ಜತೆಗೆ ಪೋಷಕರನ್ನೂ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು.**

## ಥ್ರೋಟಲ್ ವ್ಯಾಲಿ ಡರ್ಟ್ ಟ್ರ್ಯಾಕ್ ರ್ಯಾಲಿ

ಮೈಸೂರು: ನಗರದ ಹೊರ ವಲಯದಲ್ಲಿ ಶ್ರೀರಂಗಪಟ್ಟಣ ಬಳಿಯ ಕೆ.ಶೆಟ್ಟಿಹಳ್ಳಿಯ ಸುಮಾರು ನಾಲ್ಕೂವರೆ ಎಕರೆ ಪ್ರದೇಶದಲ್ಲಿ ಐಆರ್‌ಎಂ ಥ್ರೋಟಲ್ ವ್ಯಾಲಿ ಡರ್ಟ್ ಟ್ರ್ಯಾಕ್ ನಿರ್ಮಿಸಿದ್ದು, ಮೋಟಾರ್ ಸ್ಪೋರ್ಟ್ಸ್‌ನಲ್ಲಿ ಆಸಕ್ತಿ ಇರುವವರು ಭೇಟಿ ನೀಡಿ ತರಬೇತಿ ಪಡೆಯಬಹುದಾಗಿದೆ ಹಾಗೂ ಮೋಟಾರ್ ಸ್ಪೋರ್ಟ್ಸ್‌ನಲ್ಲಿ ಬಳಸುವ ವಾಹನದಲ್ಲಿ ಪ್ರಯಾಣದ ವಿಶಿಷ್ಟ ಅನುಭವ ಪಡೆಯಬಹುದಾಗಿದೆ ಎಂದು ಮಾಲೀಕ ರಕ್ಷಿತ್ ಅಯ್ಯರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಮ್ಮ ಸಹೋದರ ರೋಹಿತ್ ಅಯ್ಯರ್‌ರೊಡನೆ ಸೇರಿಕೊಂಡು ತಾವಿದನ್ನು ಸ್ಥಾಪಿಸಿದ್ದು, ಜೂ. 7 ರಂಧು ಬೆಳಗ್ಗೆ 11ಕ್ಕೆ ಉದ್ಘಾಟನೆಗೊಳ್ಳಲಿದೆ. ಮಧ್ಯಾಹ್ನ 2 ಕ್ಕೆ ಮೋಟಾರ್ ರೇಸಿಂಗ್ ಪ್ರಾತ್ಯಕ್ಷಿಕೆ ವೀಕ್ಷಿಸಬಹುದಾಗಿದೆ. ಆಸಕ್ತಿ ಇದ್ದಲ್ಲಿ ಅಂತಹ ಕಾರಿನಲ್ಲಿ ಪೂರ್ಣ ಸುರಕ್ಷತಾ ಮಾನದಂಡದೊಡನೆ ಕುಳಿತ ರೋಮಾಂಚಕಾರಿ ಅನುಭವ ಪಡೆಯಬಹುದಾಗಿದೆ. ತಾವು ಈಗಾಗಲೇ ಹಲವಾರು ಮೋಟಾರ್ ರೇಸಿಂಗ್‌ನಲ್ಲಿ ಭಾಗಿಯಾಗಿ ಅನೇಕ ಬಹುಮಾನ ಪಡೆದಿದ್ದು, ಇತರೆ ಕ್ರೀಡೆಗಳಂತೆ ಮೋಟಾರ್ ರೇಸಿಂಗ್ ಸಹಾ ರೋಮಾಂಚಕಾರಿಯಾಗಿರುವ ಕಾರಣ ಇದನ್ನು ಹೆಚ್ಚು ಜನಪ್ರಿಯಗೊಳಿಸಲು, ಈ ಹವ್ಯಾಸ ರೂಢಿಸಿಕೊಳ್ಳಬೇಕೆನ್ನುವವರಿಗೆ ತರಬೇತಿ ನೀಡಲು ಇದನ್ನು ಆರಂಭಿಸಿರುವುದಾಗಿ ಮಾಹಿತಿ ನೀಡಿದರು. ರೋಹಿತ್ ಅಯ್ಯರ್, ಸಚಿನ್, ಚರಿತಾ ಗೌಡ ಇದ್ದರು.




## ನಾಳೆ ನಮ್ಮ ಚಾ.ನಗರ ಸಾಂಸ್ಕೃತಿಕ ಹಬ್ಬ

ಚಾಮರಾಜನಗರ, ಡಾ.ಎಸ್.ಪಿ.ಬಾಲಸುಬ್ರಹ್ಮಣ್ಯಂ ಗಾನ ಗಂಧರ್ವ ಸಾಂಸ್ಕೃತಿಕ ಕಲಾ ವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂ.6 ರಂದು ನಗರದಲ್ಲಿ ನಮ್ಮ ಚಾಮರಾಜನಗರ ಸಾಂಸ್ಕೃತಿಕ ಹಬ್ಬ ಆಯೋಜಿಸಲಾಗಿದೆ ಎಂದು ವೇದಿಕೆಯ ಅಧ್ಯಕ್ಷ ಎಚ್.ಎಂ.ಶಿವಣ್ಣ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಂದು ಮಧ್ಯಾಹ್ನ 2 ಗಂಟೆಗೆ ನಗರದ ವರನಟ ಡಾ.ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಕಾರ್ಯಕ್ರಮ ನಡೆಯಲಿದ್ದು ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಸನ್ಮಾನ,ಪ್ರತಿಭಾ ಪುರಸ್ಕಾರ ಮಾಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮವನ್ನು ಚುಡಾ ಅಧ್ಯಕ್ಷ ಮಹಮ್ಮದ್ ಆಸ್ಕರ್ ಉದ್ಘಾಟಿಸಲಿದ್ದು, ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲಾಧಿಕಾರಿ ಶ್ರೀರೂಪ ಪುಷ್ಪಾರ್ಚನೆ ಮಾಡಲಿದ್ದು ಮುಖ್ಯ ಅತಿಥಿಗಳಾಗಿ ಎಡಿಸಿ ಜವರೇಗೌಡ, ಡಿವೈಎಸ್ಪಿ ಸ್ನೇಹರಾಜ್ , ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ




ಇಲಾಖೆ ಯ ಸಹಾಯಕ ನಿರ್ದೇಶಕ ಬಿ.ಎಸ್. ರಾಜು, ಉದ್ಯಮಿ ಶ್ರೀ ನಿಧಿ ಕುದರ್ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ಯಳಂದೂರಿನ ಅಶ್ವಿನಿ ಆಸ್ಪತ್ರೆಯ ಡಾ.ರಮೇಶ್ ಉಡುಪ ಹಾಗೂ ಡಾ.ಶಶಿಕಲಾ ರಮೇಶ್ ಅವರಿಗೆ ಗಡಿನಾಡ ವೈದ್ಯ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಅಲ್ಲದೇ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಚಾಲಕ ಕಲೆ ನಟರಾಜು ವೇದಿಕೆ ಉಪಾಧ್ಯಕ್ಷೆ ವಸಂತಮ್ಮ, ಸದಸ್ಯರಾದ ಲಿಂಗರಾಜು, ಕೆಇಬಿ ಶಿವಶಂಕರ್ ಹಾಜರಿದ್ದರು.

## ಒತ್ತುವರಿ ತೆರವು ಕಾರ್ಯ ಆರಂಭ




ಗುಂಡ್ಲುಪೇಟೆ: ತಾಲ್ಲೂಕಿನ ಚನ್ನಾಜಯ್ಯನಹುಂಡಿ ಗ್ರಾಮದಲ್ಲಿ ಸರ್ವೆ ನಂ 138 ರಲ್ಲಿ ಒತ್ತುವರಿಯಾಗಿದ್ದ ಸುಮಾರು 18 ಎಕರೆ .38ಗುಂಟೆ ಜಾಗವನ್ನು ತಹಶೀಲ್ದಾರ್ ಎಂ ಎಸ್ ತನ್ಮಯ್ ಆದೇಶದಂತ ರಾಜಸ್ವನಿರೀಕ್ಷಕ, ಗ್ರಾಮಲೆಕ್ಕಾಧಿಕಾರಿ ಹಾಗೂ ಪಿಡಿಓ ನೇತೃತ್ವದಲ್ಲಿ ಒತ್ತುವರಿ ತೆರವು ಕಾರ್ಯ ಆರಂಭಿಸಲಾಗಿತ್ತು.

ಗ್ರಾಮಕ್ಕೆ ಬಸವ ಭವನ ನಿರ್ಮಾಣಕ್ಕೆ ಸರ್ಕಾರಿ ಜಾಗವನ್ನು ನೀಡದೆ ಇದು ನಮ್ಮಜಾಗ ಎಂದು ಕೆಲವರು ಅನಧಿಕೃತವಾಗಿ ಸರ್ಕಾರಿ ಗೋಮಾಳ ಒತ್ತುವರಿ ಮಾಡಿಕೊಂಡಿದ್ದರು ಅನೇಕ ತಿಂಗಳ ಹೋರಾಟದ ಫಲವಾಗಿ ಕೊನೆಗೂ ಒತ್ತುವರಿ ತೆರವು ಮಾಡಲು ಶಾಸಕರು ಹಾಗೂ ತಹಶೀಲ್ದಾರ್ ರವರು ಸೂಚಿಸಿದ್ದು ಗ್ರಾಮದ ಮಕ್ಕಳು,ಯುವಕರಿಗೆ ಆಟದ ಮೈದಾನ, ಸ್ಮಶಾನ ನಿರ್ಮಾಣಕ್ಕೆ ಅನುಕೂಲವಾಗಲಿದೆ ಅಲ್ಲದೆ ಜಾನುವಾರುಗಳ ಮೇವಿಗೆ ಅನುಕೂಲವಾಗಲಿದೆ ಎಂದು ಗ್ರಾಮದ ಮುಖಂಡ ಮಲ್ಲು ರವರು ತಿಳಿಸಿದರು.

ಅನೇಕ ವರ್ಷಗಳಿಂದ ಗೋಮಾಳ ಒತ್ತುವರಿಯಾಗಿತ್ತು ಬಸವ ಭವನಕ್ಕೆ ಜಾಗ ಬಿಡದೆ ಸರ್ಕಾರಿ ಜಾಗದಲ್ಲಿರುವ ಮರಗಳನ್ನು ಮಾರಾಟ ಮಾಡಿಕೊಂಡ ಪರಿಣಾಮವಾಗಿ ಕೊನೆಗೂ ಒತ್ತವರಿ ಜಾಗ ತೆರವು ಮಾಡಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು, ಅಧಿಕಾರಿಗಳು ಮತ್ತಿತರರಿದ್ದರು.

## ವಿದ್ಯುತ್ ವ್ಯತ್ಯಯ

ಹನೂರು : ಚಾಮುಂಡೇಶ್ವರಿ ವಿಧ್ಯುತ್ ಸರಬರಾಜು ನಿಗಮ ನಿಯಮಿತ ಹನೂರು ಉಪ ವಿಭಾಗದ ಹನೂರು ಶಾಖೆಯ ವ್ಯಾಪ್ತಿಯಲ್ಲಿ ಜೂನ್ 5 6 ರ ಶನಿವಾರದಂದು ಹನುವು ಟೌನ್ ವ್ಯಾಪ್ತಿಯಲ್ಲಿ ಕವರ್ ಕಂಡಕ್ಟರ್ ಅಳವಡಿಸುವ ಕಾರ್ಯವನ್ನು ಹಮ್ಮಿಕೊಂಡಿಕೊಂಡಿರುವುದರಿಂದ ಹನೂರು 66/11 ಕೆವಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಹನೂರು ಟೌನ್ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತಯವಾಗಲಿದೆ




ಎಂದು ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಸಹಾಯಕ ಕಾಂರ್ಯನಿರ್ವಾಹಕ ಇಂಜಿನಿಯರ್ ರಂಗಸ್ವಾಮಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದಲ್ಲದೆ ಹನೂರು ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ 66/11ಕೆವಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ಕಾಂರ್ಯನಿರ್ವಹಣೆಯುನ್ನು ಹಮ್ಮಿಕೊಂಡಿರುವುದರಿಂದ ಹನೂರು,ಬಂಡಳ್ಳಿ, ಅಜ್ಜಿಪುರ ರಾಮಾಪುರ ಕೌದಳ್ಳಿ ಮಾಟಳ್ಳಿ ವಿಧ್ಯುತ್ ಸರಬರಾಜು ವಿತರಣಾ ಕೇಂದ್ರಗಳಲ್ಲಿ ಜೂನ್ 6 ರ ಶನಿವಾರದಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತಯವಾಗಲಿದೆ ಸಾರ್ವಜನಿಕರು ಹಾಗೂ ಗ್ರಾಹಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರಂಗಸ್ವಾಮಿ ಮನವಿ ಮಾಡಿದ್ದಾರೆ.

### ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯ

## ನಾಲ್ವಡಿ ಸೇವಾ ಮನೋಭಾವ ನಮಗೆಲ್ಲರಿಗೂ ಆದರ್ಶ

ಮೈಸೂರು: ಸಮಾಜದಲ್ಲಿ ಯಾವುದೇ ಧರ್ಮ ಅಥವಾ ನಂಬಿಕೆ ಇದ್ದರೂ ಎಲ್ಲರಲ್ಲೂ ಪರಸ್ಪರ ಹೊಂದಾಣಿಕೆ ಮತ್ತು ಸೇವಾಮನೋಭಾವನೆ ಇರುವುದು ಅತ್ಯಂತ ಮುಖ್ಯ, ಅದಕ್ಕೆ ಮಾದರಿಯಾಗಿದ್ದ ನಾಲ್ವಡಿ ಕೃಷ್ಣ ರಾಜ ಒಡೆಯರ ಸೇವಾ ಮನೋಭಾವನೆ ನಮ್ಮೆಲ್ಲರಿಗೂ ಆದರ್ಶ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯ ಪಟ್ಟರು.

ಜಿಲ್ಲಾಡಳಿತ, ಮೈಸೂರು ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯೋತ್ಸವ ಸಮಿತಿವತಿಯಿಂದ ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು. ಹತ್ತು ವರ್ಷಗಳಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಅತ್ಯಂತ ಯಶಸ್ವಿಯಾಗಿ ಆಚರಿಸುತ್ತಾ ಬರುತ್ತಿದೆ. ಅವರ ಸಾಧನೆ ಮತ್ತು ಕೊಡುಗೆಗಳನ್ನು ಸಮಾಜಕ್ಕೆ ಪರಿಚಯಿಸುವ ಕೆಲಸ ಹೆಚ್ಚಾಗಿ ನಡೆಯಬೇಕು.



ಕರ್ನಾಟಕವು ಒಂದು ಪ್ರಗತಿಪರ ರಾಜ್ಯವಾಗಿ ಗುರುತಿಸಿಕೊಂಡಿರುವುದಕ್ಕೆ ಅನೇಕ ನಾಯಕರ ಕೊಡುಗೆ ಇದೆ. ನಾಲ್ವಡಿಯವರ ದೂರದೃಷ್ಟಿ ಮತ್ತು ಸಾಧನೆಗಳು ಅತ್ಯಂತ ಪ್ರಮುಖವಾದವು. ಅವರ ಈ ಸಾಧನೆಗಳನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ. ಸುವರ್ಣ ಮೈಸೂರಿನಂತೆ ಒಂದು ಅಭಿವೃದ್ಧಿ ಹೊಂದಿದ ಕರ್ನಾಟಕವನ್ನು ನಿರ್ಮಿಸುವುದೇ ನಾಲ್ವಡಿಗೆ ನಾವು ಸಲ್ಲಿಸುವ ನಿಜವಾದ ಗೌರವ. ಅವರ ಮೌಲ್ಯಗಳನ್ನು ಮತ್ತು ತತ್ವಗಳನ್ನು ಮುಂಬರುವ ಪೀಳಿಗೆಗೆ ತಲುಪಿಸುವ ನಿಟ್ಟಿನಲ್ಲಿ ನಾವೆಲ್ಲರೂ ಕೆಲಸ ಮಾಡಬೇಕೆಂದರು.

ನಿವೃತ್ತ ಪ್ರಾಂಶುಪಾಲ ಹಾಗೂ ಲೇಖಕ ಸಿದ್ದಸ್ವಾಮಿ ಮಾತನಾಡಿ, ಮೈಸೂರು ಸಂಸ್ಥಾನದ ಇತಿಹಾಸದಲ್ಲಿ ಪಾಳೆಗಾರರು, ಕಮಿಷನರ್‌ಗಳು ಮತ್ತು ದಿವಾನರು ಸೇರಿದಂತೆ ಸುಮಾರು 52 ಗಣ್ಯರು ಸೇವೆ ಸಲ್ಲಿಸಿದ್ದಾರೆ. ಆದರೆ, ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಇತಿಹಾಸದ ಧ್ರುವ ತಾರೆಯಂತೆ ಮಿಂಚಿದ್ದಾರೆ ಎಂದು ಹೇಳಿದರು.

ನಾಲ್ವಡಿ ಅವರಿಗೆ ಬನಾರಸ್ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪದವಿ ಲಭಿಸಿತು. ಆದ್ದರಿಂದ ಅವರನ್ನು ರಾಜರ್ಷಿ ಡಾ.ಶ್ರೀ.ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದು ಸಂಬೋಧಿಸುವುದು ಹೆಚ್ಚು ಸೂಕ್ತ ಎಂದರು. ಭಾರತದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಮೀಸಲಾತಿಗೆ ಅಡಿಪಾಯ ಹಾಕುವ ಮೊದಲೇ, ನಾಲ್ವಡಿಯವರು 1918 ರಲ್ಲಿ ಹಿಂದುಳಿದ ವರ್ಗದವರಿಗೆ ಸೌಲಭ್ಯ ಕಲ್ಪಿಸಲು ಮಿಲ್ಲರ್ ಸಮಿತಿಯನ್ನು ರಚಿಸಿದ್ದರು. ಆ ಮೂಲಕ ದಲಿತರು ಮತ್ತು ಹಿಂದುಳಿದ ವರ್ಗದವರಿಗೆ ಆಡಳಿತದಲ್ಲಿ ನ್ಯಾಯ ಒದಗಿಸಿದರು ಎಂದು ತಿಳಿಸಿದರು. ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ.ಬಿ.ಎಸ್. ಮಂಜುನಾಥ ಸ್ವಾಮಿ, ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮಾಜಿ ಮೇಯರ್ ಪುರುಷೋತ್ತಮ್, ಸೋಮಯ್ಯ ಮಳಿಯೂರು ಮತ್ತಿತರರು ಉಪಸ್ಥಿತರಿದ್ದರು.

## ನೂತನ ಸಿಎಂ ಆಗಿ ಡಿ.ಕೆ.ಶಿವಕುಮಾರ್ ಪದಗ್ರಹಣ

# ಸಂತೇಮರಹಳ್ಳಿಯಲ್ಲಿ ಡೈರಿ ನೌಕರರಿಂದ ಸಂಭ್ರಮಾಚರಣೆ




ಚಾಮರಾಜನಗರ, ರಾಜ್ಯದ 25ನೇ ನೂತನ ಮುಖ್ಯಮಂತ್ರಿ ಆಗಿ ಡಿ.ಕೆ.ಶಿವಕುಮಾರ್ ಪದಗ್ರಹಣ ಸ್ವೀಕರಿಸಿದ ಅಂಗವಾಗಿ ಚಾಮರಾಜನಗರ ಜಿಲ್ಲಾ ಹಾಲು ಉತ್ಪಾದಕ ಸಹಕಾರ ಸಂಘಗಳ ನೌಕಕರು ಸಂಭ್ರಮಾಚರಣೆ ಮಾಡಿದರು.

ತಾಲೂಕಿನ ಸಂತೇಮರಹಳ್ಳಿಯ ವೃತ್ತದಲ್ಲಿ ಜಮಾಯಿಸಿದ ನೌಕರರು ಪಟಾಕಿ ಸಿಡಿಸಿ, ಸಿಹಿಹಂಚಿ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪರ ಜೈಕಾರ ಕೂಗಿ ಸಂಭ್ರಮಿಸಿದರು. ಚಾಮುಲ್ ಅಧ್ಯಕ್ಷ ಎಂ.ನಂಜುಂಡಸ್ವಾಮಿ ಮಾತನಾಡಿ, ರಾಜ್ಯದ ನೂತನ ಮುಖ್ಯಮಂತ್ರಿ ಆಗಿ ಡಿ.ಕೆ.ಶಿವಕುಮಾರ್ ಪದಗ್ರಹಣ ಸ್ವೀಕರಿಸಿದ ಹಿನ್ನಲೆಯಲ್ಲಿ ಅವರ ಚಾಮರಾಜನಗರ ಹಾಲು ಒಕ್ಕೂಟ, ನೌಕರರ ವರ್ಗ, ಅಭಿಮಾನಿಗಳ ಬಳಗದ ವತಿಯಿಂದ ಸಂತೇಮರಹಳ್ಳಿಯ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಲಾಗಿದೆ. ಡಿ.ಕೆ.ಶಿವಕುಮಾರ್ ಅವರು ಪದಗ್ರಹಣ ಸ್ವೀಕರಿಸಿ ಬಳಿಕವೇ ವಿದ್ಯಾರ್ಥಿಗಳು, ಯವಕರು, ದಲಿತರು, ಶೋಷಿತರ ಪರ ಕೊಡುಗೆ ನೀಡಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾದರಿಯಲ್ಲಿ ಇನ್ನೂ ಅನೇಕ ಜನಪರ ಕಾರ್ಯಕ್ರಮಗಳನ್ನು ರೂಪಿಸಿ ಅವರ ಅವಧಿಯಲ್ಲಿ ಯಶ್ವಸಿಯಾಗಿ ಪೂರ್ಣಗೊ ಳಿಸಲಿ ಎಂದು ಆಶಿಸಿದರು.

ಬೂದಂಬಳ್ಳಿ ಶಂಕರ್ ಮಾತನಾಡಿ ನೂತನ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಹಾಲು ಉತ್ಪಾದಕರ ಸಹಕಾರ ಸಂಘದ ನೌಕರರ ವತಿಯಿಂದ ಅಭಿನಂದನೆ ಸಲ್ಲಿಸುತ್ತೇವೆ. ಸಂಘದಲ್ಲಿ ರಾಜ್ಯಾದ್ಯಂತ ಲಕ್ಷಾಂತರ ನೌಕರರು ದುಡಿಯುತ್ತಿದ್ದೇವೆ. ನಮಗೆ ಯಾವುದೇ ಸೇವಾಭದ್ರತೆ ಇಲ್ಲ ಆಗಾಗಿ ಕೇವಲ 4, 5 ಸಾವಿರ ಸಂಬಳದಿಂದ ಜೀವನ ಕಷ್ಟಕರವಾಗಿದೆ. ಈ ಕಡೆ ಒಕ್ಕೂಟದ ನಿರ್ದೇಶನ, ಸರ್ಕಾರದ ಆದೇಶಗಳನ್ನು ಪಾಲಿಸಿಕೊಂಡು ತುಂಬಾ ಕಷ್ಟದಿಂದ ಕೆಲಸ ಮಾಡಬೇಕಾದ ಪರಿಸ್ಥಿತಿ ಇದೆ. ಆಗಾಗಿ ನೂತನ ಮುಖ್ಯಮಂತ್ರಿಗಳು ಉದ್ಯೋಗ ಭದ್ರತೆ ಕಲ್ಪಿಸಿಕೊಡಬೇಕು ದಿವಗಂತ ಮಾಜಿ ಸಹಕಾರ ಇಲಾಖೆಯ ಸಚಿವರಾಗಿದ್ದ ಹೆಚ್.ಎಸ್.ಮಹದೇವಪ್ರಸಾದ್ ಅವರು ನೌಕರರಿಗೆ 10 ಪೈಸೆಯನ್ನು ಪ್ರೋತ್ಸಾಹ ಧನ ನೀಡುತ್ತಿದ್ದರು. ಅದನ್ನು ಸರ್ಕಾರ ಏಕಾಏಕಿ ನಿಲ್ಲಿಸಿದೆ. ನೀವು ಕನಿಷ್ಠ, ಲೀಟರ್ 50 ಪೈಸೆಯನ್ನು ಪ್ರೋತ್ಸಾಹ ಧನ ಕೊಡಿಸಿ ನೌಕರರ ಹಿತಕಾಯಬೇಕು ಎಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು. ಎನ್‌ರಿಚ್ ಮಹದೇವಸ್ವಾಮಿ ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ ಮಾತನಾಡಿದರು. ನಿರ್ದೇಶಕ ಈ ಸಂದರ್ಭದಲ್ಲಿ ಚಾಮುಲ್ ನಿರ್ದೇಶಕ ಸದಾಶಿವಮೂರ್ತಿ, ಸಂಘದ ಜಿಲ್ಲೆಯ ನೌಕರರು ಭಾಗವಹಿಸಿದ್ದರು.

# ಕಾರು-ಪಿಕ್ ಅಪ್ ಡಿಕ್ಕಿಯಾಗಿ 7 ತಿಂಗಳ ಮಗು ಸೇರಿ ವೃದ್ಧ ಸಾವು

ಚಾಮರಾಜನಗರ, ಕಾರು ಹಾಗೂ ಪಿಕ್ ಅಪ್ ವಾಹನದ ನಡುವೆ ಡಿಕ್ಕಿಯಾಗಿ ಮಗು ಸೇರಿದಂತೆ ಇಬ್ಬರು ಮೃತಪಟ್ಟ ಘಟನೆ ಚಾಮರಾಜನಗರ ತಾಲೂಕಿನ ದೊಡ್ಡಮೂಡಹಳ್ಳಿ ಕ್ರಾಸ್?ನಲ್ಲಿ ಬುಧವಾರ ತಡರಾತ್ರಿ ಸಂಭವಿಸಿದೆ.

ಬೆಂಗಳೂರು ಮೂಲದ ಮುಬಾರಕ್ (70) ಹಾಗೂ 7 ತಿಂಗಳ ಗಂಡು ಮಗು ಮೃತಪಟ್ಟವರು. ತಮಿಳುನಾಡು ಕಡೆಗೆ ತೆರಳುತ್ತಿದ್ದ ಬೊಲೆರೋ ಪಿಕ್ ಅಪ್ ಹಾಗೂ ತಮಿಳುನಾಡಿನಿಂದ ಬೆಂಗಳೂರಿನತ್ತ ಹೊರಟಿದ್ದ ಎರ್ಟಿಗಾ ಕಾರಿನ ನಡುವೆ ಅಪಘಾತ ಸಂಭವಿಸಿದೆ. ಡಿಕ್ಕಿ ಪರಿಣಾಮ ಇಬ್ಬರು ಮೃತಪಟ್ಟಿದ್ದು, ಮಕ್ಕಳು ಸೇರಿದಂತೆ ನಾಲ್ವರು ತೀವ್ರವಾಗಿ ಗಾಯಗೊಂಡಿದ್ದಾರೆ.

ಗಾಯಗೊಂಡವರನ್ನು ಆಂಬ್ಯುಲೆನ್ಸ್ ಮೂಲಕ ಚಾಮರಾಜನಗರ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಚಾಮರಾಜನಗರ ಪೂರ್ವ ಠಾಣಾ ವ್ಯಾಪ್ತಿಯಲ್ಲಿ ಈ ಅಪಘಾತ ಸಂಭವಿಸಿದೆ. ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.







## ಆದರ್ಶ ರಾಜನಿಗೆ ನಾಲ್ವಡಿ ಮಾದರಿ: ಬರಗೂರು ರಾಮಚಂದ್ರಪ್ಪ




ಮೈಸೂರು: ಒಬ್ಬ ಆದರ್ಶ ರಾಜ ಹೇಗಿರಬೇಕು ಎಂಬುದಕ್ಕೆ ನಾಲ್ವಡಿ ಉತ್ತಮ ಮಾದರಿಯಾಗಿ ನೋಡಬಹುದು ಎಂದು ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ ಹೇಳಿದರು.

ಬೆಂಗಳೂರು ನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಸಹಯೋಗದಲ್ಲಿ ಮಾನಸಗಂಗೋತ್ರಿಯ ಬಿಎಂಶ್ರೀ ಸಭಾಂಗಣಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರೊ.ಎಸ್.ಚಂದ್ರಶೇಖರ್ ರಚಿಸಿರುವ ?ನಾಲ್ವಡಿ ಕೃಷ್ಣರಾಜ ಒಡೆಯರು ಮತ್ತು ಆಧುನಿಕ ಮೈಸೂರು? ಕೃತಿ ಬಿಡುಗಡೆಗೊಳಿಸಿ ಮಾತನಾಡಿದರು. ದೇಶದಲ್ಲಿ ಬರೋಡಾ ಮಹಾರಾಜರನ್ನು ಹೊರತುಪಡಿಸಿ ಕಡ್ಡಾಯ ಶಿಕ್ಷಣವನ್ನು ಜಾರಿಗೆ ತಂದವರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಒಬ್ಬರು. ಅಸ್ಪೃಶ್ಯರ ಶಿಕ್ಷಣಕ್ಕಾಗಿ ವಿಶೇಷ ಶಾಲೆಗಳನ್ನು ಆರಂಭಿಸುವ ಮೂಲಕ ಶಿಕ್ಷಣದ ಹಕ್ಕನ್ನು ಸಮಾಜದ ಎಲ್ಲ ವರ್ಗಗಳಿಗೂ ತಲುಪಿಸಲು ಪ್ರಯತ್ನಿಸಿದರು. ರಾಜಪ್ರಭುತ್ವ ವೈರುಧ್ಯ ಮತ್ತು ಪ್ರಜಾಪ್ರಭುತ್ವದ ನಡುವಿನ ಮೌಲ್ಯಗಳನ್ನು ಸಮರ್ಥವಾಗಿ ನಿಭಾಯಿಸಿದುದು ನಾಲ್ವಡಿ ಅವರ ವಿಶಿಷ್ಟ ಸಾಧನೆಯಾಗಿದೆ ಎಂದರು.

ಪ್ರೊ.ಎಸ್.ಚಂದ್ರಶೇಖರ್ ಕೃತಿ ಕೇವಲ ನಾಲ್ವಡಿ ಜೀವನ ಚರಿತ್ರೆಯಲ್ಲ. ನಾಲ್ವಡಿ ಕೃಷ್ಣರಾಜ ಒಡೆಯರ ವ್ಯಕ್ತಿತ್ವ, ಆಡಳಿತ ದೃಷ್ಟಿಕೋನ ಹಾಗೂ ಆಧುನಿಕ ಮೈಸೂರಿನ ನಿರ್ಮಾಣದಲ್ಲಿ ಪಾತ್ರವನ್ನು ವಿಶ್ಲೇಷಿಸುವ ಮಹತ್ವದ ಅಧ್ಯಯನ ಗ್ರಂಥವಾಗಿದೆ. ಹಿರಿಯ ವಿಮರ್ಶಕ ಪ್ರೊ.ಓ.ಎಲ್.ನಾಗಭೂಷಣ ಸ್ವಾಮಿ ಕೃತಿ ಕುರಿತು ಮಾತನಾಡಿ, ಪ್ರೊ.ಎಸ್.ಚಂದ್ರಶೇಖರ್ ಅವರ ನಾಲ್ವಡಿ ಕೃತಿಯ ಪಾತ್ರಗಳು, ಸನ್ನಿವೇಶ ಬದಲಿಸಿದರೆ ಇವತ್ತಿನ ಬದುಕಾಗುತ್ತದೆ. ಇದು ವರ್ತಮಾನಕ್ಕೆ ಹಿಡಿದ ಕನ್ನಡಿ. ನಾಲ್ವಡಿಯರಿಗೆ ಅನೇಕ ಬಿಕ್ಕಟ್ಟುಗಳಿದ್ದರೂ ಜನಪರವಾದ ಕೆಲಸ ಮಾಡಿದರು. ಆಡಳಿತ ಹಕ್ಕು, ಅಧಿಕಾರ ಎಂದುಕೊಳ್ಳದೇ ಜವಾಬ್ದಾರಿಯುತವಾಗಿ ನಿರ್ವಹಿಸಿದರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಲೇಖಕ ಪ್ರೊ.ಎಸ್.ಚಂದ್ರಶೇಖರ್ ಮಾತನಾಡಿದರು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಡಾ.ನಂಜಯ್ಯ ಹೊಂಗನೂರು ಅಧ್ಯಕ್ಷತೆ ವಹಿಸಿದ್ದರು. ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯುಕ್ತ ಡಾ.ಸಂಗಮೇಶ ಉಪಾಸೆ, ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಹಾಜರಿದ್ದರು. ಕಸಾಪ ಬೆಂಗಳೂರು ಜಿಲ್ಲಾಧ್ಯಕ್ಷ ಎಂ.ಪ್ರಕಾಶಮೂರ್ತಿ ಪ್ರಸ್ತಾವಿಕವಾಗಿ ಮಾತನಾಡಿದರು. ಎಲ್.ಹರ್ಷ ಸ್ವಾಗತಿಸಿದರು. ಡಾ.ಎನ್.ಯೋಗೀಶ್ ನಿರೂಪಿಸಿದರು. ಲತಾ ಮೋಹನ್ ವಂದಿಸಿದರು. ಡಾ.ಅಮ್ಮ ರಾಮಚಂದ್ರ, ಹುರುಗಲವಾಡಿ ರಾಮಯ್ಯ ಮತ್ತು ಸಂಗಡಿಗರು ನಾಲ್ವಡಿ ಗೀತೆಗಳನ್ನು ಹಾಡಿದರು.

## ಕಪ್ಪ ಕಾಣಿಕೆಯಂತೆ ಜಿಎಸ್‌ಟಿ

ಮೈಸೂರು: ಸ್ವಾತಂತ್ರ್ಯಪೂರ್ವದಲ್ಲಿ ವಸಾಹತುಶಾಹಿಗಳಂತೆ ಇಂದು ಕಾರ್ಪೋರೇಟ್ ಸಂಸ್ಥೆಗಳಿವೆ. ಬ್ರಿಟಿಷರ ಬದಲಾಗಿ ಕೇಂದ್ರ ಸರ್ಕಾರ ಆಡಳಿತ ನಡೆಸುತ್ತಿದೆ ಎಂದು ವಿಮರ್ಶಕ ಓ.ಎಲ್.ನಾಗಭೂಷಣ ಸ್ವಾಮಿ ಹೇಳಿದರು.

ಅಂದು ರಾಜರ ಆಳ್ವಿಕೆಯಲ್ಲಿ ಬ್ರಿಟಿಷರಿಗೆ ಕಪ್ಪ ಕಾಣಿಕೆ ಕೊಡುತ್ತಿದ್ದರು. ಇಂದಿಗೂ ರಾಜ್ಯಗಳು ಕೇಂದ್ರ ಸರ್ಕಾರಕ್ಕೆ ಜಿಎಸ್‌ಟಿ ತೆರಿಗೆ ಕಟ್ಟುತ್ತಿವೆ. ಇದರಲ್ಲಿ ವ್ಯತ್ಯಾಸವೇನಿಲ್ಲ. ಆ ಕಾಲದಲ್ಲಿದ್ದ ಬಡತನ, ಹಸಿವು, ನಿರುದ್ಯೋಗ ಇಂದಿಗೂ ಜೀವಂತವಾಗಿವೆ. 70 ವರ್ಷ ಕಳೆದರು ಬಡತನ, ನಿರುದ್ಯೋಗ,

## ನಾಳೆ ಜಯಚಾಮರಾಜೇಂದ್ರ ಇಂಜಿನಿಯರ್ ಕಾಲೇಜು ದಿನ

ಮೈಸೂರು: ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿವಿಯ ಜಯ ಚಾಮರಾಜೇಂದ್ರ ಎಂಜಿನಿಯರಿಂಗ್ ಕಾಲೇಜಿನ ಅವರಣದಲ್ಲಿ ಜೂ.6 ರಂದು ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ ಮುಕ್ತ ದಿನ ಕಾರ್ಯಕ್ರಮ ಆಯೋಜಿಸಿರುವುದಾಗಿ ಪಾಚಾರ್ಯ ಡಾ.ಸಿ. ನಟರಾಜು ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಬೆಳಗ್ಗೆ 10ಕ್ಕೆ ಡಾ.ಸಿ.ಜಿ. ಬೆಟ್ಸೂರ್‌ಮಠ್, ಎಂ.ಪಿ. ನಾಗಮ್ಮ,




ಡಾ.ಬಿ. ಸುರೇಶ್, ಡಾ.ಎ.ಎನ್. ಸಂತೋಷ್‌ಕುಮಾರ್ ಉಪಸ್ಥಿತಿಯಲ್ಲಿ ಚಾಲನೆ ಪಡೆಯಲಿದೆ. ತಮ್ಮ ಕಾಲೇಜಿನಲ್ಲಿ 60 ಕ್ಕೂ ಹೆಚ್ಚು ವಿವಿಧ ಕೋರ್ಸ್‌ಗಳಿವೆ. ಇನ್ನು ದ್ವಿತೀಯ ಪಿಯುಸಿ ಮುಗಿಸಿದವರಿಗೆ ಮುಂದೇನು ಎಂಬ ಚಿಂತೆ ಕಾಡುತ್ತದೆ. ಅಂತಹವರು ತಮಗೆ ಯಾವ ಕೋರ್ಸ್‌ನಲ್ಲಿ ಆಸಕ್ತಿಯಿದೆ ಎಂಬುದನ್ನು ಅರಿತು ಅವುಗಳ ಬಗ್ಗೆ ಹೆಚ್ಚು ಮಾಹಿತಿ ಪಡೆಯಲು ಅನುಕೂಲವಾಗಲೆಂದು ಈ ಮುಕ್ತ ದಿನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಕಳೆದ ಬಾರಿ ಸುಮಾರು 15 ಸಾವಿರ ವಿದ್ಯಾರ್ಥಿಗಳು, ಅವರ ಪೋಷಕರು,, ಬೋಧಕ ವರ್ಗದವರು ಭೇಟಿ ನೀಡಿ ಮಾಹಿತಿ ಪಡೆದಿದ್ದಾರೆ. ಈ ಬಾರಿ ಸಹಾ ಅಷ್ಟೇ ಮಂದಿಯನ್ನು ನಿರೀಕ್ಷಿಸಲಾಗಿದೆ. ಪ್ರತಿಯೊಂದೂ ವಿಭಾಗದಲ್ಲಿಯೂ ಸೂಕ್ತ ವಿವರಣೆ, ನವೋದ್ಯಮಿಗಳಿಂದ ಉತ್ಪನ್ನ ಪ್ರದರ್ಶನ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿವೆ ಸಮಾಜ ಎದುರಿಸುತ್ತಿರುವ ವಿವಿಧ ಕ್ಷೇತ್ರಗಳ ಸವಾಲುಗಳನ್ನು ಎದುರಿಸಲು ಸಾಧ್ಯವಾಗುವಂತೆ ಪರಿಹಾರ ಕಂಡು ಹಿಡಿಯುವ ಬಗೆ ಕುರಿತ ಮಾರ್ಗದರ್ಶನವೂ ಇರಲಿದೆ ಎಂದು. ಡೀನ್ ಡಾ.ಎಂ.ಎನ್.ನಾಗೇಂದ್ರಪ್ರಸಾದ್ ಇದ್ದರು.

# ಜು.11ರಂದು ರಾಷ್ಟ್ರೀಯ ಲೋಕ್‌ಅದಾಲತ್

## ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ಸುವರ್ಣಾವಕಾಶ : ಜಿಲ್ಲಾ ನ್ಯಾಯಾಧೀಶೆ ಜಿ.ಪ್ರಭಾವತಿ

ಚಾಮರಾಜನಗರ: ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರವು ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಿದೆ. ಬಾಕಿ ಉಳಿದಿರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದು ನಾಗರಿಕರಿಗೆ ಉತ್ತಮ ಅವಕಾಶ




ಎಂದು ಜಿಲ್ಲಾ ಪ್ರಧಾನ ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಜಿ. ಪ್ರಭಾವತಿ ಅವರು ತಿಳಿಸಿದ್ದಾರೆ.

ನಗರದ ಜಿಲ್ಲಾ ನ್ಯಾಯಾಲಯದಲ್ಲಿರುವ ಎ.ಡಿ.ಆರ್ ಕಟ್ಟಡದ ಸಭಾಂಗಣದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಜಿ. ಪ್ರಭಾವತಿ ಅವರು ಈ



ಬಗ್ಗೆ ಮಾಹಿತಿ ನೀಡಿದರು. ರಾಷ್ಟ್ರೀಯ ಲೋಕ ಅದಾಲತ್ ಜೊತೆಗೆ, ಲಿಖಿತ ವರ್ಗಾವಣೆ ಕಾಯ್ದೆ ಕಲಂ 138 ರ ಪ್ರಕರಣಗಳ ಇತ್ಯರ್ಥಕ್ಕಾಗಿ ಜುಲೈ 18 ಮತ್ತು ನವೆಂಬರ್ 21 ರಂದು ವಿಶೇಷ ಲೋಕ ಅದಾಲತ್‌ಗಳು ನಡೆಯಲಿವೆ. ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಜಿಲ್ಲೆಯ ಪ್ರಕರಣಗಳ ಇತ್ಯರ್ಥಕ್ಕಾಗಿ ಆಗಸ್ಟ್ 21 ರಿಂದ 23 ರವರೆಗೆ 'ಸಮಧಾನ್ ಸಮಾರೋಹ್' ಕುರಿತ ವಿಶೇಷ ಲೋಕ ಅದಾಲತ್ ಸಹ ಆಯೋಜಿಸಲಾಗಿದೆ ಎಂದು ಹೇಳಿದರು. ಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ ಮತ್ತು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ರಾಮಸಮುದ್ರ ಪುಟ್ಟಸ್ವಾಮಿ ಹಾಜರಿದ್ದರು.

### ವಿಶೇಷ ಲೋಕ ಅದಾಲತ್‌ಗಳ ವಿವರ

**ಲಿಖಿತ ವರ್ಗಾವಣೆ ಕಾಯ್ದೆ ಕಲಂ 138 ರಡಿ ಬಾಕಿ ಇರುವ ಚೆಕ್ ಅಮಾನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಜುಲೈ 18 ಮತ್ತು ನವೆಂಬರ್ 21 ರಂದು ವಿಶೇಷ ಲೋಕ ಅದಾಲತ್‌ಗಳು ನಡೆಯಲಿವೆ. ಇದಲ್ಲದೆ, ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ಇತ್ಯರ್ಥಕ್ಕಾಗಿ 'ಸಮಧಾನ್ ಸಮಾರೋಹ್' ಘೋಷವಾಕ್ಯದಡಿ ಆಗಸ್ಟ್ 21 ರಿಂದ 23 ರವರೆಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳಲ್ಲಿ ವಿಶೇಷ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ. 'ಸಮಧಾನ್ ಸಮಾರೋಹ್' ಕುರಿತ ವಿಶೇಷ ಲೋಕ ಅದಾಲತ್‌ನಡಿ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಜಿಲ್ಲೆಯ 5 ಪ್ರಕರಣಗಳನ್ನು ಈಗಾಗಲೇ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕೆ ವರ್ಗಾಯಿಸಿದ್ದು, ಇತ್ಯರ್ಥಗೊಳಿಸುವ ಪ್ರಕ್ರಿಯೆ ನಡೆಯುತ್ತಿದೆ. ಈ ಅದಾಲತ್ ಜಿಲ್ಲೆಯಲ್ಲಿಯೇ ನಡೆಯುತ್ತಿರುವುದರಿಂದ ಪ್ರಕರಣಗಳನ್ನು ನಡೆಸುತ್ತಿರುವ ಜಿಲ್ಲೆಯ ಉಭಯ ಪಕ್ಷಕಾರರಿಗೆ ನೆರವಾಗಲಿದೆ. ಸಿವಿಲ್, ಕ್ರಿಮಿನಲ್ ಪಿ.ಎಲ್.ಸಿ ಪ್ರಕರಣಗಳ ಸುಗಮ ಇತ್ಯರ್ಥಕ್ಕಾಗಿ ನ್ಯಾಯಾಧೀಶರು, ವಕೀಲರು, ಮಧ್ಯಸ್ಥಿಕೆದಾರರು, ಪ್ಯಾನಲ್ ವಕೀಲರು, ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳ ಸಹಕಾರ ಅತ್ಯಗತ್ಯ ಎಂದು ನ್ಯಾಯಾಧೀಶರು ಕರೆ ನೀಡಿದರು.**

### ಇತ್ಯರ್ಥಪಡಿಸಬಹುದಾದ ಪ್ರಕರಣಗಳು

**ಲೋಕ ಅದಾಲತ್‌ನಲ್ಲಿ ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ, ಕೈಗಾರಿಕಾ ಮತ್ತು ಕಾರ್ಮಿಕ ವೇತನ ವಿವಾದಗಳು, ಗ್ರಾಹಕ ವೇದಿಕೆ ಪ್ರಕರಣಗಳು, ರಿಯಲ್ ಎಸ್ಟೇಟ್, ಚೆಕ್ ಅಮಾನ್ಯ, ಮೋಟಾರು ವಾಹನ ಅಪಘಾತ ಪರಿಹಾರ, ವಿದ್ಯುತ್ ಹಾಗೂ ನೀರಿನ ಶುಲ್ಕ, ಭೂಸ್ವಾಧೀನ, ಪಿಂಚಣಿ, ವೇತನ ಭತ್ಯೆ ಹಾಗೂ ಕುಟುಂಬ ನ್ಯಾಯಾಲಯದ (ವಿವಾಹ ವಿಚ್ಛೇದನ ಹೊರತುಪಡಿಸಿ) ಪ್ರಕರಣಗಳು ಸೇರಿದಂತೆ ವಿವಿಧ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುವುದು. ಪ್ರಕರಣಗಳ ಇತ್ಯರ್ಥಕ್ಕಾಗಿ ಚಾಮರಾಜನಗರದ ಎಡಿಆರ್ ಕಟ್ಟಡದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಈಗಾಗಲೇ ಪೂರ್ವಭಾವಿ ಸಮಾಲೋಚನಾ ಕೇಂದ್ರವನ್ನು ತೆರೆಯಲಾಗಿದೆ.**

### ರಾಷ್ಟ್ರೀಯ ಲೋಕ ಅದಾಲತ್, ಅದರ ವ್ಯಾಪ್ತಿ

**ರಾಷ್ಟ್ರೀಯ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ಜಿಲ್ಲೆಯ ಎಲ್ಲಾ ತಾಲೂಕು ನ್ಯಾಯಾಲಯಗಳಲ್ಲಿ ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ. ಪ್ರತಿ ವರ್ಷ ಮೂರು ತಿಂಗಳಿಗೊಮ್ಮೆ ನಡೆಯುವ ಲೋಕ ಅದಾಲತ್‌ಗಳ ಪೈಕಿ ಇದು ಈ ಸಾಲಿನ 2ನೇ ಅದಾಲತ್ ಆಗಿದೆ. ಕಳೆದ ಲೋಕ ಅದಾಲತ್‌ನಲ್ಲಿ 85,907 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿತ್ತು. ಈ ಬಾರಿಯ 2ನೇ ಲೋಕ ಅದಾಲತ್‌ನಲ್ಲಿ ಇನ್ನೂ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ. ಈ ಅದಾಲತ್‌ನಲ್ಲಿ ಮಹಿಳೆಯರು, ಮಕ್ಕಳು, ಹಿರಿಯ ನಾಗರಿಕರ ಪ್ರಕರಣಗಳ ಇತ್ಯರ್ಥಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ ಎಂದು ಜಿಲ್ಲಾ ನ್ಯಾಯಾಧೀಶರು ತಿಳಿಸಿದರು.**

## ನಾಲ್ವಡಿ ಪ್ರತಿಮೆಗೆ ಬಿಜೆಪಿ ಮುಖಂಡರ ನಮನ




ಮೈಸೂರು: ನಾಲ್ವಡಿಯವರ ಪ್ರತಿಮೆಗೆ ಸಂಸದ ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಶ್ರೀವತ್ಸ ನೇತೃತ್ವದಲ್ಲಿ ಬಿಜೆಪಿ ಗಣ್ಯರು ಪುಷ್ಪ ನಮನ ಸಲ್ಲಿಸಿದರು.

ಈ ವೇಳೆ ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಮೇಯರ್‌ಗಳಾದ ಸಂದೇಶ್ ಸ್ವಾಮಿ, ಶಿವಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಪ್ರಶಾಂತ್ ಗೌಡ, ಬಿಜೆಪಿ ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ, ಬಿಜೆಪಿ ಮುಖಂಡರಾದ ಈ.ಸಿ.ನಿಂಗರಾಜೇಗೌಡ, ಕೇಬಲ್ ಮಹೇಶ್, ದಿನೇಶ್ ಗೌಡ ಉಪಸ್ಥಿತರಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

**ನಗರಸಭಾ ಕಾರ್ಯಾಲಯ, ರಾಮನಗರ**
ಬೆಂಗಳೂರು ದಕ್ಷಿಣ ಜಿಲ್ಲೆ – 562159. e-mail: ka.ramanagara.cmc@gmail.com

ಸಂ.: ನಸರಾ/ತಾ.ವಿ./ಕಿ.ಅ/ಟೆಂ./ಸಿ.ಆರ್./ /2026–27 ದಿನಾಂಕ: 26.05.2026

**ಟೆಂಡರ್ ಪ್ರಕಟಣೆ** (ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್‌ನ ಕೆ.ಪಿ.ಪಿ. ಪೋರ್ಟಲ್ ಮುಖಾಂತರ ರಾಮನಗರ ನಗರಸಭೆಯ ವಿವಿಧ ಯೋಜನೆಯಡಿಯಲ್ಲಿ ಈ ಕೆಳಕಂಡ ಸೇವೆಯ ಟೆಂಡರ್‌ನ್ನು ಈ ಕೆಳಗೆ ಸಹಿ ಮಾಡಿರುವವರು ಆಹ್ವಾನಿಸಿರುತ್ತಾರೆ. ಅರ್ಹ ಮಾನವ ಸಂಪನ್ಮೂಲ ಸರಬರಾಜುದಾರರು ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ https://kppp.karnataka.gov.in ಮುಖಾಂತರ ಟೆಂಡರ್ ದಾಖಲೆಗಳಲ್ಲಿ ತಿಳಿಸಿರುವಂತೆ (Technical qualification criteria) ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಹೆಚ್ಚಿನ ವಿವರಗಳಿಗೆ ಈ ಕಛೇರಿಯ ಅಭಿಯಂತರರ ಶಾಖೆಯಿಂದ ಪಡೆಯಬಹುದು. ಈ ಕೆಳಕಂಡಂತೆ ನಿಗಧಿಪಡಿಸಿದ ಇ.ಎಂ.ಡಿ.ಯನ್ನು ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನಮೂದಿಸಿದ ಯಾವುದಾದರೂ ಒಂದು ರೀತಿಯಲ್ಲಿ ಸಲ್ಲಿಸತಕ್ಕದ್ದು. ಇ.ಎಂ.ಡಿ.ಯು ಟೆಂಡರ್‌ನ ನ್ಯಾಯ ಸಮ್ಮತಾ ಮಾನ್ಯತಾ ಅವಧಿಗಿಂತ (Validity period) 90 ದಿನಗಳವರೆಗೆ ಮಾನ್ಯತೆ ಇರತಕ್ಕದ್ದು.

| ಪ್ಯಾಕೇಜ್ ಸಂಖ್ಯೆ | ಇಂಡೆಂಟ್ ಸಂಖ್ಯೆ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇಎಂಡಿ ಮೊತ್ತ (ರೂ. ಗಳಲ್ಲಿ) | ಟೆಂಡರ್ ಫಾರಂ ಶುಲ್ಕ (ರೂ. ಗಳಲ್ಲಿ) | ಕೆಲಸ ಪೂರ್ಣಗೊಳಿಸುವ ಅವಧಿ |
|---|---|---|---|---|---|
| 1 | DMA/2026-27/SE7976 | 21.88 | 35,566/- | As per KPPP | As per KPPP |

1) ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 18.06.2026 ರಂದು ಸಂಜೆ: 5.00 ಗಂಟೆವರೆಗೆ.** 2) ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 19.06.2026 ರಂದು ಸಂಜೆ: 5.10 ಗಂಟೆಗೆ.** 3) ಆರ್ಥಿಕ ಬಿಡ್ ತೆರೆಯುವ **ದಿನಾಂಕ: 20.06.2026 ರಂದು ಬೆಳಿಗ್ಗೆ 11.00 ಗಂಟೆಗೆ.**
**ಸೂಚನೆ:** ಮೇಲಿನ ದಿನಾಂಕಗಳಲ್ಲಿ ಯಾವುದೇ ತಿದ್ದುಪಡಿ/ಮುಂದೂಡಿಕೆ ಇದ್ದಲ್ಲಿ ಕೆಪಿಪಿ ಪೋರ್ಟಲ್‌ನಲ್ಲಿ ತಿಳಿಸಲಾಗುವುದು. ಯಾವುದೇ ಪತ್ರಿಕಾ ಪ್ರಕಟಣೆ ಹೊರಡಿಸಲಾಗುವುದಿಲ್ಲ.

ಸಹಿ/– **ಪೌರಾಯುಕ್ತರು**
ನಗರಸಭೆ, ರಾಮನಗರ
DIPR/BSD/83/SA/2026-27

**ನಗರಸಭಾ ಕಾರ್ಯಾಲಯ, ಹೂಟಗಳ್ಳಿ**
ರೋಟರಿ ಶಾಲೆ ಹತ್ತಿರ, ಕೆ.ಹೆಚ್.ಬಿ ಕಾಲೋನಿ ಹೂಟಗಳ್ಳಿ, ಮೈಸೂರು ಜಿಲ್ಲೆ –570018.
ದೂ: 0821–2001737. ಇ–ಮೇಲ್: ka.hootagalli.cmc@gmail.com, ವೆಬ್‌ಸೈಟ್: ka.hootagalli.cmc@gmail.com

ಸಂ.: ನಸಹೂ/ಶೇ.24.10%/7.25%/5%/ಸಾ.ಪ್ರ/ಸಿ.ಆರ್–01/2026–27 ದಿನಾಂಕ: 02.06.2026

**ಪ್ರಕಟಣೆ**

ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಹೂಟಗಳ್ಳಿ ನಗರಸಭೆಯ ಎಸ್.ಎಫ್.ಸಿ. ಮುಕ್ತನಿಧಿ ಮತ್ತು ನಗರಸಭಾ ಸಾಮಾನ್ಯ ನಿಧಿಯಡಿಯಲ್ಲಿ 2026–27ನೇ ಸಾಲಿನ ಶೇ.24.10ರ ಪರಿಶಿಷ್ಟ ಜಾತಿ/ಪಂಗಡದವರ, ಶೇ.7.25ರ ಇತರೆ ಹಿಂದುಳಿದ ವರ್ಗದ ಬಡಜನರ ಹಾಗೂ ಶೇ.5 ರ ವಿಶೇಷ ಚೇತನರ ಕಲ್ಯಾಣ ನಿಧಿಯ ಕಾರ್ಯಕ್ರಮಗಳಡಿಯಲ್ಲಿ ಕೆಳಕಂಡ ವ್ಯಕ್ತಿ ಸಂಬಂಧಿತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಸದರಿ ವೈಯಕ್ತಿಕ ಸೌಲಭ್ಯಗಳನ್ನು ಪಡೆದುಕೊಳ್ಳಲು ಹೂಟಗಳ್ಳಿ ನಗರಸಭಾ ವ್ಯಾಪ್ತಿಯ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸದರಿ ಸೌಲಭ್ಯ ಪಡೆಯಲು ಇಚ್ಚಿಸುವ ಫಲಾನುಭವಿಗಳು ಸಂಬಂಧಪಟ್ಟ ಪೂರ್ಣ ದಾಖಲಾತಿಗಳೊಂದಿಗೆ **ದಿನಾಂಕ: 02.07.2026ರ ಸಾಯಂಕಾಲ 5.00 ಗಂಟೆಯೊಳಗಾಗಿ** ನಗರಸಭಾ ಕಛೇರಿಗೆ ನಿಗಧಿತ ನಮೂನೆಯಲ್ಲಿ ಮಾಹಿತಿಗಳನ್ನು ಭರ್ತಿಮಾಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ವಿಷಯ ನಿರ್ವಾಹಕರನ್ನು ಭೇಟಿ ಮಾಡಲು ತಿಳಿಸಿದೆ.

**ಸೌಲಭ್ಯಗಳ ವಿವರ: ಶೇ.20 ರ ಪೌರಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳ ವಿವರ (20%) :** 1) ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿನ ಪೌರಕಾರ್ಮಿಕರುಗಳಿಗೆ ಮನೆಗಳ ರಿಪೇರಿಗಾಗಿ ಮೇಲ್ಚಾವಣಿಯ ದುರಸ್ಥಿ ಸಾಮಾಗ್ರಿಗಳನ್ನು ಖರೀದಿಸಲು, ನಿವೇಶನ ಖರೀದಿ, ಪಕ್ಕಾಮನೆ ನಿರ್ಮಾಣಕ್ಕೆ ಸಹಾಯಧನ ನೀಡುವುದು.

**ಶೇ.24.10ರ ಪರಿಶಿಷ್ಟ ಜಾತಿ ಮತ್ತು ಪಂಗಡದವರ ವೈಯಕ್ತಿಕ ಕಾರ್ಯಕ್ರಮಗಳ ವಿವರ. (60%): 1)** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಪಕ್ಕಾಮನೆ ನಿರ್ಮಾಣಕ್ಕಾಗಿ, ಮೇಲ್ಚಾವಣಿ ದುರಸ್ಥಿಗೆ, ನಿವೇಶನ ಖರೀದಿಗೆ ಸಹಾಯಧನ ನೀಡುವುದು. **2)** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಬಿಇ/ಎಂಬಿಬಿಎಸ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಲ್ಯಾಪ್‌ಟಾಪ್‌ಗೆ ಸಹಾಯಧನ ನೀಡುವುದು. **3)** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸ್ವಯಂ ಉದ್ಯೋಗಕ್ಕಾಗಿ ಬ್ಯಾಂಕ್‌ನಿಂದ ಸಾಲ ಮಂಜೂರು ಮಾಡಿದ ಮೊತ್ತಕ್ಕೆ ಶೇ. 50 ರಷ್ಟು ಅಥವಾ 1.50 ಲಕ್ಷಗಳ ಸಹಾಯಧನ ನೀಡುವುದು. 4) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಶಸ್ತ್ರ ಚಿಕಿತ್ಸೆಗೆ ಹಾಗೂ ವೈದ್ಯಕೀಯ ವೆಚ್ಚಕ್ಕಾಗಿ ಸಹಾಯಧನ ನೀಡುವುದು.

**ಶೇ.7.25%ರ ಇತರೆ ಹಿಂದುಳಿದ ಬಡವರ್ಗದ ಜನರ ಕಲ್ಯಾಣ ನಿಧಿಯ ವೈಯಕ್ತಿಕ ಕಾರ್ಯಕ್ರಮಗಳ ವಿವರ (40%):** 1) ಇತರೆ ಹಿಂದುಳಿದ ವರ್ಗದವರ ಬಡ ಜನರಿಗೆ ಪಕ್ಕಾಮನೆ ನಿರ್ಮಾಣಕ್ಕಾಗಿ ಸಹಾಯಧನ ನೀಡುವುದು.

**ಶೇ.5% ರ ವಿಕಲಚೇತನರ ಕಲ್ಯಾಣ ನಿಧಿಯ ವೈಯಕ್ತಿಕ ಕಾರ್ಯಕ್ರಮಗಳ ವಿವರ: 1)** ನಗರಸಭಾ ವ್ಯಾಪ್ತಿಯಲ್ಲಿನ ವಿಕಲಚೇತನರಿಗೆ ಶಸ್ತ್ರ ಚಿಕಿತ್ಸೆ ಹಾಗೂ ವೈದ್ಯಕೀಯ ವೆಚ್ಚಕ್ಕೆ ಸಹಾಯಧನ ನೀಡುವುದು. **2)** ನಗರಸಭಾ ವ್ಯಾಪ್ತಿಯಲ್ಲಿನ ವಿಕಲಚೇತನರಿಗೆ ಅರ್ಹ ಫಲಾನುಭವಿಗಳಿಗೆ ತ್ರಿಚಕ್ರ ವಾಹನ ಖರೀದಿಸಿ ನೀಡುವುದು.

**ಸೂಚನೆ/ಷರತ್ತುಗಳು:** 1) ಸೌಲಭ್ಯ ಪಡೆಯಲು ನಗರಸಭಾ ವ್ಯಾಪ್ತಿಯ ಖಾಯಂ ನಿವಾಸಿಗಳಾಗಿದ್ದು, ಕಡ್ಡಾಯವಾಗಿ ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ, ಅರ್ಜಿದಾರರ ಭಾವಚಿತ್ರ ಹಾಗೂ ಆದಾಯ/ಜಾತಿ ಪ್ರಮಾಣ ಪತ್ರವನ್ನು ಅರ್ಜಿ ಜೊತೆ ಲಗತ್ತಿಸಬೇಕು. **2)** ಲ್ಯಾಪ್‌ಟಾಪ್‌ಗೆ ಸಹಾಯಧನ ಪಡೆಯುವ ವಿದ್ಯಾರ್ಥಿ/ವಿದ್ಯಾರ್ಥಿನಿಯರುಗಳು ಈ ಕಛೇರಿಯಿಂದ ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿ ಕಾಲೇಜಿನ ಪ್ರಾಂಶುಪಾಲರು/ಮುಖ್ಯಸ್ಥರಿಂದ ದೃಢೀಕರಿಸಿ ಲಗತ್ತಿಸಬೇಕು. ಮತ್ತು ಅಂಕಪಟ್ಟಿಗಳ ದೃಢೀಕೃತ ನಕಲುಗಳನ್ನು ನೋಟರೀಕೃತ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸಬೇಕು. **3)** ವಿಕಲಚೇತನರು ಸೌಲಭ್ಯ ಪಡೆಯಲು ನಗರಸಭಾ ವ್ಯಾಪ್ತಿಯ ಖಾಯಂ ನಿವಾಸಿಗಳಾಗಿದ್ದು ಕಡ್ಡಾಯವಾಗಿ ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್ ಹಾಗೂ ಆದಾಯ/ಜಾತಿ ಪ್ರಮಾಣ ಪತ್ರ ಹಾಗೂ ವಿಕಲಚೇತನರಾಗಿರುವುದಕ್ಕೆ ಇಲಾಖೆಯಿಂದ ನೀಡಿರುವ ಪ್ರಮಾಣ ಪತ್ರವನ್ನು ಅರ್ಜಿ ಜೊತೆ ಲಗತ್ತಿಸಬೇಕು. 4) ಸೌಲಭ್ಯ ಪಡೆಯಲು ಅರ್ಜಿದಾರರು ಯಾವುದೇ ಮಾಹಿತಿಯನ್ನು ಮುಚ್ಚಿಟ್ಟಿಲ್ಲವೆಂದು/ಸುಳ್ಳು ಮಾಹಿತಿ/ದಾಖಲೆಗಳನ್ನು ನೀಡಿಲ್ಲವೆಂದು ನೋಟರೀಕೃತ ಪ್ರಮಾಣ ಪತ್ರವನ್ನು ಅರ್ಜಿ ಜೊತೆ ಲಗತ್ತಿಸಬೇಕು.

DIPR/MYS/265/SA/2026-27
ಸಹಿ/– **ಪೌರಾಯುಕ್ತರು,** ನಗರಸಭೆ, ಹೂಟಗಳ್ಳಿ

# ಯುವಜನರಿಗೆ ನಾಲ್ವಡಿ ಕೃಷ್ಣರಾಜರ ಆದರ್ಶಗಳು ಸದಾ ಸ್ಫೂರ್ತಿಯಾಗಿವೆ: ಬಿ. ಸಿ. ಶಿವಾನಂದಮೂರ್ತಿ



**ಮಂಡ್ಯ:** ಯುವಕರು ನಾಲ್ವಡಿ ಕೃಷ್ಣರಾಜ ಒಡೆಯರವರ ದೂರದೃಷ್ಟಿ, ಶಿಕ್ಷಣಪರತೆ, ಮತ್ತು ಸಾಮಾಜಿಕ ನ್ಯಾಯದ ಚಿಂತನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳಬೇಕು. ಅವರು ಆಧುನಿಕ ಮೈಸೂರು ಸಂಸ್ಥಾನದ ನಿರ್ಮಾಪಕರಾಗಿದ್ದು, ಯುವಜನರಿಗೆ ಅವರ ಆದರ್ಶಗಳು ಸದಾ ಸ್ಫೂರ್ತಿಯಾಗಿವೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಬಿ. ಸಿ. ಶಿವಾನಂದಮೂರ್ತಿ ರವರು ತಿಳಿಸಿದರು.

ಇಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಗರದ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮೈಸೂರು ಮತ್ತು ಮಂಡ್ಯ ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳ ರೈತರ ಕೃಷಿಗೆ ಅನುಕೂಲವಾಗಲು ಕಾವೇರಿ ನದಿಗೆ ಅಣೆಕಟ್ಟು ನಿರ್ಮಿಸಿ ರೈತರ ನೀರಾವರಿಯ ವ್ಯವಸ್ಥೆಯನ್ನು ಕಲ್ಪಿಸಿ ಅಪಾರ ಕೊಡುಗೆ ನೀಡಿದ್ದಾರೆ. ಏಷ್ಯಾದ ಮೊದಲ ಜಲವಿದ್ಯುತ್ ಕೇಂದ್ರವಾದ ಶಿವನಸಮುದ್ರ ಯೋಜನೆ ಆರಂಭಿಸಿ, ಮೈಸೂರು ಸಂಸ್ಥಾನಕ್ಕೆ ವಿದ್ಯುತ್ ಒದಗಿಸಿದರು ಎಂದು ತಿಳಿಸಿದರು.

ಎಲ್ಲರೂ ಶಿಕ್ಷಣ ಪಡೆಯುವ ನಿಟ್ಟಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿ. ಎಲ್ಲಾ ಮಹಿಳೆಯರಿಗೆ ಉಚಿತ ಶಿಕ್ಷಣ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲಾತಿಯನ್ನು ಕಲ್ಪಿಸಿದವರು ಹಾಗೂ ಭದ್ರಾವತಿ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ, ಮೈಸೂರು ಸ್ಯಾಂಡಲ್ ಸೋಪ್ ಕಾರ್ಖಾನೆ, ಮತ್ತು ಕಾಗದದ ಕಾರ್ಖಾನೆಗಳನ್ನು ಸ್ಥಾಪಿಸಿ ನಾಡಿನ ಅಭಿವೃದ್ಧಿಗೆ ಶ್ರಮಿಸಿದವರು ಅವರು ಎಂದು ತಿಳಿಸಿದರು.

ಬೆಂಗಳೂರು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠ ಕೆಂಗೇರಿಯ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ರವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತ ಅವಧಿಯಲ್ಲಿ 1918ರ ಆಗಸ್ಟ್ 3 ರಂದು ನಾಲ್ವಡಿಯವರು 'ಸರ್ ಲೆಸ್ಲಿ ಮಿಲ್ಲರ್' ನೇತೃತ್ವದಲ್ಲಿ ಹಿಂದುಳಿದ ವರ್ಗಗಳ ಆಯೋಗವೊಂದನ್ನು ರಚಿಸಿ ದೇಶದಲ್ಲಿ ಮೊಟ್ಟ ಮೊದಲ ಬಾರಿಗೆ ಶೋಷಿತರಿಗೆ ಸಮಾನತೆ, ಸ್ವತಂತ್ರ ಅಭಿವ್ಯಕ್ತಿ ಸ್ವತಂತ್ರ ಹಾಗೂ ಸಾಮಾಜಿಕವಾಗಿ, ಆರ್ಥಿಕವಾಗಿ ಸಬಲರನ್ನಾಗಿಸಲು ಮೀಸಲಾಯಿ ಯನ್ನು ಜಾರಿಗೆ ತಂದವರು ಅವರು ಎಂದು ತಿಳಿಸಿದರು.

ಭಾರತೀನಗರದ ಭಾರತೀಯ ಕಾಲೇಜಿನ ಸಾಹಿತಿಗಳು ಹಾಗೂ ನಿವೃತ್ತ ಪ್ರಾಂಶುಪಾಲರಾದ ಮ.ರಾಮಕೃಷ್ಣ ರವರು ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು 24 ನೇ ಮೈಸೂರು ಸಂಸ್ಥಾನದ ಒಡೆಯರು ಅವರು ಎಂದು ತಿಳಿಸಿದರು. ಅವರು ಏಷ್ಯಾದ ಮೊದಲ ಜಲವಿದ್ಯುತ್ ಯೋಜನೆಯಾದ ಶಿವನಸಮುದ್ರ ಜಲವಿದ್ಯುತ್ ಯೋಜನೆಯನ್ನು 1902 ರಲ್ಲಿ ಆರಂಭಿಸಿದರು.ಭದ್ರಾವತಿ ಉಕ್ಕಿನ ಕಾರ್ಖಾನೆ (ವಿಐಎಸ್ಎಲ್), ಮೈಸೂರು ಸ್ಯಾಂಡಲ್‌ವುಡ್ ಆಯಿಲ್ ಫ್ಯಾಕ್ಟರಿ, ಮತ್ತು ಮೈಸೂರು ಪೇಪರ್ ಮಿಲ್ಸ್‌ಗಳನ್ನು ಸ್ಥಾಪಿಸಿದರು.ಬೆಂಗಳೂರು ನಗರಕ್ಕೆ 1905 ರಲ್ಲಿ ಏಷ್ಯಾದಲ್ಲೇ ಮೊದಲು ವಿದ್ಯುತ್ ದೀಪಗಳನ್ನು ಅಳವಡಿಸಲಾಯಿತು ಎಂದು ತಿಳಿಸಿದರು.

ಇಂದು ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಆವರಣದಲ್ಲಿ ನಡೆದ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಅಲಂಕೃತ ಭಾವಚಿತ್ರದ ಮೆರವಣಿಗೆ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿಗಳಾ ಬಿ.ಸಿ ಶಿವಾನಂದಮೂರ್ತಿ ರವರು ಚಾಲನೆ ನೀಡಿದರು.

ವಿವಿಧ ಕಲಾ ತಂಡಗಳ ಮೂಲಕ ಜಿಲ್ಲಾ ಕಛೇರಿಯಿಂದ ಸಂಜಯ ವೃತ್ತ ,ಮಹಾವೀರ ವೃತ್ತ, ವಿ.ವಿ. ರಸ್ತೆ ಮೂಲಕ ಅಂಬೇಡ್ಕರ್ ಭವನವನ್ನು ತಲುಪಲಿತು.

ಕಾರ್ಯಕ್ರಮದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಬಿ. ಪಿ. ಪ್ರಕಾಶ್, ಅಪರ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ, ಡಿ. ಡಿ.ಪಿ.ಐ ಲೋಕೇಶ್, ನಾಲ್ವಡಿ ಕೃಷ್ಣರಾಜ ಒಡೆಯರ್ ಟ್ರಸ್ಟ್ ನ ಅಧ್ಯಕ್ಷರಾದ ತಗ್ಗಹಳ್ಳಿ ವೇಕಟೇಶ್, ದೇವರಾಜ ಅರಸು ಹಿಂದುಳಿದ ವರ್ಗಗಳ ಅಧ್ಯಕ್ಷರಾದ ಎಲ್. ಸಂದೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಬಿ. ವಿ. ನಂದೀಶ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಿ. ಚಲುವಯ್ಯ ಹಾಗೂ ಇತರೆ ಗಣ್ಯರು ಉಪಸ್ಥಿತರಿದ್ದರು ಉಪಸ್ಥಿತರಿದ್ದರು.

# ಮಂಡ್ಯದಲ್ಲಿ ಜೂ. 7ರಂದು ಗಂಗೋತ್ಸವ

**ಮಂಡ್ಯ:** ಜಿಲ್ಲಾ ಮಹಿಳಾ ಗಂಗಾಮತ (ಬೆಸ್ತರ) ಸಂಘದ ವತಿಯಿಂದ ಗಂಗಾಉತ್ಸವ ಕಾರ್ಯಕ್ರಮವನ್ನು ಜೂ.7ರಂದು ಬೆಳಗ್ಗೆ 11.30ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷೆ ಗಾಯಿತ್ರಿ ಸಿ.ಕೃಷ್ಣಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಅಂದು ಬೆಳಗ್ಗೆ 10 ಗಂಟೆಗೆ ಕಾಳಿಕಾಂಬ ದೇವಾಲಯದ ಆವರಣದ ಗಜೇಂದ್ರ ಗರುಡ ಮೋಕ್ಷ ಕಲ್ಯಾಣಿಯಿಂದ ವೇದಿಕೆಯವರೆಗೆ ಕುಂಭಮೇಳ ಹಾಗೂ ವಿವಿಧ ಕಲಾತಂಡಗಳೊಂದಿಗೆ ಶ್ರೀಗಂಗಾಪರಮೇಶ್ವರಿ ಭಾವಚಿತ್ರದ ಬೆಳ್ಳಿರಥೋತ್ಸವ ಹಾಗೂ ಶ್ರೀಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳ ಮೆರವಣಿಗೆ ಮಾಡಲಾಗುವುದು ಎಂದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಮಹಾಒಕ್ಕೂಟದ ಕಾರ್ಯಾಧ್ಯಕ್ಷ ಡಾ.ಡಿ.ಜಯರಾಮು ಗಂಗಾದೇವಿ ಉತ್ಸವಕ್ಕೆ ಚಾಲನೆ ನೀಡುವರು. ಕಲಾ ತಂಡಗಳಿಗೆ ಎಸ್.ಚಂದ್ರಶೇಖರ್, ಮುನಿರಾಜು, ದಿಲೀಪು ಕುರಂದವಾಡಿ ಚಾಲನೆ ನೀಡುವರು ಎಂದು ಹೇಳಿದರು.

ಕಾರ್ಯಕ್ರಮವನ್ನು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆಗಳ ಸಚಿವ ಎಚ್.ಡಿ.ಕುಮಾರಸ್ವಾಮಿ ಉದ್ಘಾಟಿಸುವರು. ಮಾಜಿ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅಂಬಿಗರ ಚೌಡಯ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಶಾಸಕ ಪಿ.ರವಿಕುಮಾರ್ ಗೌಡ ಅಧ್ಯಕ್ಷತೆ ವಹಿಸುವರು. ಸಂಘದ ಅಧ್ಯಕ್ಷ ಸಿ.ಗಾಯಿತ್ರಿ ಕೃಷ್ಣಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದು, ಮಾಜಿ ಸಚಿವರಾದ ಮಾಂಕಳ ವೈದ್ಯರ್, ಸಿ.ಎಸ್.ಪುಟ್ಟರಾಜು, ಪ್ರಮೋದ್ ಮಧ್ವರಾಜ್, ಶಾಸಕರಾದ ಪಿಎಂ.ನರೇಂದ್ರಸ್ವಾಮಿ, ರಮೇಶ್ ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಕೆ.ಎಂ. ಉದಯ್, ಎಚ್.ಡಿ.ಮಂಜು, ಮಧು ಜಿ.ಮಾದೇಗೌಡ ಘನ ಉಪಸ್ಥಿತಿ ವಹಿಸುವರು. ಯಶ್ ಪಾಲ್ ಸುವರ್ಣ, ಎನ್.ರವಿಕುಮಾರ್, ಕರ್ನಾಟಕ ರಾಜ್ಯ ರೇಷ್ಮೆ ಮಾರಾಟ ಮಂಡಳಿಯ ಅಧ್ಯಕ್ಷ ಗಂಗಾಧರ್ ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು. ನಾನಾ ಸಂಘಟನೆಗಳ ಮುಖಂಡರು, ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ವಿವರಿಸಿದರು.

ಗೋಷ್ಠಿಯಲ್ಲಿ ಸಂಘಟನಾ ಕಾರ್ಯದರ್ಶಿ ಮಂಜುಳ, ಉಪಾಧ್ಯಕ್ಷೆ ಬಿ.ರೇಣುಕಾ, ಡಿ.ಬಿ.ಗೀತಾ, ಕೆ.ಶೀಲಾವತಿ ಇದ್ದರು.




# ಮೈಷುಗರ್ ಕಾರ್ಖಾನೆಯಲ್ಲಿ ಅವ್ಯವಹಾರ ಆರೋಪ: ಬಹಿರಂಗ ಚರ್ಚೆಗೆ ಸಿದ್ಧ




**ಮಂಡ್ಯ:** ಮೈಷುಗರ್‌ನಲ್ಲಿನ ಅನುಪಯುಕ್ತ ವಸ್ತುಗಳ ಮಾರಾಟದ ಭ್ರಷ್ಟಾಚಾರ ಸಂಬಂಧ ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಮತ್ತು ಆಡಳಿತ ಮಂಡಳಿ ಜತೆ ಬಹಿರಂಗ ಚರ್ಚೆಗೆ ಸಿದ್ಧ ಎಂದು ನಗರಸಭೆ ಮಾಜಿ ಸದಸ್ಯ ಶಿವಕುಮಾರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ಮೈಶುಗರ್ ಕಾರ್ಖಾನೆಯಲ್ಲಿ ಅನುಪಯುಕ್ತ ವಸ್ತುಗಳನ್ನು ಅಕ್ರಮ ಇ–ಟೆಂಡರ್ ಕರೆದು ಭ್ರಷ್ಟಾಚಾರ ಎಸಗಲಾಗಿದೆ. ಈ ಬಗ್ಗೆ ಅಧ್ಯಕ್ಷರು ಯಾವುದೇ ರೀತಿಯಲ್ಲಿ ಚರ್ಚೆಗೆ ಕರೆದರೂ ಸಿದ್ಧನಿದ್ದೇನೆ ಎಂದು ಚರ್ಚೆಗೆ ಆಹ್ವಾನಿಸಿದರು.

ಈ ಸಂಬಂಧ 2025ರ ಅಕ್ಟೋಬರ್ 8ರಂದು ನಡೆದ ಸಭೆಯಲ್ಲಿ ಕಾರ್ಖಾನೆಯ ಆವರಣದಲ್ಲಿ ಇಂಜಿನಿಯರಿಂಗ್ ಕಾಲೇಜು ತಜ್ಞರಿಂದ ಅನುಪಯುಕ್ತ ವಸ್ತುಗಳನ್ನು ಗುರಿತಿಸಿ, ಪರಿಶೀಲಿಸಿ ತುರ್ತು ಅಲ್ಪಾವಧಿ ಟೆಂಡರ್ ಕರೆಯಲು ತೀರ್ಮಾನಿಸಲಾಗಿದೆ. ಆದರೆ ಅದರಲ್ಲಿ ಬಿ.ಮಿಲ್ ಸಂಬಂಧ ಚರ್ಚೆಯಾಗಿಲ್ಲ ಎಂದು ಹೇಳಿದರು.

ಕಾರ್ಖಾನೆಯ ಆಡಳಿತ ಮಂಡಳಿಯು 2022ರ ಅಕ್ಟೋಬರ್ 20ರಿಂದ 2025ರ ನವೆಂಬರ್ 19ರವರೆಗೆ ಅನುಪಯುಕ್ತ ವಸ್ತುಗಳನ್ನು ಮಾರಾಟ ಮಾಡಲು ಯಾವುದೇ ಕ್ರಮ ವಹಿಸಿಲ್ಲ ಎಂದು ಕಳೆದ ಮೇ.22ರಂದ ಮಾಹಿತಿ ನೀಡಿದ್ದಾರೆ. ಆದ್ದರಿಂದ ಈಗ ಅನುಪಯುಕ್ತ ವಸ್ತುಗಳ ಮಾರಾಟ ಸಂಬಂಧ ಕರೆದ ಟೆಂಡರ್ ಅಕ್ರಮವಾಗಿದ ಎಂದು ವಾದ ಮಂಡಿಸಿದರು.

ಕಳೆದ ಏ.25ರಂದು ಕಾರ್ಖಾನೆಯ 'ಎ' ದರ್ಜೆ ನೌಕರರಿಲ್ಲ ಸ್ಕ್ರಾಪ್ ಸಮಿತಿಗೆ ಸರಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಕಬ್ಬು ಅಭಿವೃದ್ಧಿ ಆಯುಕ್ತರು ಅನುಮತಿ ನೀಡಿಲ್ಲ. ಅಲ್ಲದೇ ಆ ವಸ್ತುಗಳು ಕಾರ್ಖಾನೆಯ ಹೊರಗೆ ಕೊಂಡೊಯ್ಯುವಾಗ ಸಮಿತಿಯಿಂದ ನೇಮಕವಾದ ಗುಮಾಸ್ತ ಚೇತನ್ ಸಹಿ ಹಾಕಿ ಅನುಮೋದನೆಯನ್ನೂ ನೀಡಿಲ್ಲ ಎಂದು ಆರೋಪಿಸಿದರು.

ಸರಕಾರದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಉಪಕಾರ್ಯದರ್ಶಿ ಲೀಲಾವತಿ ಅವರು ಅನುಪಯುಕ್ತ ವಸ್ತುಗಳ ಮಾರಾಟ ತಡೆಯಲು ತಡೆಯಲು ಕೋರಿದ ಬಗ್ಗೆ ವಾಸ್ತವಾಂಶ ವರದಿ ಕಳುಹಿಸಿಕೊಡಲು ನಿರ್ದೇಶನ ನೀಡಿದರು. ಇದುವರೆಗೆ ವರದಿ ಸಲ್ಲಿಸಲಾಗಿಲ್ಲ. ಆದ್ದರಿಂದ ಇಲ್ಲಿ ಬಾರಿ ಭ್ರಷ್ಟಾಚಾರ ನಡೆದಿದ್ದು, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಜಿಲ್ಲಾದಂಡಾಧಿಕಾರಿಗಳ ಸಮ್ಮುಖದಲ್ಲಿ ಎಲ್ಲೇ ಚರ್ಚೆಗೆ ಕರೆದರೂ ಸಿದ್ಧ. ಇದಕ್ಕೆ ಬಿಜೆಪಿ ಮುಖಂಡರು ಬೇಕಾಗಿಲ್ಲ, ಕಾರ್ಯಕರ್ತರೇ ಸರಿಯಾದ ಉತ್ತರ ನೀಡುತ್ತೇವೆ ಎಂದು ಸವಾಲೆಸದ ಅವರು ಈ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಲು ಆಗ್ರಹಿಸಿದರು.

ಗೋಷ್ಠಿಯಲ್ಲಿ ಬಿಜೆಪಿ ನಗರ ಅಧ್ಯಕ್ಷ ಪ್ರಸನ್ನಕುಮಾರ್, ಮುಖಂಡರಾದ ವೆಂಕಟೇಶ್, ಸತೀಶ್, ಚಂದ್ರು, ಮನು, ಸುನಿಲ್ ಕುಮಾರ್ ಇದ್ದರು.

# ಅಂಬೇಡ್ಕರ್–ಒಡೆಯರ್ ಸ್ಮಾರಕ ನಿರ್ಮಾಣಕ್ಕೆ ಹೆಚ್ಚುವರಿ 9 ಎಕರೆ ಜಾಗ : ಜಿಲ್ಲಾಧಿಕಾರಿ ಭರವಸೆ

**ಹಾಸನ:** ಡಾ.ಬಿ.ಆರ್ ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸ್ಮಾರಕ ನಿರ್ಮಾಣ ಹಾಗೂ ಸಂಶೋಧನಾ ಕೇಂದ್ರಕ್ಕೆ ಹೆಚ್ಚುವರಿಯಾಗಿ 9 ಎಕರೆ ಜಾಗ ಹಾಗೂ 20ಕೋಟಿ ಅನುದಾನ ನೀಡಲು ಜಿಲ್ಲಾಧಿಕಾರಿ ಲತಾ ಕುಮಾರಿ ಭರವಸೆ ನೀಡಿದ್ದಾರೆ.




ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಮಾರಕ ನಿರ್ಮಾಣಕ್ಕೆ ಹೆಚ್ಚುವರಿ ಜಾಗ ಹಾಗೂ ಅನುದಾನ ನೀಡುವಂತೆ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಸ್ಮಾರಕ ಮತ್ತು ಸಂಗ್ರಾಲಯ ಮತ್ತು ಸಂಶೋಧನಾ ಕೇಂದ್ರ ಹೋರಾಟ ಸಮಿತಿ ವತಿಯಿಂದ ಸರ್ಕಾರಕ್ಕೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಮಾಡಲಾಗಿತ್ತು ಅದರಂತೆ ಇಂದು ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಡಾ.ಬಿ.ಆರ್ ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸ್ಮಾರಕ ನಿರ್ಮಾಣ ಹಾಗೂ ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ಒಂದು ಚಿಟಿಕಿ ಮರಳು ಹಾಕುವ ಮೂಲಕ ಹೆಚ್ಚುವರಿ ಒಂಭತ್ತು ಎಕರೆ ಜಾಗ ಹಾಗೂ 20 ಕೋಟಿ ಅನುದಾನ ನೀಡುವುದಾಗಿ ಭರವಸೆ ನೀಡಿದ್ದಾರೆ. ನಂತರ ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಜಿಲ್ಲಾಮಟ್ಟದ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಭಾಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಈಗಾಗಲೇ ಡಾ.ಬಿ.ಆರ್ ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಮ್ಯೂಸಿಯಂ ನಿರ್ಮಾಣಕ್ಕೆ ಈಗಾಗಲೇ 3 ಕೋಟಿ ಅನುದಾನ ಸರ್ಕಾರ ನೀಡಲಾಗಿದ್ದು ಇದನ್ನು ಸದ್ಬಳಕ್ಕೆ ಮಾಡಿಕೊಳ್ಳಲು ಜೂನ್ 12ರ ಗುರುವಾರ ಸಭೆಕರೆಯಲಾಗಿದ್ದು ಸಭೆಯಲ್ಲಿ ಸಾಧಕ–ಬಾಧಕಗಳ ಬಗ್ಗೆ ಎಲ್ಲಾ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗು ವುದು ಎಂದು ತಿಳಿಸಿದರು.

ಸಭೆಯ ಅಧ್ಯಕ್ಷತೆಯನ್ನು ಸದರಿ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಹಾಗೂ ಸರ್ಕಾರಿ ನಾಮನಿರ್ದೇಶಿತ ರಾಜ್ಯ ಉಪಾಧ್ಯಕ್ಷರಾದ ಶ್ರೀಧರಕಲಿವೀರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ದೂದ್‌ಪೀರ್, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಮನುಕುಮಾರ್ ಸೇರಿದಂತೆ ಹೋರಾಟ ಸಮಿತಿಯ ಹಿರಿಯ ಸದಸ್ಯರು ಹಾಗೂ ಜಿಲ್ಲೆಯ ಎಲ್ಲಾ ಹಿರಿಯ,ಕಿರಿಯ ದಲಿತ ಮುಖಂಡರು ಹಾಜರಿದ್ದರು ಸಭೆಯ ಯಶಸ್ವಿಗೊಳಿಸಿದರು.

# ಸರ್ಕಾರಿ ಶಾಲೆಗಳಲ್ಲೂ ಉತ್ತಮ ಭವಿಷ್ಯ: ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ವಿತರಣೆ

**ತಿ.ನರಸೀಪುರ:** ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಹೆಚ್ಚು ಉನ್ನತ ಮಟ್ಟದ ಉದ್ಯೋಗ ಅಲಂಕರಿಸಿದ್ದಾರೆ, ಮತ್ತು ದೊಡ್ಡ ಅಧಿಕಾರ ಹೊಂದಿರುವ ರಾಜಕಾರಣಿಗಳಾಗಿದ್ದಾರೆ. ಪ್ರಸ್ತುತ ದಿನದಲ್ಲಿ ಪೋಷಕರು ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಲು ಹಿಂಜರಿಯುತ್ತಿದ್ದಾರೆ. ಸರ್ಕಾರಗಳು ಶಿಕ್ಷಣಕ್ಕೆ ಅನೇಕ ಉತ್ತಮ ಯೋಜನೆಗಳನ್ನು ನೀಡಿವೆ. ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಲು ಒಲವು ತೋರಿಸಬೇಕು ಎಂದು ಶಾಲೆಯ ಹಳೆಯ ವಿದ್ಯಾರ್ಥಿ, ಪ್ರಥಮ ದರ್ಜೆ ಗುತ್ತಿಗೆದಾರ ರಂಗರಾಜಪುರ ಸಿದ್ದರಾಜು ಹೇಳಿದರು.



ತಾಲ್ಲೂಕಿನ ರಂಗರಾಜಪುರದ ಸರ್ಕಾರಿ ಶಾಲೆ ಮಕ್ಕಳಿಗೆ ಸಿದ್ದರಾಜುರವರು ಉಚಿತವಾಗಿ ಬ್ಯಾಗ್ ಮತ್ತು ನೋಟ್ ಪುಸ್ತಕ ವಿತರಿಸಿ ಮಾತನಾಡಿದ ಅವರು ತಾವು ಓದಿದ್ದ ಶಾಲೆಯ ಮಕ್ಕಳಿಗೆ ಪ್ರತಿ ವರ್ಷ ಉಚಿತವಾಗಿ ಬ್ಯಾಗ್ ನೋಟ್ ಪುಸ್ತಕ ವಿತರಣೆ ಮಾಡುತ್ತ ಬಂದಿದ್ದೇನೆ.ಸರ್ಕಾರಿ ಶಾಲೆಯಲ್ಲಿ ಪ್ರಸ್ತುತ ಮಕ್ಕಳ ಸಂಖ್ಯೆ ಕ್ಷೀಣಿಸುತ್ತಿದೆ. ಪೋಷಕರ ನಮಗೆ ಎಷ್ಟೇ ಕಷ್ಟ ಆದರೂ ಖಾಸಗಿ ಶಾಲೆಯಲ್ಲಿ ಮಕ್ಕಳನ್ನು ಓದಿಸಬೇಕೆಂದು ಖಾಸಗಿ ಶಾಲೆಯತ್ತ ಹೆಚ್ಚು ಒಲವು ತೋರುತ್ತಿದ್ದಾರೆ. ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯಲ್ಲಿ ಓದಿದ ಮಕ್ಕಳು ಖಾಸಗಿ ಶಾಲೆಯಲ್ಲಿ ಓದುವ ಮಕ್ಕಳಿಗಿಂತ ಹೆಚ್ಚು ಅಂಕ ಗಳಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿರುವ ನಿದರ್ಶನಗಳಿವೆ ಎಂದರು. ಸರ್ಕಾರಿ ಶಾಲೆಯ ಶಿಕ್ಷಕರು ಶಾಲೆಯಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಿ, ಪೋಷಕರು ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸುವ ಹಾಗೆ ಆಕರ್ಷಣೆಯ ಪಾಠ ಪ್ರವಚನ ಮಾಡಬೇಕು. ನಾನು ಕೂಡ ಇದೆ ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿದ್ದೆ, ನನ್ನೂರಿನ ಶಾಲೆಯ ಅಭಿವೃದ್ಧಿಗೆ ಸದಾ ಸಹಕರಿಸುತ್ತೇನೆ ಎಂದರು. ವೇಳೆ ಶಾಲೆಯ ಶಿಕ್ಷಕರ ವತಿಯಿಂದ ಸಿದ್ದರಾಜು ರವರನ್ನು ಸನ್ಮಾನಿಸಲಾಯಿತು. ಈ ಸಂದರ್ಭ ಗ್ರಾಪಂ ಮಾಜಿ ಅಧ್ಯಕ್ಷ ಪುಟ್ಟಸ್ವಾಮಿ, ಯಜಮಾನ್ ಲೋಕೇಶ್, ಶಿವಣ್ಣ, ಶ್ರೀನಿವಾಸ್, ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಲೋಕೇಶ್ ಶಾಲೆಯ ಶಿಕ್ಷಕ ವೃಂದದವರು ಇದ್ದರು.

## ಸಚಿವ ಸಂಪುಟದಲ್ಲಿ ಸಿದ್ದರಾಮಯ್ಯ, ಮಹದೇವಪ್ಪರಿಗೆ ಉನ್ನತ ಸ್ಥಾನ ನೀಡಲು ಒತ್ತಾಯ

**ಮಂಡ್ಯ:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರಕಾರದಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ ಮತ್ತು ಡಾ.ಎಚ್.ಸಿ.ಮಹದೇವಪ್ಪ ಅವರಿಗೆ ಉನ್ನತ ಸ್ಥಾನ ನೀಡಲು ಮುಂದಾಗಬೇಕು ಎಂದು ಕಾಂಗ್ರೆಸ್ ಮುಖಂಡ ಬಿ.ಎಂ.ಮಹೇಂದ್ರ ಕುಮಾರ್ ಒತ್ತಾಯಿಸಿದ್ದಾರೆ.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೂತನ ಸಚಿವ ಸಂಪುಟದಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ಉಪಮುಖ್ಯಮಂತ್ರಿ, ಡಾ.ಎಚ್.ಸಿ.ಮಹದೇವಪ್ಪ ಅವರಿಗೆ ವೈದ್ಯಕೀಯ ಶಿಕ್ಷಣ ಸಚಿವ ಹಾಗೂ ಜಿಲ್ಲೆಯ ಚಲುವರಾಯಸ್ವಾಮಿ ಮತ್ತು ಪಿ.ಎಂ.ನರೇಂದ್ರಸ್ವಾಮಿ ಅವರಿಗೆ ಸಚಿವ ಸ್ಥಾನ ನೀಡುವಂತೆ ಮನವಿ ಮಾಡಿದರು. ಗೋಷ್ಠಿಯಲ್ಲಿ ಮುಖಂಡ ಅಕ್ಮಲ್ ಪಾಷಾ ಇದ್ದರು.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**ಕೆ.ಆರ್.ನಗರ:** ಕರ್ನಾಟಕ ರಾಜ್ಯ ಎಸ್‌ಸಿ/ಎಸ್‌ಟಿ ನೌಕರರ ಸಂಘದ ತಾಲೂಕು ಶಾಖೆಯ ವತಿಯಿಂದ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕಿನ ಪ್ರತಿಭಾವಂತ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಆಸಕ್ತ ಅರ್ಹ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರಗಳ ಸ್ವಯಂ ದೃಢೀಕರಿಸಿದ ನಕಲು ಪ್ರತಿಗಳು, ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಮತ್ತು ದೂರವಾಣಿ ಸಂಖ್ಯೆಯೊಂದಿಗೆ ಜೂ.15ರೊಳಗೆ ಅರ್ಜಿಯನ್ನು ವಾಟ್ಸ್ ಅಪ್ ಮುಖಾಂತರ ಕಳುಹಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಘದ ಅಧ್ಯಕ್ಷ ಎನ್.ಕೆ.ಮಹದೇವಪ್ಪ – 9972123199, ಖಜಾಂಚಿ ಕಿರಣ್‌ಕುಮಾರ್ – 9739220924, ಸಂಘಟನಾ ಕಾರ್ಯದರ್ಶಿ ಬಿ.ಎಲ್.ಮಹದೇವ – 8105405409 ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಸಂಘದ ಪ್ರಧಾನಕಾರ್ಯದರ್ಶಿ ಎಂ.ಎಲ್.ಸತೀಶ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಸಮಗ್ರ ಪರಿಷ್ಕರಣೆಗೆ ಸಹಕರಿಸಲು ಜಿಲ್ಲಾಧಿಕಾರಿ ಕರೆ

**ರಾಮನಗರ:** ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ, ಮೂರನೇ ಹಂತದಲ್ಲಿ ಆರಂಭಗೊಂಡಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ (ಸ್ಪೆಷಲ್ ಸಮ್ಮರಿ ರಿವಿಷನ್–ಎಸ್‌ಐಆರ್) ಪ್ರಕ್ರಿಯೆ ಜಿಲ್ಲೆಯಲ್ಲಿ ಆರಂಭಗೊಂಡಿದ್ದು, ಮತದಾರರ ಪಟ್ಟಿಯಲ್ಲಿ ಹೆಸರಿದ್ದು ಮೃತಪಟ್ಟವರ ಹೆಸರನ್ನು ಪಟ್ಟಿಯಿಂದ ತೆಗೆಯುವುದು, ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸ್ಥಳಾಂತರಗೊಂಡ ಮತದಾರರು, ವಲಸಿಗ ಮತದಾರರು ಹಾಗೂ ಎರಡೂ ಕಡೆ ಮತದಾರರ ಪಟ್ಟಿಯಲ್ಲಿ ಹೆಸರಿರುವಂತಹ ಮತದಾರರು ಹಾಗೂ ಭಾರತೀಯ ನಾಗರೀಕರಲ್ಲದವರಿಗೆ ಮತದಾನದ ಹಕ್ಕು ಇಲ್ಲದ ಕಾರಣ ಅವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆಯುವ ಪರಿಷ್ಕರಣಾ ಕಾರ್ಯವನ್ನು ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ, ಬೆಂಗಳೂರು ದಕ್ಷಿಣ ಜಿಲ್ಲೆಯ ಮತದಾರರು ಈ ಪ್ರಕ್ರಿಯೆಗೆ ಸಹಕರಿಸುವಂತೆ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಕೋರಿದರು.



ಅವರು ಜೂ.04ರ ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಈ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ವಿಶೇಷ ಸಮಗ್ರ ಪರಿಷ್ಕರಣೆ–2026ರ (ಎಸ್‌ಐಆರ್) ಎಂಬುದು ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಪರಿಶೀಲಿಸಿ ನವೀಕರಿಸುವ ವಿಶೇಷ ಪ್ರಕ್ರಿಯೆಯಾಗಿದೆ. ಜನರ ಆಗಾಗ್ಗೆ ವಲಸೆ, ಇದರಿಂದ ಕೆಲವು ಮತದಾರರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ನೋಂದಣಿ, ನಕಲಿ ಮತದಾರರನ್ನು ತೆಗೆದು ಹಾಕುವುದು, ಮರಣ ಹೊಂದಿದ ಮತದಾರರ ಹೆಸರುಗಳನ್ನು ತೆಗೆದು ಹಾಕುವುದು, ವಿದೇಶಿ ನಾಗರಿಕರ ಹೆಸರುಗಳು ತಪ್ಪಾಗಿ ಸೇರಿರುವ ಸಾಧ್ಯತೆ, ಅನರ್ಹ ಮತದಾರರನ್ನು ಪತ್ತೆ ಹಚ್ಚಿ ತೆಗೆದು ಹಾಕುವುದಾಗಿದೆ ಎಂದು ಹೇಳಿದರು.

ಈ ಕಾರ್ಯಕ್ಕೆ ಈಗಾಗಲೇ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ಮ್ಯಾಪಿಂಗ್ ಶುರುವಾಗಿದ್ದು, ಅದು ಶೇ. 90.47ರಷ್ಟು ಕಾರ್ಯ ಪೂರ್ಣಗೊಂಡಿದೆ. ಅಂದರೆ ಜಿಲ್ಲೆಯ 9,39,081 ಮತದಾರರ ಪೈಕಿ 8,49,572 ಮತದಾರರ ಮ್ಯಾಪಿಂಗ್ ಕಾರ್ಯ ಮಾಡಲಾಗಿದೆ. 2002ರ ಮತದಾರರ ಪಟ್ಟಿಯಲ್ಲಿ ಅವರ ಹೆಸರಿದ್ದು, ಅಥವಾ ಅವರ ತಂದೆ ಅಥವಾ ಅಜ್ಜ ಅಥವಾ ಸಂಬಂಧಿಕರ ಹೆಸರಿದ್ದರೆ ಮಾತ್ರ ಮ್ಯಾಪಿಂಗ್ ಕಾರ್ಯ ಸಾಧ್ಯ, ಈ ರೀತಿಯ 100 ರಲ್ಲಿ 90 ಜನರ ಮ್ಯಾಪಿಂಗ್ ಪೂರ್ಣಗೊಂಡಿದೆ ಎಂದರು.

# ರಜತ್ ಪಾಟಿದಾರ್: ಮುಳ್ಳಿನ ಹಾದಿಯಲಿ ಅರಳಿದ ಪ್ರತಿಭೆ


ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 36

ಯಶಸ್ಸು ಎಂದರೆ ಕೇವಲ ಕೈತುಂಬಾ ಪ್ರತಿಭೆಯಲ್ಲ; ಅದು ತಾಳ್ಮೆಯ ದೀಪ, ಪರಿಶ್ರಮದ ಎಣ್ಣೆ, ಛಲದ ಬತ್ತಿಯಿಂದ ಬೆಳಗುವ ಜೀವಜ್ಯೋತಿ. ಈ ಮಾತಿಗೆ ಮೂರ್ತರೂಪವೆಂದರೆ ಕ್ರಿಕೆಟಿಗ ರಜತ್ ಪಾಟಿದಾರ್. ಇಂದೋರ್‌ನ ಕೆಂಪು ಮಣ್ಣಿನಿಂದ ಕನಸಿನ ಅಂಗಳಕ್ಕಿಳಿದ ಅವರ ಬದುಕು ಗುಲಾಬಿ ಹಾಸಿಗೆಯಾಗಿರಲಿಲ್ಲ. ಪ್ರತಿ ತಿರುವಿನಲ್ಲೂ ನೋವಿನ ಕಲ್ಲು, ಸೋಲಿನ ಮುಳ್ಳು. ಆದರೂ ಎದೆಗುಂದದೆ, ಬ್ಯಾಟಿನ ಮೊನೆಗೆ ಕನಸು ಚುಚ್ಚಿ ಇಂದು ಭಾರತದ ಭರವಸೆಯಾಗಿ ನಿಂತಿದ್ದಾರೆ. ರಣಜಿಯಲ್ಲಿ ರನ್‌ಗಳ ಬೆಳೆ ತೆಗೆದರೂ ರಾಷ್ಟ್ರೀಯ ತಂಡದ ಬಾಗಿಲು ತೆರೆಯಲು ಹತ್ತು ವರುಷದ ತಪಸ್ಸು ಬೇಕಾಯಿತು. ಐಪಿಎಲ್‌ನಲ್ಲಿ ಆರ್‌ಸಿಬಿಯ ಕೆಂಪು ಜರ್ಸಿಯಲ್ಲಿ ಶತಕದ ಸಿಡಿಲು ಬಾರಿಸಿದಾಗ ಜಗವೆಲ್ಲ ಬೆರಗಾಯಿತು. ಆದರೆ ವಿಧಿಯ ಕ್ರೌರ್ಯಕ್ಕೆ ಗಾಯಗೊಂಡು, ಶಸ್ತ್ರಚಿಕಿತ್ಸೆಯ ಶಯ್ಯೆಯಲ್ಲಿ ತಿಂಗಳುಗಟ್ಟಲೆ ನರಳಿದರು. ಯಾವ ಕ್ರೀಡಾಪಟುವಿಗಾದರೂ ಅದು ಕನಸಿನ ಸಮಾಧಿ. ಆದರೆ ರಜತ್ ಬೂದಿಯಿಂದಲೇ ಫೀನಿಕ್ಸ್‌ನಂತೆ ಎದ್ದರು.

ಪುನರಾಗಮನದ ಹಾದಿಯಲ್ಲಿ ಶಿಸ್ತಿನ ದೀಕ್ಷೆ, ಬೆವರಿನ ಅಭಿಷೇಕ. ಕೊನೆಗೂ ಟೆಸ್ಟ್ ಕ್ಯಾಪ್ ತೊಟ್ಟು ತ್ರಿವರ್ಣ ಧ್ವಜಕ್ಕೆ ಸಲಾಂ ಹೇಳಿದರು. ರಜತ್ ನಮಗೆ ಹೇಳುವ ನೀತಿಪಾಠವೊಂದೇ: ಅವಕಾಶ ನಾಳೆ ಬರಬಹುದು, ಆದರೆ ನಿನ್ನ ಸಿದ್ಧತೆ ಇಂದೇ ಇರಬೇಕು. ಸೋಲಿನಲ್ಲಿ ಮೌನ, ಗೆಲುವಿನಲ್ಲಿ ವಿನಯ. ಅಡೆತಡೆಗಳ ಗುಡ್ಡವನ್ನು ಸವರಿ ಶಿಖರ ಮುಟ್ಟುವ ಪ್ರತಿ ಯುವ ಎದೆಗೆ ರಜತ್ ಅವರ ಮೌನ ಕ್ರಾಂತಿಯೇ ಮಹಾಮಂತ್ರ.





ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ಇಂದ್ರಲೋಕದ ಚಂದ್ರಿಕೆಯಂತೆ ಕಂಡ ರಾಗಿಣಿ

ಹಾಡುಗಳನ್ನ ಕೇಳ್ತಾ ಇದ್ದರೆ ಮನಸ್ಸಿಗೆ ಮುದ ನೀಡಬೇಕು, ಕಿವಿಗೆ ಹಿತ ವೆನಿಸಬೇಕು. ಆ ರೀತಿ ಇರಬೇಕು ಸಾಹಿತ್ಯ. ಅಷ್ಟು ಇಂಪಾದ ಸಾಹಿತ್ಯವನ್ನ ನೀಡಿರೋದು ಮದನಿಕ ಚಿತ್ರತಂಡ. ಹೌದು ಮದನಿಕ ಸಿನಿಮಾದಿಂದ ಕಾನನಗಳ ಕನ್ನಿಕಾ, ಇಂದ್ರಲೋಕ ಚಂದ್ರಿಕಾ, ಪಟ್ಟದರಸಿಯಾದಳೀಗಾ ಮದನಿಕ ಎಂಬ ಹಾಡು ರಿಲೀಸ್ ಆಗಿದೆ. ಈ ಹಾಡಲ್ಲಿ ರಾಗಿಣಿ ದ್ವಿವೇದಿ ಅಪ್ಸರೆಯಂತೆ ಕಾಣಿಸ್ತಾ ಇದ್ದಾರೆ. ಗೊಂಬೆಗಳಂತೆ ಈ ಹಾಡಿನಲ್ಲಿ ರಾಜ–ರಾಣಿ, ಸೇವಕಿಯರನ್ನ ಸೃಷ್ಟಿ ಮಾಡಲಾಗಿದೆ. ರಾಜನಂತೆ ದೇವ್ ಗಿಲ್ ಕಾಣಿಸಿಕೊಂಡಿದ್ದಾರೆ. ಅರಮನೆಯ ಬ್ಯಾಕ್ ಡ್ರಾಪ್ ನಲ್ಲಿ ಹಾಡನ್ನ ಶೂಟ್ ಮಾಡಲಾಗಿದೆ. ದೇವಲೋಕದ ಸೃಷ್ಟಿಯಂತೆ ಕಣ್ಣಿಗೆ ಸುಂದರವಾಗಿ ಈ ಹಾಡಿನ ದೃಶ್ಯ ಮೂಡಿ ಬಂದಿದೆ.

ಈ ಹಾಡಿನ ಸಾಹಿತ್ಯವನ್ನು ಬರೆದವರು ಕೆ ಕಲ್ಯಾಣ್ ಅವರು. ಅದ್ಭುತ ಮ್ಯೂಸಿಕ್ ನೀಡಿದವರು ಸಲಾಮ್ ವಿರೋಲಿ. ಹಾಗೇ ಇಷ್ಟು ಸುಂದರ ಪದಗಳಿಗೆ ಧ್ವನಿಯಾದವರು ವಿಜಯ್ ಪ್ರಕಾಶ್ ಹಾಗೂ ಅನುರಾಧ ಭಟ್. ಹಾಡು ಇಷ್ಟು ಅದ್ಭುತವಾಗಿ ನಾಟುವುದಕ್ಕೆ ಈ ಧ್ವನಿಯೂ ಕಾರಣವಾಗಿದೆ. ಡಿಬೀಟ್ ಮ್ಯೂಸಿಕ್ ವರ್ಲ್ಡ್ ನಲ್ಲಿ ಹಾಡು ರಿಲೀಸ್ ಆಗಿ ಒಳ್ಳೆ ರೆಸ್ಪಾನ್ಸ್ ಪಡೆದುಕೊಳ್ತಿದೆ.

'ಎಸ್.ಪಿ.ಆರ್ ಪ್ರೊಡಕ್ಷನ್ಸ್? ಮತ್ತು ?ಸಖರ್ಥ್ ಡಿಜಿಟಲ್ ಹೌಸ್? ಬ್ಯಾನರಿನಲ್ಲಿ ಸುಜಾತ ಲಕ್ಷ್ಮೀ, ಕುಮಾರಸ್ವಾಮಿ ?ಮದನಿಕ? ಚಿತ್ರವನ್ನ ನಿರ್ಮಾಣ ಮಾಡಿದ್ದಾರೆ. ಬಿ. ಎಸ್. ಸಂಜಯ್ ನಿರ್ದೇಶನವಿದ್ದು, ಧರ್ಮ ಕೀರ್ತಿರಾಜ್, ದೇವ್ ಗಿಲ್, ಹರೀಶ್ ರಾಜ್, ರಾಜ್ವಿ, ಶಶಿಕುಮಾರ್ ಮೊದಲಾದ ಕಲಾವಿದರು ಇತರ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಆರ್. ಗಿರಿ ಛಾಯಾಗ್ರಹಣ, ಚಿತ್ರದಲ್ಲಿ ಒಟ್ಟು ಹತ್ತು ಹಾಡುಗಳಿದ್ದು ಶಾಸ್ತ್ರೀಯ ಶೈಲಿಯಲ್ಲಿರುವ ಈ ಹಾಡುಗಳಿಗೆ ಸಲಾಂ ವೀರೋಲಿ ಸಂಗೀತ ಸಂಯೋಜಿಸಿದ್ದು, ಕೆ. ಕಲ್ಯಾಣ್, ಡಾ. ದೇವಾನಂದ್ ಮೊದಲಾದವರು ಸಾಹಿತ್ಯ ಒದಗಿಸಿದ್ದಾರೆ. ಮದನ್ ಹರಿಣಿ, ತ್ರಿಭುವನ್ ಹಾಡುಗಳಿಗೆ ನೃತ್ಯ ಸಂಯೋಜಿಸಿದ್ದಾರೆ.

**ಇಂದ್ರ ಲೋಕಕ್ಕೆ ರಾಗಿಣಿ ಈಗ ಪಟ್ಟದರಸಿ**



## `ಕೊರಗಜ್ಜ 'ಚಿತ್ರ: ನಿರ್ದೇಶಕ ಸುಧೀರ್ ಅತ್ತಾವರ್ ಗೆ ಐಶಾರಾಮಿ ಫ್ಲಾಟ್ ಗಿಫ್ಟ್ ನೀಡಿದ ನಿರ್ಮಾಪಕ!

ಕಳೆದ ಜನವರಿ ತಿಂಗಳಲ್ಲಿ ಬಿಡುಗಡೆಗೆ ಸರ್ವ ಸನ್ನದ್ದವಾಗಿ, ಝೀ ಮ್ಯೂಸಿಕ್ ಬ್ಯಾನರ್ ಅಡಿ ಭರ್ಜರಿ ಆಡಿಯೋ ಲಾಂಚ್ ಕೂಡಾ ಮಾಡಿದ್ದ, ಸುಧೀರ್ ಅತ್ತಾವರ್ ನಿರ್ದೇಶನದ ಕೊರಗಜ್ಜ ಚಿತ್ರವನ್ನು ,ಕೊನೇ ಗಳಿಗೆಯಲ್ಲಿ ಧಿಡೀರ್ ಎಂದು ಚಿತ್ರವು 3ಆ ಯಾಗಿ ಮಾರ್ಪಡಿಸುವ ದೊಡ್ಡ ಸುದ್ದಿ ಕೊಟ್ಟು ಬಿಡುಗಡೆಯನ್ನು ಮುಂದೂಡಿತು.

ಈಗ ಕೊಚ್ಚಿ ಮತ್ತು ಚೆನ್ನೈ ನಲ್ಲಿ ಚಿತ್ರದ 3ಡಿ ಕೆಲಸ ಭರದಿಂದ ಸಾಗುತ್ತಿದೆ. ಚಿತ್ರವು ತಾಂತ್ರಿಕವಾಗಿ ಯಾವುದೇ ಅಂತರಾಷ್ಟ್ರೀಯ ಮಟ್ಟದ ಸಿನಿಮಾಗೂ ಕಡಿಮೆ ಇಲ್ಲ ಎನ್ನುವ ಹಾಗೆ ಚಿತ್ರ ಮೂಡಿ ಬರುತ್ತಿದೆ ಎನ್ನುವ ವಿಷಯವನ್ನು ನಿರ್ದೇಶಕ ಸುಧೀರ್ ಅತ್ತಾವರ್ ತಿಳಿಸಿದರು. ಇದಕ್ಕೆ ಪೂರಕವಾಗಿ ಅಂತಾರಾಷ್ಟ್ರೀಯ ವಿತರಣಾ ಸಂಸ್ಥೆಗಳು ಆಸಕ್ತಿ ತೋರಿಸುತ್ತಿರುವುದರಿಂದ ಖುಷಿ ಪಟ್ಟಿರುವ ನಿರ್ಮಾಪಕ ತ್ರಿವಿಕ್ರಮ ಸಪಲ್ಯರವರು, ಕಳೆದ ಮೂರು ವರ್ಷಗಳಿಂದ ಚಿತ್ರದ ಈ ಮಟ್ಟದ ಬೆಳವಣಿಗೆಗೆ ಶ್ರಮಿಸುತ್ತಿರುವ ನಿರ್ದೇಶಕ ಸುಧೀರ್ ಅತ್ತಾವರ್ ಗೆ "ಶೋಭ ಡೆವಲಪರ್ಸ್" ನ ಮೂರು ಬೆಡ್ ರೂಮಿನ,ಮಾರ್ಕೆಟ್ ವೇಲ್ಯು ಸುಮಾರು ರೂ1.75 ಕೋಟಿ ಬೆಲೆಬಾಳುವ ಐಷಾರಾಮಿ ಫ್ಲಾಟ್ ನ್ನು ಗಿಫ್ಟ್ ಆಗಿ ನೀಡಿ, ಚಿತ್ರದ ಮೇಲೆ ಮತ್ತು ನಿರ್ದೇಶಕರ ಮೇಲೆ ತಮಗಿರುವ ಅಭಿಮಾನವನ್ನು ತೋರಿಸಿರುತ್ತಾರೆ. ಈಗಾಗಲೇ ಆರು ಭಾಷೆಗಳಲ್ಲಿ ಸಿದ್ಧವಾಗುತ್ತಿರುವ ಈ ಚಿತ್ರಕ್ಕೆ ಅಸ್ಸಾಮಿ, ಚೈನಿಸ್ ಮತ್ತು ಇಂಗ್ಲಿಷ್ ಅವತರಣಿಕೆ ಗಳೂ ಸೇರ್ಪಡೆಗೊಂಡಿದೆ ಎಂಬವಿಚಾರ ಕೂಡಾ ತಿಳಿಸಿದರು. ಶುಕ್ರವಾರ ಹೊಸ ಫ್ಲಾಟ್ ನ ಗ್ರಹ ಪ್ರವೇಶ ನಡೆಯಿತು.ಬಳಿಕ ಪರಮಶ್ರೇಷ್ಠ ಶ್ರೀ ಸತ್ಯನಾರಾಯಣ ದೇವರ ವ್ರತ ಪೂಜೆ ಕೂಡಾ ನಡೆದು, ಭಾನುವಾರದಂದು ಬೆಂಗಳೂರಿಗೆ ತುಸು ಅಪರೂಪ ಅನ್ನಬಹುದಾದ ಕೊರಗಜ್ಜ ದೈವದ ಅಗೆಲು ಸೇವೆಯನ್ನು ಪತ್ರಕರ್ತರ ಮತ್ತು ಬಂದ ಅತಿಥಿಗಳ ಸಮ್ಮುಖದಲ್ಲಿ ನಡೆಸಲಾಯ್ತು.

ಹಿರಿಯ ನಟಿ ಭವ್ಯರವರು ಕೊರಗಜ್ಜ ದೈವದ ಅಗೆಲು ಸೇವೆಗೆ ಇಷ್ಟವಾದ ಕುಚಲಕ್ಕಿ ಅನ್ನ, ಹುರುಳಿ–ಬಸಳೆ ಸಾರು, ಬಂಗುಡೆ ಮೀನಿನ ಗಸಿ,ಮಿಡಿ ಮಾವಿನ ಉಪ್ಪಿನಕಾಯ್,ಕೋಳಿ ಸುಕ್ಕ,ಕಳ್ಳು ಮೊದಲಾದ ಭಕ್ಷ್ಯಗಳನ್ನು ಗೆರಸೆಯಲ್ಲಿಟ್ಟು ಸಮರ್ಪಿಸಿದರು.

ನಿರ್ದೇಶಕರ ಧರ್ಮ ಪತ್ನಿ ರಾಜಶ್ರೀ ಸುಧೀರ್ ಎಲ್ಲಾ ಭಕ್ಷ್ಯಗಳನ್ನು ಅಣಿಗೊಳಿಸಿದರೆ, ನಿರ್ಮಾಪಕ ತ್ರಿವಿಕ್ರಮ ಸಪಲ್ಯ, ಕಾರ್ಯಕಾರಿ ನಿರ್ಮಾಪಕ ವಿದ್ಯಾಧರ್ ಶೆಟ್ಟಿ ಭವ್ಯರಿಗೆ ಸಾಥ್ ನೀಡಿದರು.

ನಂತರ ಪತ್ರಿಕಾಗೋಷ್ಠಿ ಯಲ್ಲಿ ಮಾತನಾಡಿದ ನಟಿ ಭವ್ಯರವರು" ಕೊರಗಜ್ಜ ಸಿನಿಮಾವು ನನ್ನನ್ನು ಹೆಚ್ಚು ದೈವಭಕ್ತಳನ್ನಾಗಿಸಿದೆ.ನಾನು ಈ ಚಿತ್ರದ ಎಲ್ಲಾ ಕಾರ್ಯಕ್ರಮಗಳಿಗೂ ಭಾಗಿಯಾಗುತ್ತಾ ಚಿತ್ರತಂಡದ ಅವಿಭಾಜ್ಯ ಅಂಗ ಎನ್ನುವ ರೀತಿಯಲ್ಲಿ ಜೊತೆಗಿದ್ದೇನೆ.

ಚಿತ್ರದಲ್ಲಿ ನಾನು ಕೊರಗಜ್ಜನಿಗೆ ಪ್ರಪ್ರಥಮವಾಗಿ ಅಗೆಲು ಸೇವೆ ನೀಡುವ ರಾಣಿ "ಪಂಜಂದಾಯಿ" ಪಾತ್ರ ವಹಿಸಿದ್ದೆ. ಈಗ ನಿಜ ಜೀವನದಲ್ಲೂ ನಿರ್ದೇಶಕರಿಗೆ ಗಿಫ್ಟ್ ಆಗಿ ದೊರೆತಿರುವ ಹೊಸ ಫ್ಲಾಟ್ ನಲ್ಲಿ ಕೊರಗಜ್ಜನಿಗೆ ಅಗೆಲು ಸೇವೆ ಮಾಡುವಂತಹ ಸೌಭಾಗ್ಯ ನಿರ್ದೇಶಕರು ನನಗೆ ಮಾಡಿ ಕೊಟ್ಟಿದ್ದಾರೆ. ಬಹುಷಃ ನನ್ನಷ್ಟು ಸೌಭಾಗ್ಯ ವಂತೆ ಈ ಚಿತ್ರದಲ್ಲಿ ಯಾರೂ ಇರಲಿಕ್ಕೆ ಸಾಧ್ಯವಿಲ್ಲ ಎಂದರು.

ನಿರ್ಮಾಪಕ ತ್ರಿವಿಕ್ರಮರವರು ಮಾತನಾಡುತ್ತಾ ಚಿತ್ರವು ಚೈನಿಸ್ ಭಾಷೆಗೂ ಡಬ್ ಆಗುತ್ತಿದೆ ಎನ್ನುವ ಸುದ್ದಿಯನ್ನು ಸಂತೋಷದಿಂದ ಹಂಚಿಕೊಂಡರು. ಹಾಂಕಾಂಗ್ ಮತ್ತು ಬೀಜಿಂಗ್ ನಿಂದ ಹಾಗೂ ಇನ್ನಿತರ ಕಡೆಗಳಿಂದ ಅಂತರಾಷ್ಟ್ರೀಯ ವಿತರಣಾ ಸಂಸ್ಥೆಗಳು ವಿದೇಶಗಳಲ್ಲಿ ಚಿತ್ರ ಬಿಡುಗಡೆ ಗೊಳಿಸಲು ಮುಂದೆ ಬರುತ್ತಿದೆ. ಚಿತ್ರದ ಬಜೆಟ್ 40 ಕೋಟಿ ರುಪಾಯಿ ದಾಟಿದರೂ, ವ್ಯಾವಹಾರಿಕವಾಗಿ ಹೆಚ್ಚು ವಿಶ್ವಾಸ ಮತ್ತು ಖುಷಿ ಹೆಚ್ಚುತ್ತಿರುವ ಈ ಹಿನ್ನೆಯಲ್ಲಿ ಕಳೆದ 3ವರ್ಷಗಳಿಂದ ಈ ಚಿತ್ರಕ್ಕಾಗಿ ಶ್ರಮಿಸುತ್ತಿರುವ ನಿರ್ದೇಶಕರಿಗೆ ಈ ಫ್ಲಾಟನ್ನು ಗಿಫ್ಟ್ ಆಗಿ ನೀಡುತ್ತಿದ್ದೇನೆ– ಎಂದರು. ಕಾರ್ಯಕಾರಿ ನಿರ್ಮಾಪಕ ಹಾಗೂ ಚಿತ್ರದ ಎಡಿಟರ್ ವಿದ್ಯಾಧರ್ ಶೆಟ್ಟಿಯವರುಆಗಸ್ಟ್ ನಲ್ಲಿ ಚಿತ್ರ ಬಿಡುಗಡೆಗೆ ತಯಾರಿ ನಡೆಸಲಾಗುವುದು ಎಂಬಿತ್ಯಾದಿ ಮಾಹಿತಿಗಳನ್ನು ನೀಡಿದರು.

ಬಹುಷಃ 2ಆ ಯಿಂದ 3ಆ ಕನ್ವರ್ಷನ್ ಆಗುತ್ತಿರುವ ಇದೇ ಮೊದಲ ಕನ್ನಡ ಚಿತ್ರ "ಕೊರಗಜ್ಜ".



## ಹೊಂಬಾಳೆ ಮ್ಯೂಸಿಕ್ ನಲ್ಲಿ `ಭಾವಾಂತರ` ದ ಹಾಡುಗಳು

"ವೀರ ಕನ್ನಡಿಗ", " ಮ್ಯಾಜಿಕ್ ಅಜ್ಜಿ" ಸೇರಿದಂತೆ ಮೂವತ್ತಕ್ಕೂ ಅಧಿಕ ಚಿತ್ರಗಳಲ್ಲಿ ಬಾಲನಟನಾಗಿ ಗುರುತಿಸಿಕೊಂಡಿದ್ದ ಕಾರ್ತಿಕ್ ಶರ್ಮ, ಸಂಗೀತ ನಿರ್ದೇಶಕನಾಗಿಯೂ ಜನಪ್ರಿಯ. ನೂರಕ್ಕೂ ಅಧಿಕ ಧಾರಾವಾಹಿ ಹಾಗೂ ಟಿವಿ ಶೋ ಗಳಿಗೂ ಸಂಗೀತ ನೀಡಿರುವ ಕಾರ್ತಿಕ್ ಶರ್ಮ ಪ್ರಸ್ತುತ "ಭಾವಾಂತರ" ಚಿತ್ರದ ಮೂಲಕ ನಿರ್ದೇಶಕನಾಗಿ ಚಿತ್ರರಂಗ ಪ್ರವೇಶಿಸಿದ್ದಾರೆ. ನೈಜ ಘಟನೆ ಆಧರಿಸಿರುವ ಈ ಚಿತ್ರಕ್ಕೆ ಕಾರ್ತಿಕ್ ಶರ್ಮ ಅವರೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಸಂಗೀತ ನಿರ್ದೇಶನದ ಜೊತೆಗೆ ಪ್ರಮುಖಪಾತ್ರದಲ್ಲಿ ಅಭಿನಯ ಕೂಡ ಮಾಡಿದ್ದಾರೆ. ಈಗಾಗಲೇ ಚಿತ್ರೀಕರಣ ಪೂರ್ಣಗೊಳಿಸಿರುವ ಈ ಚಿತ್ರ ತೆರೆಗೆ ಬರಲು ಅಣಿಯಾಗಿದೆ. ಇತ್ತೀಚೆಗೆ ಟೀಸರ್ ಬಿಡುಗಡೆಯಾಗಿದ್ದು, ಆಡಿಯೋ ಹಕ್ಕನ್ನು ಹೊಂಬಾಳೆ ಮ್ಯೂಸಿಕ್ ಸಂಸ್ಥೆ ಪಡೆದುಕೊಂಡಿದೆ.

**ಟೀಸರ್ ನಲ್ಲೇ ಕುತೂಹಲ ಮೂಡಿಸಿದೆ ಕಾರ್ತಿಕ್ ಶರ್ಮ ಚೊಚ್ಚಲ ನಿರ್ದೇಶನದ ಈ ಚಿತ್ರ**

ಬಾಲನಟನಾಗಿ ಹಾಗೂ ಸಂಗೀತ ಸಂಯೋಜಕನಾಗಿ ಪರಿಚಿತನಾಗಿದ್ದ ನಾನು, "ಭಾವಾಂತರ" ಸಿನಿಮಾ ಮೂಲಕ ನಿರ್ದೇಶಕನಾಗಿದ್ದೇನೆ. ನನ್ನ ಆರಂಭದ ದಿನಗಳಿಂದಲೂ ತಾವು ನೀಡುತ್ತಿರುವ ಪ್ರೋತ್ಸಾಹ ಈಗಲೂ ಮುಂದುವರೆಯಲಿ. "ಭಾವಾಂತರ", ಇದೊಂದು ನೈಜ ಘಟನೆ ಆಧಾರಿತ ಚಿತ್ರ. ನನಗೆ ತಿಳಿದ ಹಾಗೆ ದಕ್ಷಿಣ ಭಾರತದಲ್ಲೇ ಈ ರೀತಿಯ ಕಥೆ ಈವರೆಗೂ ಬಂದಿಲ್ಲ. ಅಂತಹ ಅಪರೂಪದ ಕಥಾಹಂದರ ಹೊಂದಿರುವ ಚಿತ್ರವಿದು. ಚಿತ್ರದಲ್ಲಿ ನಾನೇ ಸಂಗೀತ ಸಂಯೋಜಿಸಿರುವ ಐದು ಹಾಡುಗಳಿದ್ದು, ಹೆಸರಾಂತ ಹೊಂಬಾಳೆ ಮ್ಯೂಸಿಕ್ ಸಂಸ್ಥೆ ಆಡಿಯೋ ಹಕ್ಕು ಪಡೆದುಕೊಂಡಿದೆ. ಟೀಸರ್ ಕೂಡ ಬಿಡುಗಡೆಯಾಗಿದ್ದು, ನಿರೀಕ್ಷೆಗೂ ಮೀರಿ ಮೆಚ್ಚುಗೆ ಪಡೆದುಕೊಂಡಿದೆ. ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದ್ದು, ಉಡುಪಿ, ಬೆಂಗಳೂರು ಹಾಗೂ ತಮಿಳುನಾಡಿನಲ್ಲಿ ಚಿತ್ರೀಕರಣ ನಡೆದಿದೆ. ಚಿತ್ರ ತೆರೆಗೆ ಬರಲು ಸಿದ್ದವಾಗಿದ್ದು, ಆದಷ್ಟು ಬೇಗ ಬಿಡುಗಡೆಯಾಗಲಿದೆ. ನನ್ನ ಜೊತೆಗೆ ತನ್ವಿ ರಾವ್ ಅವರು ಸಹ ಪ್ರಮುಖಪಾತ್ರದಲ್ಲಿ ಅಭಿನಯಿಸಿದ್ದಾರೆ. ಪ್ರಣವ್ ಶ್ರೀಧರ್, ಶ್ರೀವೈಷ್ಣವ್, ವೇದ ರಾವ್, ಭಾನು ಮುಂತಾದವರು ತಾರಾಬಳಗದಲ್ಲಿದ್ದಾರೆ. ಕಿಕ್ ಮೀಡಿಯಾ ಸಂಸ್ಥೆ ನಿರ್ಮಾಣ ಮಾಡಿರುವ ಈ ಚಿತ್ರಕ್ಕೆ ಸಾಗರ್ ಅತ್ತ್ಡ್ಕರ್ ಛಾಯಾಗ್ರಹಣ ಹಾಗೂ ಆಶೀಷ್ ಹುಲಕುಂದ್ ಸಂಕಲನವಿದೆ ಎಂದು ನಿರ್ದೇಶಕ ಹಾಗೂ ನಟ ಕಾರ್ತಿಕ್ ಶರ್ಮ ತಿಳಿಸಿದ್ದಾರೆ.



## ರೈತರ ಮಕ್ಕಳಿಗೆ ಹೆಣ್ಣು ಕೊಡಿ ಟ್ರೇಲರ್ ಮತ್ತು ಹಾಡುಗಳು ಬಿಡುಗಡೆ

ರೈತರ ಮಕ್ಕಳಿಗೆ ಹೆಣ್ಣು ಕೊಡಿ? ಚಿತ್ರದ ಟ್ರೇಲರ್ ಮತ್ತು ನಾಲ್ಕು ಹಾಡುಗಳ ಬಿಡುಗಡೆ ಕಾರ್ಯಕ್ರಮ ಶ್ರೀ ರೇಣುಕಾಂಬ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು. ಕೆಂಪರಾಮ್ ಹೆಡಿಯಾಲ ಚಿತ್ರಕ್ಕೆ ಕಥೆ,ಚಿತ್ರಕಥೆ, ಸಂಭಾಷಣೆ, ಸಾಹಿತ್ಯ, ನಿರ್ದೇಶನ ಮಾಡುವ ಜತೆಗೆ ಮೆಲ್ಲುಲಿಗಾನ ಪ್ರೊಡಕ್ಷನ್ಸ್ ಅಡಿಯಲ್ಲಿ ನಿರ್ಮಾಣ ಮಾಡಿರುವುದು ಹೊಸ ಅನುಭವ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು, ನಾನು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಇಲಾಖೆಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುತ್ತೇನೆ. ಮುಂದೆ ಸಿನಿಮಾ ಮಾಡಬೇಕೆಂದು ನಿರ್ಧರಿಸಿದಾಗ ರೈತರ ಕಾಳಜಿ ಬಗ್ಗೆ ಯೋಚಿಸಿದ್ದೆ ಚಿತ್ರವು ಇಲ್ಲಿಯವರೆಗೂ ತಂದು ನಿಲ್ಲಿಸಿದೆ.

ಇಲ್ಲಿನ ನೆಲದ ಮಣ್ಣಿನ ಜೀವನಗಾಥೆಯನ್ನು ಎಳೆಎಳೆಯಾಗಿ ಹಳ್ಳಿಸೊಗಡಿನ ಸನ್ನಿವೇಶಗಳನ್ನು ತೋರಿಸಲಾಗಿದೆ. ಬದಲಾದ ಪರಿಸ್ಥಿತಿಯಲ್ಲಿ ರೈತರ ಮಕ್ಕಳಿಗೆ ಹೆಣ್ಣು ಸಿಗುವುದಿಲ್ಲ ರಾಜ್ಯವ್ಯಾಪ್ತಿ ಮಾರ್ದನಿಸಿ ಅವರ ಬದುಕಿನಲ್ಲಿ ತಲ್ಲಣವನ್ನು ಉಂಟು ಮಾಡುತ್ತಿದೆ. ಚಿತ್ರವು ವಿಭಿನ್ನ ಹಾಗೂ ವಿಶಿಷ್ಟವಾದ ಅನುಭವಗಳನ್ನು ತೋರಿಸಿಕೊಡುತ್ತದೆ. ಅವರ ಬದುಕಿನ ಸೂಕ್ಷತೆಗಳು, ಅಲ್ಲಿನ ಗಂಭೀರ ಅಂಶಗಳು ಗಮನ ಸೆಳೆದು, ಬುದ್ದಿ, ಭಾವ ಚಿತ್ತ ಜಾಗೃತಗೊಳ್ಳುವಂತೆ ಮಾಡುತ್ತಾ, ನೋಡುಗರ ಮನಸ್ಸನ್ನು ಒಳಹೊಕ್ಕಿಸಿ, ಸನ್ನಿವೇಶಗಳಲ್ಲಿ ಕಾಣುವ ಪಾತ್ರಗಳು ನಮ್ಮ ಜೀವನದ ಪ್ರತಿಬಿಂಬವಾಗುವಂತೆ ಮಾಡುತ್ತದೆ. ಗೆಲ್ಲುತ್ತಾ ಹೋಗುವವರು ಇತಿಹಾಸ ಸೃಷ್ಟಿಸುತ್ತಾರೆ. ಆದರೆ ಸೋತು ಗೆಲ್ಲುವವರು ಇತಿಹಾಸವನ್ನು ಬದಲಾಯಿಸುತ್ತಾರೆ ಎನ್ನುವಂತ ತೂಕದ ಸಂದೇಶವನ್ನು ಹೇಳಲಾಗಿದೆ. ಮಾಧ್ಯಮದ ಸಹಕಾರಬೇಕೆಂದು ಕೆಂಪರಾಮ್ ಹೆಡಿಯಾಲ ಕೋರಿಕೊಂಡರು.

ಜಗದೀಶ್ ಮುಕಿ ನಾಯಕ. ದಿವ್ಯಾಶ್ರೀ ನಾಯಕಿ. ಉಳಿದಂತೆ ಜೈ ಅಮೋಘ್‌ದಾಸ್, ಅಗಸ್ತ್ಯ ಪ್ರೇಮ್, ಸಂಗನಗೌಡ, ಸಂತೋಷ್ ಜೋಗುಳ್, ಅಶ್ವಿನಿ ಮುಂತಾದವರು ನಟಿಸಿದ್ದಾರೆ.

ಸಂಗೀತ–ಛಾಯಾಗ್ರಹಣ–ಸಂಕಲನ ರೋಹನ್.ಎಸ್.ದೇಸಾಯಿ, ಸಾಹಸ ಸಂತೋಷ್ ರಾಥೋಡ್, ನೃತ್ಯ ಅಕುಲ್ ಮಾಸ್ಟರ್–ಅಜಯ್ ಜೈಕೃಷ್ಣ–ಸಾಕ್ಷಿ ಅವರದಾಗಿದೆ. ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದೆ. ಅಂದ ಹಾಗೆ ಚಿತ್ರವು ಇದೇ ತಿಂಗಳು ತೆರೆ ಕಾಣಲಿದೆ.



## 'ಕಲರ್ಸ್ ಕನ್ನಡ' 'ಅಗ್ನಿಸಾಕ್ಷಿ'!



'ಕಲರ್ಸ್ ಕನ್ನಡ' ವಾಹಿನಿಯಲ್ಲಿ ಜೂನ್ 8ರಿಂದ ಸಂಜೆ 7:00 ಗಂಟೆಗೆ 'ಅಗ್ನಿಸಾಕ್ಷಿ' ಪ್ರಸಾರ ಆಗಲಿದೆ.

ಇದು ಹಳೆಯ ಧಾರಾವಾಹಿಯ ಮುಂದುವರಿದ ಭಾಗವಲ್ಲ; ಬದಲಿಗೆ ಇಂದಿನ ತಲೆಮಾರಿನ ಯುವಮನಸ್ಸುಗಳ ಅಹಂಕಾರ ಮತ್ತು ಸ್ವಾಭಿಮಾನದ ನಡುವೆ ನಡೆಯುವ ಹೈ–ವೋಲ್ಟೇಜ್ ಕಥೆಯಾಗಿದೆ.

"ಇಬ್ಬರು ಕಣ್ಣುಂದೆ ಬಂದ್ರೆ ಸಹಿಸೋಕಾಗಲ್ಲ, ಕಾಣದೇ ಹೋದ್ರೆ ಬದುಕೋಕೇ ಆಗಲ್ಲ!" ಎಂಬ ವಿಶಿಷ್ಟ ಪ್ರೇಮಬಂಧದ ಎಳೆ ಈ ಕಥೆಯಲ್ಲಿದೆ.

ಈ ಬಾರಿಯ 'ಅಗ್ನಿಸಾಕ್ಷಿ' ಸಂಪೂರ್ಣವಾಗಿ ವಿಭಿನ್ನ ವ್ಯಕ್ತಿತ್ವಗಳ ಎರಡು ಧ್ರುವಗಳ ನಡುವಿನ ಸಂಘರ್ಷ. ಪೋಸ್ಟರ್‌ಗಳಲ್ಲಿ ಅನಾವರಣಗೊಂಡಿರುವಂತೆ ಪಾತ್ರಗಳ ಧೀಮಂತಿಕೆ ಹೀಗಿದೆ:

- **ಅಗ್ನಿ (ನಾಯಕ):** ಅವನು ಎಲ್ಲವನ್ನೂ ಧ್ವಂಸ ಮಾಡೋ ಬಿರುಗಾಳಿ ಅಷ್ಟೇ ಅಲ್ಲ, ತನ್ನ ಅಹಂಗೆ ಎದುರು ನಿಂತರೆ 'ಅವನು ಎಲ್ಲವನ್ನೂ ಸುಟ್ಟು ಹಾಕೋ ಬೆಂಕಿ' ಸಂಪತ್ತು ಮತ್ತು ವಿಪರೀತ ಗರ್ವದ ಹಿನ್ನೆಲೆಯುಳ್ಳ ಈ ಹಠಮಾರಿ ಉದ್ಯಮಿಯ ಪಾತ್ರಕ್ಕೆ ಗಾಯಕ ಹಾಗೂ ನಟ ಶಮಂತ್ ಬ್ರೋ ಗೌಡ ಜೀವ ತುಂಬಿದ್ದಾರೆ.
- **ಸಾಕ್ಷಿ (ನಾಯಕಿ):** ಅವಳು ಎಲ್ಲವನ್ನೂ ತಂಪಾಗಿಸೋ ತಂಗಾಳಿ ಆದರೆ ಅನ್ಯಾಯದ ವಿರುದ್ಧ ನಿಲ್ಲುವಾಗ, ಕತ್ತಲ ಹಾದಿಗೆ 'ಅವಳು ದಾರಿ ತೋರಿಸೋ ಬೆಳಕು'. ಎಷ್ಟೇ ಕಷ್ಟ ಬಂದರೂ ತನ್ನ ಆತ್ಮಗೌರವವನ್ನು ಬಿಟ್ಟುಕೊಡದ ಈ ಧೀಮಂತ ಯುವತಿಯ ಪಾತ್ರದಲ್ಲಿ ನಟಿ ವರ್ಷಿಣಿ ಗೌಡ ನಟಿಸುತ್ತಿದ್ದಾರೆ.

ಹಸೆಮಣೆಯಲ್ಲಿ ಇವರಿಬ್ಬರ ಹಣೆಬರಹ ಹೇಗೆ ಒಂದಾಗಲಿದೆ, ಈ ಬೆಂಕಿ ಮತ್ತು ತಂಗಾಳಿಯ ನಡುವಿನ ಅಹಂ ಹಾಗೂ ಆದರ್ಶಗಳ ಹೋರಾಟ ಎತ್ತ ಸಾಗಲಿದೆ ಎನ್ನುವುದೇ ಇಡೀ ಸರಣಿಯ ಜೀವಾಳ.

**ತಾಂತ್ರಿಕ ವರ್ಗ ಮತ್ತು ಪ್ರಸಾರದ ವಿವರ:** ಈ ಹಿಂದಿನ ಸೂಪರ್ ಹಿಟ್ ?ಅಗ್ನಿಸಾಕ್ಷಿ ? ಧಾರಾವಾಹಿಯ ಬರಹಗಾರರಾದ ಹ್ಯಾರಿಸ್ ಅವರೇ ಈ ಕಥೆಯನ್ನು ಬರೆಯುತ್ತಿದ್ದಾರೆ. ಇನ್ನು ಈ ಧಾರಾವಾಹಿಯು ಅತ್ಯುನ್ನತ ಮೇಕಿಂಗ್ ಹಾಗೂ ಶ್ರೀಮಂತ ದೃಶ್ಯವೈಭವದಿಂದ ಕೂಡಿರಲಿದೆ.



**ಪದ್ಮನಾಭ ಅಂಡ್ ಫ್ಯಾಮಿಲಿ.. ಚಿತ್ರದಲ್ಲಿ ಮಾನಸಿ ಸುಧೀರ್**

## ಟೀಸರ್ ಹಾಗೂ ಹಾಡುಗಳಲ್ಲಿ 'ನನ್ನ ಮಗಳೇ ಸೂಪರ್ ಸ್ಟಾರ್'

ಹನಿ ಫಿಲಂಸ್ ಲಾಂಛನದಲ್ಲಿ ಎನ್ ಎ ಶಿವಕುಮಾರ್(ಕುಮಾರ್ ನೊಣವಿನಕೆರೆ) ನಿರ್ಮಿಸಿರುವ, ಆಯುರ್ ನಿರ್ದೇಶಿಸಿರುವ ಹಾಗೂ ಖಾಸಗಿ ವಾಹಿನಿಯೊಂದರಲ್ಲಿ ಪ್ರಸಾರವಾಗಿದ್ದ ಜನಪ್ರಿಯ ಧಾರಾವಾಹಿ "ಸೀತಾರಾಮ" ಸೀರಿಯಲ್ ನ ಮೂಲಕ ನೋಡುಗರ ಮನ ಗೆದ್ದಿದ್ದ ಬೇಬಿ ರೀತು ಸಿಂಗ್ ಪ್ರಮುಖಪಾತ್ರದಲ್ಲಿ ನಟಿಸಿರುವ ಮತ್ತು "ಭಜರಂಗಿ 2" ಚಿತ್ರದ ಖ್ಯಾತಿಯ ಚೆಲುವರಾಜ್ ಹಾಗು ಸಂಭ್ರಮಶ್ರೀ ನಾಯಕ – ನಾಯಕಿಯಾಗಿ ಅಭಿನಯಿಸಿರುವ "ನನ್ನ ಮಗಳೇ ಸೂಪರ್ ಸ್ಟಾರ್" ಚಿತ್ರದ ಟೀಸರ್ ಹಾಗೂ ಹಾಡುಗಳ ಅನಾವರಣ ಸಮಾರಂಭ ಇತ್ತೀಚೆಗೆ ನೆರವೇರಿತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಡಾ॥ಜಯಮಾಲ, ಕನ್ನಡ ನಿರ್ಮಾಪಕರ ಸಂಘದ ಅಧ್ಯಕ್ಷರಾದ ಎಂ.ಜಿ.ರಾಮಮೂರ್ತಿ, ಸಿರಿ ಮ್ಯೂಸಿಕ್ ನ ಸುರೇಶ್ ಚಿಕ್ಕಣ್ಣ ಟೀಸರ್ ಅನಾವರಣ ಮಾಡಿದರು. ವಾಣಿಜ್ಯ ಮಂಡಳಿ ಉಪಾಧ್ಯಕ್ಷರಾದ ಸುಂದರರಾಜ್, ಸಾಹಿತಿ ಬಿ.ಆರ್ ಲಕ್ಷ್ಮಣರಾವ್ ಮತ್ತು ಪರಿಸರ ಪ್ರೇಮಿ ರೇವತಿ ಕಾಮತ್ ಹಾಡುಗಳನ್ನು ಬಿಡುಗಡೆಗೊಳಿಸಿದರು. ಹಾಡುಗಳು ಸಿರಿ ಮ್ಯೂಸಿಕ್ ನಲ್ಲಿ ಲಭ್ಯವಿದೆ. ಟೀಸರ್ ಹಾಗೂ ಹಾಡುಗಳನ್ನು ಬಿಡುಗಡೆ ಮಾಡಿದ ನಂತರ ಮಾತನಾಡಿದ ಗಣ್ಯರು ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.


ನಾನು ಮೂಲತಃ ಸಂಕಲನಕಾರ. ನಿರ್ದೇಶಕನಾಗಿ ಇದು ಮೊದಲ ಚಿತ್ರ. ಕಥೆ, ಚಿತ್ರಕಥೆ ಹಾಗೂ ಸಂಭಾಷಣೆಯನ್ನು ನಾನೇ ಬರೆದಿದ್ದೇನೆ. ಅಪ್ಪ – ಅಮ್ಮನಿಗೆ ತಮ್ಮ ಮಕ್ಕಳು ಸೂಪರ್ ಸ್ಟಾರ್ ಆಗಬೇಕೆಂಬ ಕನಸು. ಜೊತೆಗೆ ತಾವು ಅಂದುಕೊಂಡಂತೆ ಅವರು ಇರಬೇಕು ಎಂಬ ಆಸೆ. ಅದರಲ್ಲೂ ಈ ಸ್ವಭಾವ ತಾಯಿಗೆ ಸ್ವಲ್ಪ ಹೆಚ್ಚು. ಆದರೆ ಮಕ್ಕಳಿಗೂ ಅವರದೇ ಆಸೆ ಇರುತ್ತದೆ. ನಿಮ್ಮ ಆಸೆಯನ್ನು ಅವರ ಮೇಲೆ ಬಲವಂತವಾಗಿ ಅವರ ಮೇಲೆ ಹೇರಬೇಡಿ. ಅದರಿಂದ ಮಕ್ಕಳು ಏನೆಲ್ಲಾ ತೊಂದರೆ ಅನುಭವಿಸುತ್ತಾರೆ ಎಂಬ ಅಂಶವೇ ಈ ಚಿತ್ರದ ಕಥಾಹಂದರ. ಚಿತ್ರದಲ್ಲಿ ಮೂರು ಹಾಡುಗಳಿದ್ದು, ಬಿ.ಆರ್.ಲಕ್ಷ್ಮಣರಾವ್ ಅವರೆ ಮೂರು ಹಾಡುಗಳನ್ನು ಬರೆದಿದ್ದಾರೆ. ಕೆವಿನ್ ಸಂಗೀತ ನೀಡಿದ್ದಾರೆ ಎಂದು ನಿರ್ದೇಶಕ ಆಯುರ್ ತಿಳಿಸಿದರು.

ಹದಿನೈದು ವರ್ಷಗಳ ಹಿಂದೆ ನಾನು "ಮಹಾಭಾರತ" ಧಾರಾವಾಹಿಯಲ್ಲಿ ದುರ್ಯೋಧನನ ಪಾತ್ರ ಮಾಡಿದ್ದೆ. ಆಗ ನನಗೆ ಮೇಕಪ್ ಮಾಡಿದ್ದೆ ಕುಮಾರ್ ಅವರು. ಈವರೆಗೂ ವಿಲನ್ ಪಾತ್ರಗಳಲ್ಲಿ ಗುರುತಿಸಿಕೊಳ್ಳುತ್ತಿದ್ದ ನಾನು ಈ ಚಿತ್ರದ ಮೂಲಕ ನಾಯಕನಾಗಿದ್ದೇನೆ ಹಾಗೂ ಈವರೆಗೂ ಮಾಡಿರದ ಪಾತ್ರ ಮಾಡಿದ್ದೇನೆ ಎಂದರು ನಟ ಚಲುವರಾಜ್.


ನಿರ್ದೇಶಕರು ಹೇಳಿದ ಹಾಗೆ ಪೋಷಕರು ಹಾಗೂ ಮಕ್ಕಳು ನೋಡಲೇ ಬೇಕಾದ ಚಿತ್ರವಿದು. ನಾನು ಈ ಚಿತ್ರದ ನಾಯಕಿ. ಬೇಬಿ ರೀತುಸಿಂಗ್ ತಾಯಿಯಾಗಿ ಅಭಿನಯಿಸಿದ್ದೇನೆ ಎಂದು ನಟಿ ಸಂಭ್ರಮಶ್ರೀ ಹೇಳಿದರು.


ನಮ್ಮ ಹನಿ ಫಿಲಂ ಮೇಕರ್ಸ್ ನಿರ್ಮಾಣದ ಮೂರನೇ ಚಿತ್ರವಿದು. ಸಮಾಜಕ್ಕೆ ಉತ್ತಮ ಸಂದೇಶ ನೀಡಲು ಹೊರಟಿರುವ ಈ ಚಿತ್ರದ ಟೀಸರ್ ಹಾಗೂ ಹಾಡುಗಳನ್ನು ಬಿಡುಗಡೆ ಮಾಡಿಕೊಟ್ಟ ಗಣ್ಯರಿಗೆ ಧನ್ಯವಾದ. ಈಗಾಗಲೇ ಚಿತ್ರೀಕರಣ ಮುಗಿಸಿರುವ ಈ ಚಿತ್ರವನ್ನು ಮುಂದಿನ ತಿಂಗಳು ಬಿಡುಗಡೆ ಮಾಡುವ ಸಿದ್ದತೆ ನಡೆಸಿದ್ದೇನೆ ಎಂದರು ನಿರ್ಮಾಪಕ ಎನ್ ಎ ಶಿವಕುಮಾರ್.

ಸಂಗೀತ ನಿರ್ದೇಶಕ ಕೆವಿನ್ ಹಾಡುಗಳ ಬಗ್ಗೆ ವಿವರಣೆ ನೀಡಿದರು. ನಾನು ಈ ಚಿತ್ರದ ಮೂರು ಹಾಡುಗಳನ್ನು ಬರೆದಿದ್ದೇನೆ. ಕೆವಿನ್ ಉತ್ತಮವಾಗಿ ಸಂಗೀತ ಸಂಯೋಜನೆ ಮಾಡಿದ್ದಾರೆ ಎಂದು ಸಾಹಿತಿ ಬಿ.ಆರ್ ಲಕ್ಷ್ಮಣ್ ರಾವ್ ಹೇಳಿದರು. ಛಾಯಾಗ್ರಾಹಕರಾದ ರಾಘವೇಂದ್ರ ರೆಡ್ಡಿ ಇದ್ದರು.



**ಧರ್ಮಸ್ಥಳದಲ್ಲಿ ನಡೆದ ಸಮಾರಂಭವೊಂದರಲ್ಲಿ ಪಾಲ್ಗೊಂಡ ಉಪರಾಷ್ಟ್ರಪತಿ ಗಳೊಂದಿಗೆ ಹಾಗೂ ರಾಜ್ಯಪಾಲರೊಂದಿಗೆ ಕಲಾವಿದ ರಮೇಶ್ ಅರವಿಂದ್ ದಂಪತಿ**






Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,